23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 290 | ನವದೆಹಲಿ | ಬೆಲೆ ₹10 | ಏಪ್ರಿಲ್ 26 2026, ಭಾನುವಾರ

|| ದಯೆಯೇ ಧರ್ಮದ ಮೂಲವಯ್ಯಾ ||

## ಬಸವ ವೇದಿಕೆ(ರಿ), ಬೆಂಗಳೂರು

ಸ್ಥಾಪನೆ: 1991



ಶರಣರ ಬರವೆಮಗೆ ಪ್ರಾಣ ಜೀವಾಳವಯ್ಯಾ

# ಬಸವ ಜಯಂತಿ

## ಬಸವಶ್ರೀ ಮತ್ತು ವಚನ ಸಾಹಿತ್ಯಶ್ರೀ


### ಪ್ರಶಸ್ತಿ ಪ್ರದಾನ ಸಮಾರಂಭ-2026

ದಿನಾಂಕ: 27ನೇ ಏಪ್ರಿಲ್ 2026, ಸೋಮವಾರ
ಸಂಜೆ 5.30 ಘಂಟೆಗೆ, ಸ್ಥಳ: ರವೀಂದ್ರ ಕಲಾಕ್ಷೇತ್ರ, ಬೆಂಗಳೂರು




**ದಿವ್ಯ ಸಾನಿಧ್ಯ**

ಪರಮ ಪೂಜ್ಯ ಜಗದ್ಗುರುಗಳಾದ
ಶ್ರೀ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರು
ಶ್ರೀ ಸುತ್ತೂರು ವೀರಸಿಂಹಾಸನ ಸಂಸ್ಥಾನ ಮಠ, ಮೈಸೂರು



'ಬಸವಶ್ರೀ' ಪ್ರಶಸ್ತಿ ಪುರಸ್ಕೃತರು
ಸನ್ಮಾನ್ಯಶ್ರೀ ಎಚ್.ಡಿ.ದೇವೇಗೌಡರವರು
ಸಂಸದರು ಮತ್ತು ಭಾರತದ ಮಾಜಿ ಪ್ರಧಾನಮಂತ್ರಿಗಳು



ಅಧ್ಯಕ್ಷತೆ ಮತ್ತು 'ಬಸವಶ್ರೀ' ಪ್ರಶಸ್ತಿ ಪ್ರದಾನ
ಸನ್ಮಾನ್ಯಶ್ರೀ ಬಸವರಾಜ ಎಸ್.ಬೊಮ್ಮಾಯಿ
ಲೋಕಸಭಾ ಸದಸ್ಯರು ಮತ್ತು ನಿಕಟಪೂರ್ವ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ



ಉದ್ಘಾಟನೆ
ಸನ್ಮಾನ್ಯ ಶ್ರೀ ವಿ.ಸೋಮಣ್ಣ
ಜಲಶಕ್ತಿ ಮತ್ತು ರೈಲ್ವೇಖಾತೆ ರಾಜ್ಯ ಸಚಿವರು ಭಾರತ ಸರ್ಕಾರ

**ಮುಖ್ಯ ಅತಿಥಿಗಳು**



'ವಚನ ಸಾಹಿತ್ಯಶ್ರೀ' ಪ್ರಶಸ್ತಿ ಪ್ರದಾನ
ಸನ್ಮಾನ್ಯಶ್ರೀ ಎಚ್.ಕೆ.ಪಾಟೀಲ್
ಮಾನ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು, ಕರ್ನಾಟಕ ಸರ್ಕಾರ

**ಮುಖ್ಯ ಅತಿಥಿಗಳು**



"ಬಸವಜ್ಯೋತಿ' ವಿಶೇಷ ಸಂಚಿಕೆ ಬಿಡುಗಡೆ
ಶ್ರೀಮತಿ ಲಕ್ಷ್ಮೀ ಹೆಬ್ಬಾಳ್ಕರ್
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು, ಕರ್ನಾಟಕ ಸರ್ಕಾರ



"ವಚನ ಸಾಹಿತ್ಯಶ್ರೀ' ಪ್ರಶಸ್ತಿ ಪುರಸ್ಕೃತರು
ಡಾ.ಗುರುರಾಜ ಕರ್ಜಗಿ
ಖ್ಯಾತ ಶಿಕ್ಷಣ ತಜ್ಞರು ಮತ್ತು ಹಿರಿಯ ಚಿಂತಕರು



ಸ್ವಾಗತ ಮತ್ತು ಪ್ರಾಸ್ತಾವಿಕ ನುಡಿ
ಡಾ.ಸಿ.ಸೋಮಶೇಖರ, ಭಾ.ಆ.ಸೇ.(ನಿ)
ಅಧ್ಯಕ್ಷರು, ಬಸವ ವೇದಿಕೆ ಹಾಗೂ ಅಧ್ಯಕ್ಷರು, ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು, ಬೆಂಗಳೂರು

**ತಮಗೆ ಆದರದ ಸುಸ್ವಾಗತ: ಡಾ.ಸಿ.ಸೋಮಶೇಖರ, ಭಾ.ಆ.ಸೇ..(ನಿ) ಅಧ್ಯಕ್ಷರು, ಬಸವ ವೇದಿಕೆ, ಬೆಂಗಳೂರು**

ಸಂಜೆ 4.30 ಗಂಟೆಗೆ ವಚನ ಗಾಯನ : ಶ್ರೀಮತಿ ಪಾವನಿ (ಪ್ರಖ್ಯಾತ ಗಾಯಕಿ)
ನಿರೂಪಣೆ: ಶ್ರೀಮತಿ ದಿವ್ಯಾ ಆಲೂರು, (ಪ್ರಖ್ಯಾತ ನಿರೂಪಕಿ)

## ನಿತ್ಯ ಪಂಚಾಂಗ 26.04.2026 ಭಾನುವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ–ವಸಂತ ಋತು, ಚಾಂದ್ರಮಾನ, ಚೈತ್ರ–ವೈಶಾಖ ಮಾಸ

ವೈಶಾಖ ಶುದ್ಧ, ದಶಮಿ, ಮಖ ನಕ್ಷತ್ರ, ವಾಸವಿ/ಕನ್ಯಕಾಪರಮೇಶ್ವರೀ/ನಿಮಿಷಾಂಭ ಜಯಂತಿ, ಬೆಂಗಳೂರು ಕೋಟೆ ವೆಂಕಟರಮಣ ರಥ, ಗದಗ ಲಕ್ಷ್ಮೇಶ್ವರ ಸೋಮೇಶ್ವರ ರಥ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 –12.00 | 1.30 – 3.00 |
| ಮಂಗಳ | 3.00 – 4.30 | 9.00 –10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 –12.00 |
| ಗುರು | 1.30 – 3.00 | 6.00 – 7.30 | 9.00 –10.30 |
| ಶುಕ್ರ | 10.30 –12.00 | 3.00 – 4.30 | 7.30 – 9.00 |
| ಶನಿ | 9.00 –10.30 | 1.30 – 3.00 | 6.00 – 7.30 |

# ನಶಾಮುಕ್ತ ಭಾರತ–ಯುವ ಶುದ್ಧ ಅಭಿಯಾನ ವಾಕಥಾನ್ ಕಾರ್ಯಕ್ರಮ




**ತುಮಕೂರು, ಏ.25:** ತುಮಕೂರಿನ ಸರ್ಕಾರಿ ಜ್ಯೂನಿಯರ್ ಕಾಲೇಜು ಮೈದಾನದಲ್ಲಿಂದು ಹಮ್ಮಿಕೊಳ್ಳಲಾಗಿದ್ದ ನಶಾ ಮುಕ್ತ ಭಾರತ ಹಾಗೂ ಯುವ ಶುದ್ಧ ಅಭಿಯಾನ ವಾಕಥಾನ್ ಕಾರ್ಯಕ್ರಮದಲ್ಲಿ ರೈಲ್ವೇ ರಾಜ್ಯ ಸಚಿವ ವಿ. ಸೋಮಣ್ಣ ಪಾಲ್ಗೊಂಡು, ನಶಾಮುಕ್ತ ಕ್ಯಾಂಪಸ್, ಆತ್ಮಹತ್ಯೆ ಮುಕ್ತ ಕ್ಯಾಂಪಸ್ ಹಾಗೂ ಅಂಗಾಂಗ ದಾನ ಅಭಿಯಾನ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಇದೇ ವೇಳೆ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಅವರು, ದೇಶದ ಯುವ ಸಮುದಾಯ ವಿಶೇಷವಾಗಿ ಕಾಲೇಜಿನ ಕ್ಯಾಂಪಸ್‌ಗಳಲ್ಲಿ ಅಧ್ಯಯನ ನಡೆಸುತ್ತಿರುವ ಯುವ ಸಮುದಾಯ ನಶಾ ಪದಾರ್ಥಗಳಿಂದ ಪೂರ್ಣ ಮುಕ್ತರಾಗಬೇಕು. ನಶಾ ಪದಾರ್ಥಗಳ ಸೇವನೆಯು ಕೇವಲ ಯುವಕರ ಭವಿಷ್ಯ, ಅವರ ಕುಟುಂಬದ ಭವಿಷ್ಯ ಮಾತ್ರವಲ್ಲ, ಇಡೀ ದೇಶದ ಭವಿಷ್ಯವನ್ನೇ ನಾಶಪಡಿಸುತ್ತದೆ. ಯುವಕರು ಸಾಧ್ಯವಾದಷ್ಟು ದೈಹಿಕ ಸ್ವಾಸ್ಥ್ಯದೆಡೆಗೆ ಗಮನಹರಿಸುವ ನಿಟ್ಟಿನಲ್ಲಿ, ಕ್ರೀಡಾ ಚಟುವಟಿಕೆಗಳು, ಯೋಗ ಹಾಗೂ ಪ್ರಾಣಾಯಾಮದಂತಹ ಚಟುವಟಿಕೆಗಳನ್ನು ತಮ್ಮ ದೈನಂದಿನ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಕೋರಿದರು.

ಈ ಸಂದರ್ಭದಲ್ಲಿ, ಸುಕ್ಷೇತ್ರ ಸಿದ್ದಗಂಗಾ ಮಠದ ಕಿರಿಯ ಶ್ರೀಗಳಾದ ಪೂಜ್ಯ ಶಿವಸಿದ್ದೇಶ್ವರ ಸ್ವಾಮೀಜಿ, ಶಾಸಕ ಜ್ಯೋತಿ ಗಣೇಶ್, ಡಾ.ಎಚ್.ಡಿ ರಂಗನಾಥ್, ರಾ.ಗಾ.ಆ.ವಿ.ವಿ ಕುಲಪತಿ ಡಾ. ಭಗವಾನ್ ಬಿ.ಸಿ ಮೊದಲಾದ ಗಣ್ಯರು ಹಾಜರಿದ್ದರು.



ತುಮಕೂರಿನಲ್ಲಿ ಶನಿವಾರ ಕ್ಯಾತಸಂದ್ರ ರೈಲು ನಿಲ್ದಾಣದ ಬಳಿಯ ಹಳೇ ಎಲ್.ಸಿ. ಗೇಟ್ ನಂ. 36ರಲ್ಲಿ ಮತ್ತು ತುಮಕೂರಿನ ಮಾರುತಿನಗರದಲ್ಲಿ ಕ್ಯಾತಸಂದ್ರ ಮತ್ತು ತುಮಕೂರು ನಿಲ್ದಾಣಗಳ ನಡುವೆ ಪಾದಚಾರಿ ಸುರಂಗಮಾರ್ಗಗಳ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಲಾಯಿತು. ಶಾಸಕ ಸುರೇಶ್‌ಗೌಡ, ಜಿ.ಬಿ.ಜ್ಯೋತಿ ಗಣೇಶ್ ಮತ್ತು ಎಡಿಆರ್ ಎಂ ಪ್ರವೀಣ ಕಾತರಕಿ, ಭಾಜಪ ಜಿಲ್ಲಾಧ್ಯಕ್ಷ ರವಿ ಹೆಬ್ಬಾಕ, ಬಸವೇಶ್ವರ ಬಡಾವಣೆ ಸೇವಾ ಸಮಿತಿಯ ಅಧ್ಯಕ್ಷ ಪರಶುರಾಮಯ್ಯ ಮೊದಲಾದ ಮುಖಂಡರು ಪಾಲ್ಗೊಂಡಿದ್ದರು.

# ಕೆಯುಡಬ್ಲ್ಯೂಜೆ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

**ಬೆಂಗಳೂರು, ಏ.25:** ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಶೇ. 90ಕ್ಕೂ ಹೆಚ್ಚು ಅಂಕಗಳಿಸಿದ ಪತ್ರಕರ್ತರ ಮಕ್ಕಳ ಪ್ರತಿಭಾ ಪುರಸ್ಕಾರಕ್ಕಾಗಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ )ಅರ್ಜಿ ಆಹ್ವಾನಿಸಿದೆ ಎಂದು ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ತಿಳಿಸಿದ್ದಾರೆ. ವಿದ್ಯಾರ್ಥಿಯ ಅಂಕಪಟ್ಟಿಯ ನಕಲನ್ನು ಶಾಲಾ/ ಕಾಲೇಜಿನ ಮುಖ್ಯಸ್ಥರಿಂದ ದೃಢೀಕರಿಸಿರಬೇಕು. ಸಂಘದ ಸದಸ್ಯರ ಆಧಾರ್ ಮತ್ತು ವಿದ್ಯಾರ್ಥಿಯ ಆಧಾರ್ ಜೆರಾಕ್ಸ್ ಮತ್ತು ಸಂಘದ ಐಡಿ ಕಾರ್ಡ್ (ಕಡ್ಡಾಯ) ಜೆರಾಕ್ಸ್ ಹಾಗೂ ವಿದ್ಯಾರ್ಥಿಯ ಭಾವಚಿತ್ರ ಸಹಿತ ಅರ್ಜಿ ಸಲ್ಲಿಸಬೇಕು. (ವಿದ್ಯಾರ್ಥಿ ಭಾವಚಿತ್ರ ಹಿಂಬದಿ ತಪ್ಪದೇ ಅವರ ಹೆಸರು ಬರೆಯಿರಿ)

ಶೇ.90ಕ್ಕಿಂತ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳು ಸಂಘವು ನಿಗಧಿಪಡಿಸಿರುವ ನಮೂನೆಯಲ್ಲಿ ಜಿಲ್ಲಾ ಸಂಘದ ದೃಢೀಕರಣದೊಂದಿಗೆ 10–5–2026 ರೊಳಗಾಗಿ ಅಧ್ಯಕ್ಷರು/ಪ್ರಧಾನ ಕಾರ್ಯದರ್ಶಿ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ, 3ನೇ ಮಹಡಿ, ಕಂದಾಯ ಭವನ, ಕೆಜಿ ರಸ್ತೆ, ಬೆಂಗಳೂರು–09 ಇಲ್ಲಿಗೆ ತಲಪುವಂತೆ ಕಳುಹಿಸಬೇಕು. ಅರ್ಜಿ ಮತ್ತು ಇತರ ಮಾಹಿತಿಗಾಗಿ ಆಯಾ ಜಿಲ್ಲಾ ಸಂಘವನ್ನು ಸಂಪರ್ಕಿಸಿ ಪಡೆಯಬಹುದು ಎಂದು ಸಂಘದ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್ ತಿಳಿಸಿದ್ದಾರೆ.

# ಸಚಿವ ಸುಧಾಕರ್ ಆರೋಗ್ಯ ವಿಚಾರಿಸಿದ ಸಿಎಂ ಸಿದ್ದರಾಮಯ್ಯ



**ಬೆಂಗಳೂರು, ಏ.25:** ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಸಚಿವ ಡಿ. ಸುಧಾಕರ್ ಅವರ ಆರೋಗ್ಯ ಸ್ಥಿತಿ ಗಂಭೀರವಾಗಿದ್ದು, ಬೆಂಗಳೂರಿನ ಎಲೆಕ್ಟ್ರಾನಿಕ್ ಸಿಟಿಯಲ್ಲಿರುವ ಕಿಮ್ಸ್ ಆಸ್ಪತ್ರೆಯ ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಆಸ್ಪತ್ರೆಗೆ ಶನಿವಾರ ಭೇಟಿ ನೀಡಿ ಸಚಿವರ ಆರೋಗ್ಯ ವಿಚಾರಿಸಿದರು.

ಸಚಿವರಿಗೆ ಚಿಕಿತ್ಸೆ ನೀಡುತ್ತಿರುವ ವೈದ್ಯರ ತಂಡದೊಂದಿಗೆ ಸಿದ್ದರಾಮಯ್ಯ ಸುದೀರ್ಘ ಸಮಾಲೋಚನೆ ನಡೆಸಿದರು. ಸಚಿವರ ಆರೋಗ್ಯದ ಪ್ರಗತಿ ಹಾಗೂ ನೀಡಲಾಗುತ್ತಿರುವ ಚಿಕಿತ್ಸೆಗಳ ಬಗ್ಗೆ ಮಾಹಿತಿ ಪಡೆದರು. ಬಳಿಕ ಸುಧಾಕರ್ ಅವರ ಕುಟುಂಬ ಸದಸ್ಯರನ್ನು ಭೇಟಿಯಾಗಿ ಸಾಂತ್ವನ ಹೇಳಿದ ಸಿಎಂ, ಧೈರ್ಯ ತುಂಬಿದರು."ಸಚಿವರ ಆರೋಗ್ಯ ಸ್ಥಿತಿ ಸದ್ಯ ಸ್ಥಿರವಾಗಿದೆ. ಅವರು ಶೀಘ್ರದಲ್ಲೇ ಗುಣಮುಖರಾಗುವ ಭರವಸೆಯಿದೆ," ಎಂದು ಭೇಟಿಯ ಬಳಿಕ ಸಿಎಂ ಸಿದ್ದರಾಮಯ್ಯ ವಿಶ್ವಾಸ ವ್ಯಕ್ತಪಡಿಸಿದರು.

**ಪ್ರಮುಖರ ಭೇಟಿ**

ಸಿಎಂ ಸಿದ್ದರಾಮಯ್ಯ ಅವರೊಂದಿಗೆ ಸಚಿವ ಜಮೀರ್ ಅಹಮ್ಮದ್ ಖಾನ್, ಮಾಜಿ ಸಚಿವ ಗೂಳಿಹಟ್ಟಿ ಶೇಖರ್ ಸೇರಿದಂತೆ ಹಲವು ಪ್ರಮುಖ ನಾಯಕರು ಆಸ್ಪತ್ರೆಗೆ ಭೇಟಿ ನೀಡಿದ್ದರು. ಗಣ್ಯರ ಭೇಟಿಯ ಹಿನ್ನೆಲೆಯಲ್ಲಿ ಕಿಮ್ಸ್ ಆಸ್ಪತ್ರೆಯ ಆವರಣದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿತ್ತು. ಸಚಿವರ ಶೀಘ್ರ ಚೇತರಿಕೆಗಾಗಿ ಅವರ ಬೆಂಬಲಿಗರು ಮತ್ತು ಅಭಿಮಾನಿಗಳು ಪ್ರಾರ್ಥಿಸುತ್ತಿದ್ದಾರೆ.

# ಬಿಇಎಂಎಲ್ ಘಟಕಕ್ಕೆ ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಭೇಟಿ






**ಬೆಂಗಳೂರು, ಏ.25:** ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ಅವರು ಬೆಂಗಳೂರಿಗೆ ಒಂದು ದಿನದ ಭೇಟಿ ನೀಡಿದ್ದರು. ವಿಮಾನ ನಿಲ್ದಾಣಕ್ಕೆ ಆಗಮಿಸಿದ ಅವರನ್ನು ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಹೆಚ್ಚುವರಿ ನಿರ್ದೇಶಕ ಎಸ್.ಜಿ. ರವೀಂದ್ರ, ಬೆಂಗಳೂರು ದೂರದರ್ಶನ ಕೇಂದ್ರ ಉಪಮಹಾ ನಿರ್ದೇಶಕ ಎ. ಹನುಮಂತು, ಸುದ್ದಿ ವಿಭಾಗದ ಸಹಾಯಕ ನಿರ್ದೇಶಕ ಕೆ.ಎಸ್. ಶ್ರೀಯಶ್ ಮತ್ತಿತರರು ಸ್ವಾಗತಿಸಿದರು.

ನಂತರ ಅಶ್ವಿನಿ ವೈಷ್ಣವ್ ಅವರು, ಬೆಂಗಳೂರಿನ ಭಾರತ ಅರ್ಥ್ ಮೂವರ್ಸ್ ಲಿಮಿಟೆಡ್ –ಬಿಇಎಂಎಲ್ ಘಟಕಕ್ಕೆ ಭೇಟಿ ನೀಡಿದರು. ಬಿಇಎಂಎಲ್‌ನಲ್ಲಿ ತಯಾರಾಗುತ್ತಿರುವ ರೈಲು ಬೋಗಿಗಳ ಪರಿಶೀಲನೆ ನಡೆಸಿದರು. ನಂತರ ಹಿರಿಯ ಅಧಿಕಾರಿಗಳೊಂದಿಗೆ ಹಾಗೂ ಸಿಬ್ಬಂದಿಯೊಂದಿಗೆ ಸಂವಾದ ನಡೆಸಿದರು.

# ಒಳಮೀಸಲಾತಿ ಸರ್ವಾನುಮತದ ನಿರ್ಧಾರ: ಎಲ್ಲ ಸಮುದಾಯಕ್ಕೂ ಖುಷಿ: ಸಚಿವ ಸತೀಶ್ ಜಾರಕಿಹೊಳಿ

**ಬೆಳಗಾವಿ, ಏ.25:** ದಶಕಗಳ ಕಾಲದ ಬೇಡಿಕೆಯಾಗಿದ್ದ ಒಳಮೀಸಲಾತಿಯನ್ನು ಮುಖ್ಯಮಂತ್ರಿ ಸಿದ್ಧರಾಮಯ್ಯ ನೇತೃತ್ವದ ಸರ್ಕಾರ ಘೋಷಿಸಿದ್ದು ಐತಿಹಾಸಿಕ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದಾರೆ.

ಸುದ್ದಿಗಾರ ರೊಂದಿಗೆ ಶನಿವಾರ ಮಾತನಾಡಿ, ವಿಶೇಷ ಸಚಿವ ಸಂಪುಟ ಸಭೆಯಲ್ಲಿ ಎಲ್ಲಾ ಸಚಿವರ, ಸಮುದಾಯದ ಸಚಿವರ ಸಮ್ಮುಖದಲ್ಲಿಯೇ ಒಳ ಮೀಸಲಾತಿಯನ್ನು ಘೋಷಿಸಿದ್ದೇವೆ. ಎಲ್ಲಾ ಸಮುದಾಯದವರು ಖುಷಿಯಲ್ಲಿದ್ದಾರೆ. ಯಾವುದೇ ಭಿನ್ನಾಭಿಪ್ರಾಯವಿಲ್ಲದೆ ಸರ್ವಾನುಮತ ದಿಂದ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದರು.

ಒಳಮೀಸಲಾತಿ ಹಂಚಿಕೆ ಬಗ್ಗೆ ಬಿಜೆಪಿಯವರು ವಿರೋಧಿಸುತ್ತಿರುವ ಕುರಿತು ಪ್ರತಿಕ್ರಿಯಿಸಿ, ವಿರೋಧ ಪಕ್ಷಗಳು ಸರ್ಕಾರದ ಪ್ರತಿಯೊಂದು ನಿರ್ಧಾರದಲ್ಲೂ ಲೋಪದೋಷ ಹುಡುಕುವುದು ಸಹಜ. ಆದರೆ, ಜನಹಿತಕ್ಕಾಗಿ ತೆಗೆದುಕೊಂಡ ಈ ಐತಿಹಾಸಿಕ ನಿರ್ಧಾರಕ್ಕೆ ಜನರ ಬೆಂಬಲವಿದೆ ಎಂಬುದು ಸರ್ಕಾರದ ನಿಲುವು.ವಿರೋಧ ಪಕ್ಷದವರು ತಮ್ಮ ಅಸ್ತಿತ್ವಕ್ಕಾಗಿ ಇಂತಹ ಹೇಳಿಕೆಗಳನ್ನು ನೀಡುತ್ತಾರೆ ಎಂದು ತಿರುಗೇಟು ನೀಡಿದರು.

**ಡಿಕೆಶಿ ದೆಹಲಿ ಭೇಟಿಗೆ ರಾಜಕೀಯ ಉದ್ದೇಶ ಕಲ್ಪಿಸಬಾರದು**

ಕಾಂಗ್ರೆಸ್ ಪಕ್ಷದ ಒಳಗಿನ ನಾಯಕತ್ವಗೊಂದಲ ಬಗ್ಗೆ ಪ್ರತಿಕ್ರಿಯಿಸಿ, ಪಕ್ಷದ ಒಳಗಿನ ಗೊಂದಲಗಳಿಗೆ ಹೈಕಮಾಂಡ್ ಶೀಘ್ರದಲ್ಲೇ ತೆರೆ ಎಳೆಯಲಿದೆ. ಹೈಕಮಾಂಡ್ ಈಗಾಗಲೇ ಒಂದು ತೀರ್ಮಾನಕ್ಕೆ ಬಂದಿದ್ದು, ಸೂಕ್ತ ಸಮಯದಲ್ಲಿ ಅದನ್ನು ಜಾರಿಗೊಳಿಸಲಿದೆ ಎಂದರು. ಡಿ.ಕೆ.ಶಿವಕುಮಾರ್ ಅವರು ದೆಹಲಿಗೆ ಹೋಗುವುದು ಹೊಸದಲ್ಲ. ಅವರು ಎರಡು ಪ್ರಮುಖ ಖಾತೆಗಳನ್ನು ಹೊಂದಿದ್ದಾರೆ ಮತ್ತು ಕೆಪಿಸಿಸಿ ಅಧ್ಯಕ್ಷರೂ ಆಗಿದ್ದಾರೆ. ರಾಜ್ಯದ ಅಭಿವೃದ್ಧಿ ಕೆಲಸಗಳು, ಕೇಂದ್ರ ಸಚಿವರ ಭೇಟಿಗಾಗಿ ದೆಹಲಿಗೆ ಹೋಗುವುದು ಸಹಜ. ದೆಹಲಿ ಭೇಟಿಯನ್ನೇ ನಾಯಕತ್ವ ಬದಲಾವಣೆಯ ಸೂಚನೆ ಎಂದು ಅರ್ಥೈಸುವುದು ಸರಿಯಲ್ಲ. ಪ್ರತಿ ಭೇಟಿಗೂ ರಾಜಕೀಯ ಉದ್ದೇಶ ಕಲ್ಪಿಸಬಾರದು" ಎಂದು ಸತೀಶ್ ಜಾರಕಿಹೊಳಿ ಹೇಳಿದರು.

# ಪರಿಶಿಷ್ಟರಿಗೆ ಕಾಂಗ್ರೆಸ್ ಸರ್ಕಾರದಿಂದ ಮೋಸ: ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಟೀಕೆ

**ಬೆಂಗಳೂರು, ಏ.25:** ರಾಜ್ಯದ ಪರಿಶಿಷ್ಟ ಜಾತಿಯವರಿಗೆ ಮುಖ್ಯಮಂತ್ರಿ ಸಿದ್ಧರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಐತಿಹಾಸಿಕ ಮೋಸ ಮತ್ತು ಬೆನ್ನಿಗೆ ಚೂರಿ ಹಾಕುವ ಕೆಲಸ ಮಾಡಿದೆ ಎಂದು ರಾಜ್ಯ ಬಿಜೆಪಿ ಅಧ್ಯಕ್ಷ ಬಿ. ವೈ. ವಿಜಯೇಂದ್ರ ಟೀಕಿಸಿದ್ದಾರೆ.

ಈ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಹಿಂದಿನ ಬಿಜೆಪಿ ಸರ್ಕಾರವು ಪರಿಶಿಷ್ಟ ಜಾತಿಯವರಿಗೆ ಶೇ. 15 ರಿಂದ 17 ರಷ್ಟು ಮೀಸಲಾತಿಯನ್ನು ಹೆಚ್ಚಿಸಿತ್ತು ಆದರೆ, ನಿನ್ನೆ ನಡೆದ ಸಚಿವ ಸಂಪುಟ ಸಭೆಯಲ್ಲಿ ಮೀಸಲಾತಿ ಪ್ರಮಾಣವನ್ನು ಶೇ. 15ಕ್ಕೆ ಸೀಮಿತ ಮಾಡಿ ಎಡಗೈ ಸಮುದಾಯದವರಿಗೆ 5.25 ಮತ್ತು ಬಲಗೈ ಸಮುದಾಯದವರಿಗೆ 5.25 ಮೀಸಲಾತಿ ನಿಗದಿ ಮಾಡಿ ಅನ್ಯಾಯವೆಸಗಿದೆ. ಬಿಜೆಪಿ ಸರ್ಕಾರ ಅಧಿಕಾರದಲ್ಲಿದ್ದಾಗ ಬಲಗೈ ಸಮುದಾಯದವರಿಗೆ ಶೇ.6 ಮತ್ತು ಎಡಗೈ ಸಮುದಾಯದವರಿಗೆ ಶೇ.5.5 ಮೀಸಲಾತಿ ನೀಡಿತ್ತು ಎಂದು ಹೇಳಿದ್ದಾರೆ.

ಬಲಗೈ ಮತ್ತು ಎಡಗೈ ಸಮುದಾಯದವರಿಗೆ ಅನ್ಯಾಯ ಮಾಡಿರುವ ಜತೆಗೆ ಬಂಜಾರ, ಭೋವಿ, ಕೊರಚ ಹಾಗೂ ಕೊರಮ ಸಮುದಾಯಗಳಿಗೂ ಮೀಸಲಾತಿ ಪ್ರಮಾಣವನ್ನು ಕಡಿಮೆ ಮಾಡಿ ಅನ್ಯಾಯ ಮಾಡಲಾಗಿದೆ. ಈ ಮೂಲಕ ಈ ಸಮುದಾಯಗಳ ಬೆನ್ನಿಗೆ ರಾಜ್ಯ ಸರ್ಕಾರ ಚೂರಿ ಹಾಕಿದೆ ಎಂದು ಅವರು ಹೇಳಿದ್ದಾರೆ.

ನ್ಯಾಯಾಲಯದಲ್ಲಿ ತಡೆಯಾಜ್ಞೆ ಇಲ್ಲದಿದ್ದರೂ ರಾಜ್ಯಸರ್ಕಾರವೇ ಪ್ರಮಾಣಪತ್ರ ಸಲ್ಲಿಸಿ ಶೇ. 17ರ ಮೀಸಲಾತಿಯನ್ನು ಶೆ. 15ಕ್ಕೆ ಇಳಿಸಿದ್ದಾಗಿ ಒಪ್ಪಿಕೊಂಡಿದ್ದರ ಫಲ ಪರಿಶಿಷ್ಟ ಜಾತಿ ಮೀಸಲಾತಿ ಪ್ರಮಾಣವು 17 ರಿಂದ 15ಕ್ಕೆ ಇಳಿಯಲು ಕಾರಣವಾಗಿದೆ ಎಂದು ಅವರು ಟೀಕಿಸಿದ್ದಾರೆ.

ರಾಜ್ಯ ಸರ್ಕಾರದಲ್ಲಿ ಲಕ್ಷಾಂತರ ಸರ್ಕಾರಿ ಹುದ್ದೆಗಳು ಖಾಲಿ ಇದ್ದರೂ ಯಾವುದನ್ನು ಭರ್ತಿ ಮಾಡದೆ ಒಳಮೀಸಲಾತಿ ಹೆಸರಿನಲ್ಲಿ ಎರಡೂವರೆ ವರ್ಷಗಳ ಅಮೂಲ್ಯ ಸಮಯವನ್ನು ಕಾಂಗ್ರೆಸ್ ಸರ್ಕಾರ ಹಾಳು ಮಾಡಿದೆ. ಉಳಿದಿರುವ ಕೆಲವ 2 ವರ್ಷಗಳಲ್ಲಿ ಪರಿಶಿಷ್ಟ ಸಮುದಾಯಗಳು ಸೇರಿದಂತೆ ರಾಜ್ಯದ ಜನರ ಕಣ್ಣಿಗೆ ಮಣ್ಣೆರೆಚುವ ರೀತಿಯಲ್ಲಿ ನೇಮಕಾತಿಗೆ ಚಾಲನೆ ಕೊಡುವುದಾಗಿ ಸಮಜಾಯಿಷಿ ನೀಡಿದೆ ಎಂದು ಅವರು ಕಿಡಿ ಕಾರಿದ್ದಾರೆ.

ಕಾಂಗ್ರೆಸ್ ಸರ್ಕಾರ ಪರಿಶಿಷ್ಟ ಸಮುದಾಯಗಳಿಗೆ ಮಾಡಿರುವ ಅನ್ಯಾಯಕ್ಕೆ ಭವಿಷ್ಯದಲ್ಲಿ ಬೆಲೆ ತೆರಲೇಬೇಕಾಗುತ್ತದೆ ಎಂಬುದನ್ನು ಕಾಂಗ್ರೆಸ್ ನಾಯಕರು ಮರೆಯಬಾರದು ಎಂದಿರುವ ಅವರು, ಈಗಲೂ ಕಾಂಗ್ರೆಸ್ ಸರ್ಕಾರಕ್ಕೆ ಪರಿಶಿಷ್ಟರ ಬಗ್ಗೆ ಬದ್ಧತೆ ಇದ್ದರೆ ಈಹಿಂದಿನ ಬಿಜೆಪಿ ಸರ್ಕಾರ ಜಾರಿಗೊಳಿಸಿದ್ದ ಶೇ.17ರ ಮೀಸಲಾತಿ ಪ್ರಮಾಣವನ್ನು ಉಳಿಸಿಕೊಳ್ಳಲು ಸೂಕ್ತ ಕಾನೂನು ಹೋರಾಟ ನಡೆಸುವುದು ಒಳಿತು ಎಂದು ವಿಜಯೇಂದ್ರ ಹೇಳಿದ್ದಾರೆ.

## ನಿಧನ ವಾರ್ತೆ

# ಸುಪ್ರೀಂ ಕೋರ್ಟ್‌ನ ನ್ಯಾಯವಾದಿ ಶಶಿಧರ್ ಯು. ಕಾಪು ನಿಧನ



**ಮುಂಬಯಿ, ಎ.25:** ಬಿಲ್ಲವರ ಎಸೋಸಿಯೇಶನ್ ಮುಂಬಯಿ ಯ ಇದರ ಹಿರಿಯ ಸದಸ್ಯ, ಭಾರತ್ ಕೋ.ಆಪರೇಟಿವ್ ಬ್ಯಾಂಕ್ (ಮುಂಬಯಿ) ಲಿಮಿಟೆಡ್ ನ ಮಾಜಿ ನಿರ್ದೇಶಕ, ನೋಟರಿ ಯೂನಿಯನ್ ಆಫ್ ಇಂಡಿಯಾ, ಸುಪ್ರೀಂ ಕೋರ್ಟ್ ನ ವಕೀಲ ನ್ಯಾಯವಾದಿ ಶಶಿಧರ್ ಯು. ಕಾಪು (74) ಅಲ್ಪಕಾಲದ ಅಸೌಖ್ಯದಿಂದ ಶನಿವಾರ ಮುಂಜಾನೆ ನಿಧನರಾದರು.

ಮೃತರು ಪತ್ನಿ (ವಿಲಾಸಿನಿ), ವೈಭವ್ (ಸುಪುತ್ರ,) ವೃಶಾಲಿ (ಸೊಸೆ) ಹಾಗೂ ಅಪಾರ ಬಂಧು ಮಿತ್ರರನ್ನು ಅಗಲಿದ್ದಾರೆ.

ಮೃತರ ಅಂತ್ಯಸಂಸ್ಕಾರ ಯಾತ್ರೆ ಶನಿವಾರ ಮಧ್ಯಾಹ್ನ ಮೃತರ ಸ್ವಗೃಹದಿಂದ ಹೊರಟು ಗೊರೆಗಾಂವ್ ಪೂರ್ವದಲ್ಲಿನ ಶಿವಧಾಮ್ ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ನಡೆಸಲ್ಪಟ್ಟಿತು.

ಮೃತರ ದಿವ್ಯಚೇತನಕ್ಕೆ ಪರಮಾತ್ಮನು ಚಿರಶಾಂತಿ, ಸದ್ಗತಿ ಕರುಣಿಸಲೆಂದು ಬಿಲ್ಲವರ ಅಸೋಸಿಯೇಶನ್ ಮುಂಬಯಿ ಅಧ್ಯಕ್ಷ ಹರೀಶ್ ಜಿ. ಆಮೀನ್, ಗೌರವಾಧ್ಯಕ್ಷ ಎಲ್.ವಿ ಆಮೀನ್ ಮತ್ತು ಪದಾಧಿಕಾರಿಗಳು, ಸದಸ್ಯರು, ಭಾರತ್ ಬ್ಯಾಂಕ್‌ನ ಕಾರ್ಯಾಧ್ಯಕ್ಷ ಸೂರ್ಯಕಾಂತ್ ಜಯಸುವರ್ಣ, ಮುಂಬಯಿ ಬಿಲ್ಲವರು, ಜಯ ಸಿ.ಸುವರ್ಣ ಅಭಿಮಾನಿಗಳು, ಶ್ರೀ ನಾರಾಯಣಗುರು ಭಜನಾ ಮಂಡಳಿ ಇದರ ಪದಾಧಿಕಾರಿಗಳು, ಎನ್‌ಸಿಪಿ ಧುರೀಣ ಲಕ್ಷ್ಮಣ್ ಸಿ. ಪೂಜಾರಿ ಚಿತ್ರಾಪು ಮತ್ತಿತರ ಗಣ್ಯರು ಸಂತಾಪ ವ್ಯಕ್ತಪಡಿಸಿ ಶ್ರದ್ಧಾಂಜಲಿ ಅರ್ಪಿಸಿದ್ದಾರೆ.

# ಒಳಮೀಸಲಾತಿ ಜಾರಿ: 40 ವರ್ಷಗಳ ನೋವು, ಹೋರಾಟದ ಗೆಲುವು

## ಸರ್ಕಾರದ ನಿರ್ಧಾರಕ್ಕೆ ಮಾದರ ಮಹಾಸಭಾ ಅಧ್ಯಕ್ಷ ಹಾಗೂ ಸಚಿವ ಕೆ.ಎಚ್.ಮುನಿಯಪ್ಪ ಶ್ಲಾಘನೆ



**ಬೆಂಗಳೂರು, ಏ.25:** ರಾಜ್ಯ ಸರ್ಕಾರವು ವಿಶೇಷ ಸಚಿವ ಸಂಪುಟ ಸಭೆಯಲ್ಲಿ ಕೈಗೊಂಡ ಒಳಮೀಸಲಾತಿ ಅನುಷ್ಠಾನದ ತೀರ್ಮಾನವನ್ನು ಕರ್ನಾಟಕ ಮಾದರ ಮಹಾಸಭಾ ಅಧ್ಯಕ್ಷ ಹಾಗೂ ಸಚಿವ ಕೆ.ಎಚ್.ಮುನಿಯಪ್ಪ ಸ್ವಾಗತಿಸಿದ್ದಾರೆ.

ಇದು ಕೇವಲ ಒಂದು ತೀರ್ಮಾನ ಅಲ್ಲ, ನಲ್ವತ್ತು ವರ್ಷಗಳ ನೋವು, ಹೋರಾಟದ ಗೆಲುವು ಎಂದು ಬಣ್ಣಿಸಿದ್ದಾರೆ.

ಗ್ರೂಪ್ 'ಎ' ಗೆ 5.25%, ಗ್ರೂಪ್ ಬಿ ಗೆ 5.25% ಹಾಗೂ ಗ್ರೂಪ್ 'ಸಿ' ಗೆ 4.5% ಒಳಮೀಸಲಾತಿ ಹಂಚಿಕೆ ಮಾಡುವ ಮೂಲಕ ಸರ್ಕಾರ ಸಾಮಾಜಿಕ ನ್ಯಾಯದ ದಾರಿಯಲ್ಲಿ ಮಹತ್ವದ ಹೆಜ್ಜೆ ಇಟ್ಟಿದೆ. ಇದು ಮಾದಿಗ ಸಮುದಾಯ ಸೇರಿದಂತೆ ಪರಿಶಿಷ್ಟ ಜಾತಿಯ ಎಲ್ಲಾ 101 ಸಮುದಾಯಗಳ ಬಹುದಿನದ ಬೇಡಿಕೆಗೆ ನ್ಯಾಯ ಒದಗಿಸಿದ ಐತಿಹಾಸಿಕ ನಿರ್ಧಾರವಾಗಿದೆ ಎಂದು ಅವರು ಹೇಳಿದ್ದಾರೆ.

ಚಿತ್ರದುರ್ಗದ ಪರಿಶಿಷ್ಟ ಜಾತಿಯ ಮಹಾಸಮಾವೇಶದಲ್ಲಿ ತೆಗೆದುಕೊಂಡ ನಿರ್ಣಯದಂತೆ ಹಾಗೂ 2023ರ ಚುನಾವಣಾ ಪ್ರಣಾಳಿಕೆಯಲ್ಲಿ ಕಾಂಗ್ರೆಸ್ ಪಕ್ಷ ನೀಡಿದ ಮಾತಿನಂತೆ ಇಂದು ಆ ಭರವಸೆ ಈಡೇರಿದೆ. ಮಾತು ಕೊಟ್ಟರೆ ನೆರವೇರಿಸುವುದು ಕಾಂಗ್ರೆಸ್ ಪಕ್ಷದ ಸಂಸ್ಕೃತಿ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸಾಮಾಜಿಕ ನ್ಯಾಯದ ಬದ್ಧತೆ ಹಾಗೂ 12ನೇ ಶತಮಾನದಲ್ಲಿ ಬಸವಣ್ಣವರು ನಡೆಸಿದ ಸಮಾನತೆ ಚಳುವಳಿಯ ಸ್ಫೂರ್ತಿಯಿಂದ ಈ ತೀರ್ಮಾನ ಕಾರ್ಯರೂಪಕ್ಕೆ ಬಂದಿದೆ ಎಂದು ಅವರು ಅಭಿಪ್ರಾಯಪಟ್ಟರು. ಇಂದು ತೆಗೆದುಕೊಂಡ ಈ ನಿರ್ಧಾರ ಇತಿಹಾಸದ ಪುಟಗಳಲ್ಲಿ ದಾಖಲಾಗುವ ಮಹತ್ವದ ಕ್ಷಣ ಎಂದರು.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಚಿತ್ರದುರ್ಗದ ಸಮಾವೇಶದಲ್ಲಿ ಘೋಷಣೆ ಮಾಡಿದಂತೆ ನಮ್ಮ ಸರ್ಕಾರವು ಒಳಮೀಸಲಾತಿ ಅನುಷ್ಠಾನದಲ್ಲಿ ನುಡಿದಂತೆ ನಡೆದಿದೆ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಪ್ರಣಾಳಿಕೆ ಅಧ್ಯಕ್ಷ ಡಾ. ಜಿ. ಪರಮೇಶ್ವರ್ ಅವರ ಬೆಂಬಲ ಮತ್ತು ಮಾರ್ಗದರ್ಶನ, ಹಾಗು ಸಚಿವರಾದ ಎಚ್.ಕೆ. ಪಾಟೀಲ್, ಎಚ್.ಸಿ. ಮಹಾದೇವಪ್ಪ, ಆರ್.ಬಿ. ತಿಮ್ಮಾಪುರ, ಶಿವರಾಜ್ ತಂಗಡಗಿ, ರುದ್ರಪ್ಪ ಲಮಾಣಿ, ಪ್ರಿಯಾಂಕ ಖರ್ಗೆ ಸೇರಿದಂತೆ ಸಚಿವ ಸಂಪುಟದ ಎಲ್ಲಾ ಸಹೋದ್ಯೋಗಿಗಳ ಸಮನ್ವಯದಿಂದ ಈ ಐತಿಹಾಸಿಕ ನಿರ್ಧಾರ ಸಾಧ್ಯವಾಗಿದೆ ಎಂದು ಅವರು ತಿಳಿಸಿದ್ದಾರೆ.

ಕಾಂಗ್ರೆಸ್ ಪಕ್ಷ ಅಂದ್ರೆ ಅದು ಕೇವಲ ಒಂದು ರಾಜಕೀಯ ಪಕ್ಷ ಅಲ್ಲ. ರೈತರ, ಬಡವರ, ದೀನದಲಿತರ, ಹಿಂದುಳಿದವರ ಮತ್ತು ಅಲ್ಪಸಂಖ್ಯಾತರ ಧ್ವನಿ. ಈ ದೇಶದಲ್ಲಿ ಸಾಮಾಜಿಕ ನ್ಯಾಯದ ಬದ್ಧತೆಯ ಮೇಲೆ ನಿಂತಿರುವ ಪ್ರಬಲ ಶಕ್ತಿ ಎಂದು ಅವರು ಹೇಳಿದ್ದಾರೆ.

ಮಾದಿಗ ಸಮುದಾಯದ ಪರವಾಗಿ ಅವರು ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್, ಸಚಿವ ಸಂಪುಟದ ಎಲ್ಲಾ ಸಹೋದ್ಯೋಗಿಗಳಿಗೆ ಹೃತ್ಪೂರ್ವಕ ಕೃತಜ್ಞತೆ ಸಲ್ಲಿಸಿದ್ದಾರೆ. ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಅವರ ಮಾರ್ಗದರ್ಶನಕ್ಕೂ ವಿಶೇಷವಾಗಿ ಧನ್ಯವಾದಗಳನ್ನು ಅರ್ಪಿಸಿದ್ದಾರೆ.

# ಒಳಮೀಸಲಾತಿಗೆ ವಿರೋಧ: ಛಲವಾದಿ ನಾರಾಯಣಸ್ವಾಮಿ



**ಬೆಂಗಳೂರು, ಏ.25:** ಒಳಮೀಸಲಾತಿಗೆ ಸಂಬಂಧಿಸಿ ಎಲ್ಲರನ್ನೂ ಬೀದಿಯಲ್ಲಿ ನಿಲ್ಲಿಸಿ ಬೀಸುವ ದೊಣ್ಣೆಯಿಂದ ತಪ್ಪಿಸಿಕೊಂಡರೆ ಸಾಕೆಂಬ ರೀತಿಯಲ್ಲಿ ಸರ್ಕಾರ ನಡೆದುಕೊಂಡಿದೆ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಆಕ್ಷೇಪಿಸಿದ್ದಾರೆ.

ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಶನಿವಾರ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಈ ತೀರ್ಮಾನ ಮಾಡುವಾಗ ಉಪ ಮುಖ್ಯಮಂತ್ರಿಗಳು ಊರಲ್ಲೇ ಇರಲಿಲ್ಲ; ಬಹುಶಃ ಅವರಿಗೂ ಇದು ತೃಪ್ತಿಕರ ಅಲ್ಲ ಎಂಬುದು ಗೊತ್ತಿತ್ತು ಎಂದು ವಿಶ್ಲೇಷಿಸಿದರು. ಈ ಒಂದು ತೀರ್ಮಾನಕ್ಕೆ ಬರಲು ಇವರಿಗೆ 3 ವರ್ಷ ಬೇಕಾಗಿದೆ. ಮೂರೇ ತಿಂಗಳಲ್ಲಿ ಮಾಡಬಹುದಿತ್ತಲ್ಲವೇ ಎಂದು ಕೇಳಿದರು.

ಸಚಿವರು ಜನಾಂಗದ ಪರವಾಗಿ ನಿಲ್ಲಬೇಕಿತ್ತು. ಕಾಂಗ್ರೆಸ್ಸಿನ ಪರವಾಗಿ ಅಲ್ಲ; ಮೀಸಲಾತಿ ಕೇಳುವಲ್ಲಿ ಕಾಂಗ್ರೆಸ್ ಸಚಿವರು ಸಂಪೂರ್ಣವಾಗಿ ಎಡವಿದ್ದಾರೆ. ಇವರು ಸಮಾಜಗಳಿಗೆ ಅನ್ಯಾಯ, ವಂಚನೆ ಮಾಡಿದ್ದಾರೆ ಎಂದು ಆಕ್ಷೇಪಿಸಿದರು. ಇದು ಕೋರ್ಟಿನಲ್ಲಿ ನಿಲ್ಲುವುದಿಲ್ಲ; ನಾವಿದನ್ನು ವಿರೋಧಿಸುತ್ತೇವೆ ಎಂದರು.

ಕೇಂದ್ರದ ಮಾಜಿ ಸಚಿವ ಎ. ನಾರಾಯಣಸ್ವಾಮಿ ಅವರು ಮಾತನಾಡಿ, ಒಳಮೀಸಲಾತಿ ವಿಚಾರಕ್ಕೆ ಕೊನೆ ಮೊಳೆಯನ್ನು 3 ವರ್ಷಗಳ ಬಳಿಕ ಹೊಡೆದಿದ್ದಾರೆ ಎಂದರು. ದಲಿತರ ದಿಕ್ಕು ತಪ್ಪಿಸುವ ತೀರ್ಮಾನ ಮಾಡಿದ್ದಾರೆ ಎಂದು ಆಕ್ಷೇಪಿಸಿದರು. ಇದನ್ನು ವಿರೋಧಿಸಿ ಬಿಜೆಪಿ ಹೋರಾಟ ಮಾಡಲಿದೆ. ಸಿದ್ದರಾಮಯ್ಯನವರು ಅನೇಕ ಆಯೋಗ ರಚಿಸಿ, ವರದಿ ಪಡೆದು ಅವೆಲ್ಲವನ್ನೂ ತಿರಸ್ಕರಿಸಿದ ದಾಖಲೆ ಬರೆದ ಮುಖ್ಯಮಂತ್ರಿ ಎಂದು ಟೀಕಿಸಿದರು. ಯಾವುದೇ ನ್ಯಾಯಮೂರ್ತಿಗಳು ಈ ಸರಕಾರದ ಆಯೋಗದ ಹುದ್ದೆಯನ್ನು ಸ್ವೀಕರಿಸಬಾರದು ಎಂದು ಮನವಿ ಮಾಡಿದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

ಏಪ್ರಿಲ್ 26, 2026, ಭಾನುವಾರ

## ಒಳಪುಟಗಳಲ್ಲಿ

ಎಎಪಿ ಸಂಸದರ ಬಿಜೆಪಿ ಸೇರ್ಪಡೆ ತನಿಖಾ ಸಂಸ್ಥೆಗಳ ದುರುಪಯೋಗದ ಪರಿಣಾಮ: ಸಿಪಿಐಎಂ ಆರೋಪ - ಪು.4

ಕಾಂತಾರ ದೈವಪಾತ್ರಕ್ಕೆ ಅವಮಾನ: ಒಂದು ತಿಂಗಳಲ್ಲಿ ಚಾಮುಂಡಿ ಬೆಟ್ಟಕ್ಕೆ ರಣವೀರ್ ಭೇಟಿ - ಪು.5

ಬೆಳಕೋಣಿ ಸೇತುವೆ ಕಾಮಗಾರಿ


ಶಾಸಕ ಪ್ರಭು ಚವ್ಹಾಣ್ ಪರಿಶೀಲನೆ- ಪು.6

ಅಸ್ತ್ರ ಮ್ಯಾನೇಜ್‌ಮೆಂಟ್ ಫೆಸ್ಟ್-2026: ವಿದ್ಯಾರ್ಥಿ ಪ್ರತಿಭೆಗೆ ವೇದಿಕೆ - ಪು.7

# ರಾಷ್ಟ್ರೀಯ ಶರಣಾಗತಿ ಸಂಘದ ನಕಲಿ ರಾಷ್ಟ್ರೀಯತೆ, ದಾಸ್ಯ ಬಹಿರಂಗ

## ಅಮೆರಿಕದಲ್ಲಿ ಆರ್‌ಎಸ್‌ಎಸ್ ನಾಯಕ ರಾಮ್‌ಮಾಧವ್ ಭಾಷಣ ಉಲ್ಲೇಖಿಸಿ ಕಾಂಗ್ರೆಸ್ ನಾಯಕ ರಾಹುಲ್‌ಗಾಂಧಿ ವಾಗ್ದಾಳಿ

**ನವದೆಹಲಿ, ಏ.25:** ರಾಷ್ಟ್ರೀಯ ಸ್ವಯಂ ಸೇವಕ ಸಂಘ (ಆರ್‌ಎಸ್‌ಎಸ್) ವನ್ನು "ರಾಷ್ಟ್ರೀಯ ಶರಣಾಗತಿ ಸಂಘ" ಎಂದು ಟೀಕಿಸಿರುವ ಲೋಕಸಭೆ ವಿರೋಧ ಪಕ್ಷ ನಾಯಕ ರಾಹುಲ್ ಗಾಂಧಿ, ಸಂಘದ ನಾಯಕ ರಾಮ್‌ಮಾಧವ್ ಅವರು ಅಮೆರಿಕದಲ್ಲಿ ಸಂಘಟನೆಯ ನಿಜವಾದ ಬಣ್ಣ "ಫಾರ್ಜಿ (ನಕಲಿ) ರಾಷ್ಟ್ರೀಯತೆ" ಮತ್ತು "ಶುದ್ಧ ದಾಸ್ಯ"ವನ್ನು ಬಹಿರಂಗಪಡಿಸಿದ್ದಾರೆ ಎಂದು ವಾಗ್ದಾಳಿ ನಡೆಸಿದ್ದಾರೆ.



ಅಮೆರಿಕದಲ್ಲಿ ಕಾರ್ಯಕ್ರಮವೊಂದರಲ್ಲಿ ಮಾತನಾಡಿರುವ ರಾಮ್‌ಮಾಧವ್ ಅವರ ವಿಡಿಯೋವನ್ನು ಉಲ್ಲೇಖಿಸಿ ವಾಗ್ದಾಳಿ ನಡೆಸಿರುವ ರಾಹುಲ್ ಗಾಂಧಿ, ಬಿಜೆಪಿ ಮತ್ತು ರಾಷ್ಟ್ರೀಯ ಸ್ವಯಂಸೇವಕ ಸಂಘದ ನಾಯಕ, ಇರಾನ್ ಮತ್ತು ರಷ್ಯಾದಿಂದ ತೈಲ ಖರೀದಿಸುವುದನ್ನು ನಿಲ್ಲಿಸಲು ಭಾರತ ಒಪ್ಪಿಕೊಂಡಿದೆ ಮತ್ತು ಅಮೆರಿಕ ವಿಧಿಸಿದ ಹೆಚ್ಚಿನ ಸುಂಕಗಳಿಗೆ ಒಪ್ಪಿಗೆ ಸೂಚಿಸಿದೆ ಎಂದು ಹೇಳಿದ್ದಾರೆ.

ಆದಾಗ್ಯೂ, ರಾಮ್‌ಮಾಧವ್ ನಂತರ ಕ್ಷಮೆಯಾಚಿಸಿದ್ದು, ಅವರು ಹೇಳಿದ್ದು "ವಾಸ್ತವಿಕವಾಗಿ ತಪ್ಪು". ಏಕೆಂದರೆ ರಷ್ಯಾದಿಂದ ತೈಲ ಆಮದು ಮಾಡಿಕೊಳ್ಳುವುದನ್ನು ನಿಲ್ಲಿಸಲು ಭಾರತ ಒಪ್ಪಿಲ್ಲ ಮತ್ತು ಟ್ರಂಪ್ ಆಡಳಿತ ಶೇಕಡಾ 50ರಷ್ಟು ಸುಂಕ ವಿಧಿಸುವುದನ್ನು "ತೀವ್ರವಾಗಿ ಪ್ರತಿಭಟಿಸಿದೆ". ಎಂದು ಹೇಳಿದ್ದಾರೆ.

ರಾಮ್‌ಮಾಧವ್ ಅವರ ಈ ದ್ವಂದ್ವ ಹೇಳಿಕೆ ಬಗ್ಗೆ ಮಾಹಿತಿ ಹಂಚಿಕೊಂಡಿರುವ ರಾಹುಲ್‌ಗಾಂಧಿ, ರಾಷ್ಟ್ರೀಯ ಶರಣಾಗತಿ ಸಂಘ, ನಾಗ್ಪುರದಲ್ಲಿ ಫಾರ್ಜಿ ರಾಷ್ಟ್ರೀಯತೆ ಇದೆ. ಇದು ಶುದ್ಧ ದಾಸ್ಯ. ರಾಮ್ ಮಾಧವ್ ಅವರು ಅಮೆರಿಕದಲ್ಲಿ ಸಂಘದ ನಿಜವಾದ ಬಣ್ಣವನ್ನು ಬಹಿರಂಗಪಡಿಸಿದ್ದಾರೆ ಎಂದು ವಾಗ್ದಾಳಿ ನಡೆಸಿದ್ದಾರೆ.

ಮತ್ತೊಂದು ಕಡೆ ಕಾಂಗ್ರೆಸ್ ನಾಯಕ ಕೆ.ಸಿ. ವೇಣುಗೋಪಾಲ್, ಪ್ರಧಾನಿ ನರೇಂದ್ರ ಮೋದಿ ಅವರು ಹುದ್ದೆಯಲ್ಲಿ ಮುಂದುವರಿಯುವ ಅಧಿಕಾರವನ್ನು ಕಳೆದುಕೊಂಡಿದ್ದಾರೆ ಎಂದಿದ್ದಾರೆ. ಹಿರಿಯ ಆರ್‌ಎಸ್‌ಎಸ್ ನಾಯಕರೊಬ್ಬರ ಸ್ಪಷ್ಟ ಒಪ್ಪಿಗೆ – ಪ್ರಧಾನಿ ಮೋದಿ ವಾಷಿಂಗ್ಟನ್ ತಾಳಕ್ಕೆ ತಕ್ಕಂತೆ ಕುಣಿಯುತ್ತಿದ್ದಾರೆ ಎಂಬುದು ಸ್ಪಷ್ಟ ಎಂದು ಆರೋಪಿಸಿದ್ದಾರೆ.

### ಲಜ್ಜೆಗೆಟ್ಟ ಕೃತ್ಯ: ಸಿದ್ದರಾಮಯ್ಯ



ಬೆಂಗಳೂರು, ಏ.25: ಪ್ರಧಾನಿ ನರೇಂದ್ರ ಮೋದಿ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ "ಕೈಗೊಂಬೆ" ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಟೀಕಿಸಿದ್ದಾರೆ.

ಈ ಬಗ್ಗೆ ಬಿಜೆಪಿ ನಾಯಕ ರಾಮ್ ಮಾಧವ್ ಅವರು ಅಮೆರಿಕದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ್ದ ವೀಡಿಯೋ ಹಂಚಿಕೊಂಡಿದ್ದು, ರಾಮ್‌ಮಾಧವ್ ಅವರ ಹೇಳಿಕೆ ಮೋದಿ ಸರ್ಕಾರದ ಅಪಾಯಕಾರಿ ಆದ್ಯತೆಗಳನ್ನು ಬಹಿರಂಗಪಡಿಸಿದೆ. ಇವು ರಾಜತಾಂತ್ರಿಕ ನಿರ್ಧಾರಗಳಲ್ಲ; ಬದಲಾಗಿ ಸ್ವಯಂ ಶರಣಾಗತಿಯ ಲಜ್ಜೆಗೆಟ್ಟ ಕೃತ್ಯಗಳು ಎಂದು ಸಿಎಂ ಕಿಡಿಕಾರಿದ್ದಾರೆ.

### ರಾಮ್‌ಮಾಧವ್ ಹೇಳಿದ್ದೇನು?



ವಾಷಿಂಗ್ಟನ್ ಡಿಸಿಯಲ್ಲಿ ನಡೆದ ಹಡ್ಸನ್ ಇನ್‌ಸ್ಟಿಟ್ಯೂಟ್ ಸಮ್ಮೇಳನದಲ್ಲಿ ಮಾತನಾಡಿದ ಮಾಧವ್, ಭಾರತವು ಇರಾನ್‌ನಿಂದ ತೈಲ ಖರೀದಿಯನ್ನು ನಿಲ್ಲಿಸಲು ಒಪ್ಪಿಕೊಂಡಿತು. ಪ್ರತಿಪಕ್ಷಗಳು ತೀವ್ರವಾಗಿ ಟೀಕಿಸಿದ್ದರೂ ರಷ್ಯಾದಿಂದ ತೈಲ ಖರೀದಿಯನ್ನು ನಿಲ್ಲಿಸಲು ಒಪ್ಪಿಕೊಂಡೆವು. ಭಾರತವು ಹೆಚ್ಚು ಮಾತನಾಡದೆ ಶೇ.50ರಷ್ಟು ಸುಂಕವನ್ನೂ ಒಪ್ಪಿಕೊಂಡಿತು. ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಬೇಡಿಕೆಗಳಿಗೆ ಭಾರತವು ಮಣಿದಿತ್ತು ಎಂದು ಹೇಳಿದ್ದರು.

# ಅನುದಾನ ನೀಡಿ ರಾಜ್ಯದ ಯೋಜನೆಗಳಿಗೆ ನೆರವಾಗಿ

## ಯುಐಡಬ್ಲ್ಯುಐಎನ್ ಸಂಸ್ಥಾಪನಾ ದಿನಾಚರಣೆಯಲ್ಲಿ ಕೇಂದ್ರಕ್ಕೆ ಡಿಸಿಎಂ ಡಿ.ಕೆ.ಶಿ. ಮನವಿ




**ನವದೆಹಲಿ, ಏ.25:** ಇಲ್ಲಿನ ಇಂಡಿಯಾ ಹ್ಯಾಬಿಟಾಟ್ ಸೆಂಟರ್‌ನಲ್ಲಿ ಶನಿವಾರ ಕೇಂದ್ರ ವಸತಿ ಹಾಗೂ ನಗರ ವ್ಯವಹಾರಗಳ ಸಚಿವಾಲಯ ವತಿಯಿಂದ ಆಯೋಜಿಸಲಾಗಿದ್ದ ಅರ್ಬನ್ ಚಾಲೆಂಜ್ ಫಂಡ್ ಹಾಗೂ ಅರ್ಬನ್ ಇನ್ವೆಸ್ಟ್ ವಿಂಡೋ 56ನೇ ಸಂಸ್ಥಾಪನಾ ದಿನ ಹಾಗೂ ವಿಚಾರ ಸಂಕಿರಣ ಕಾರ್ಯಕ್ರಮದಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್ ಭಾಗವಹಿಸಿದ್ದರು.

ಇದೇ ವೇಳೆ ಕೇಂದ್ರ ಸಚಿವರಾದ ಮನೋಹರ್ ಲಾಲ್ ಖಟ್ಟರ್ ಅವರು "ಮೂವಿಂಗ್ ಟುವರ್ಡ್ಸ್ ಎಫಿಶಿ ಸಿಟಿ ಗವರ್ಮೆಂಟ್: ಎ ಫ್ರೇಮ್ ವರ್ಕ್ ಫಾರ್ ಮಿಲಿಯನ್ ಪ್ಲಸ್ ಸಿಟಿಸ್" ವರದಿ ಬಿಡುಗಡೆಗೊಳಿಸಿದರು.

ಕಾರ್ಯಕ್ರಮದಲ್ಲಿ ಅರ್ಬನ್ ಚಾಲೆಂಜ್ ಫಂಡ್ ಶ್ಲಾಘಿಸಿದ ಶಿವಕುಮಾರ್, ಕರ್ನಾಟಕವು 1.25 ಲಕ್ಷ ಕೋಟಿ ರೂ. ವೆಚ್ಚದ 1,082 ನಗರ ಮೂಲಸೌಕರ್ಯ ಯೋಜನೆಗಳನ್ನು ರೂಪಿಸಿದೆ. ಕೇಂದ್ರ ಸರ್ಕಾರವು 5,500 ಕೋಟಿ ರೂ.ಗಿಂತ ಹೆಚ್ಚಿನ ಅನುದಾನ ನೀಡಿ ಪ್ರಸ್ತುತ ಜಾರಿಯಲ್ಲಿರುವ ಯೋಜನೆಗಳಿಗೆ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು. ಹಾಗೂ ರಾಜ್ಯ ಸರ್ಕಾರವು ವಿಶ್ವದರ್ಜೆ ನಗರ ಮೂಲ ಸೌಕರ್ಯದೊಂದಿಗೆ ಭವಿಷ್ಯಕ್ಕೆ ಪೂರಕವಾಗಿ ಬೆಂಗಳೂರನ್ನು ಬಲಿಷ್ಠವಾಗಿ ನಿರ್ಮಾಣ ಮಾಡಲಿದೆ ಎಂದು ಭರವಸೆ ನೀಡಿದರು.

# ರಾಜ್ಯ ಕಾಂಗ್ರೆಸ್ ನಾಯಕತ್ವ ಬದಲಾವಣೆ ಒತ್ತಡ







### ಎಐಸಿಸಿ ಅಧ್ಯಕ್ಷ ಖರ್ಗೆ ಜತೆ ಡಿಕೆ ಸೋದರರ ಮಹತ್ವದ ಚರ್ಚೆ

ನವದೆಹಲಿ, ಏ.25: ರಾಜ್ಯ ರಾಜಕೀಯದಲ್ಲಿ ಮುಖ್ಯಮಂತ್ರಿ ಬದಲಾವಣೆ ವಿಚಾರ ಮತ್ತೆ ಚರ್ಚೆಗೆ ಗ್ರಾಸವಾಗಿರುವ ನಡುವೆಯೇ ದೆಹಲಿಯಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ಅವರನ್ನು ಡಿ.ಕೆ ಸಹೋದರರು ಭೇಟಿಮಾಡಿ ಮಹತ್ವದ ಮಾತುಕತೆ ನಡೆಸಿದ್ದಾರೆ. ಶುಕ್ರವಾರ ರಾತ್ರಿ ಮಲ್ಲಿಕಾರ್ಜುನ್ ಖರ್ಗೆ ನಿವಾಸದಲ್ಲಿ ಒಂದು ಗಂಟೆಗೂ ಹೆಚ್ಚು ಕಾಲ ನಡೆದಿದ್ದು, ರಾಜ್ಯದ ನಾಯಕತ್ವ ಬದಲಾವಣೆ ವಿಚಾರವೇ ಮುಖ್ಯ ಕಾರ್ಯಸೂಚಿಯಾಗಿತ್ತು ತಿಳಿದುಬಂದಿದೆ. ಡಿ.ಕೆ.ಸಹೋದರರು, ಸರ್ಕಾರ ರಚನೆಯಾಗುವ ವೇಳೆ ನಡೆದಿದ್ದ 2.5 ವರ್ಷದ ಅಧಿಕಾರ ಹಂಚಿಕೆ ಒಪ್ಪಂದವನ್ನು ನೆನಪಿಸಿಕೊಂಡು, ಇದೀಗ ಸರ್ಕಾರಕ್ಕೆ ಮೂರು ವರ್ಷ ಪೂರ್ಣಗೊಳ್ಳುತ್ತಿರುವ ಹಿನ್ನೆಲೆ ತಕ್ಷಣ ತೀರ್ಮಾನ ಕೈಗೊಳ್ಳಬೇಕೆಂದು ಒತ್ತಾಯಿಸಿರುವುದಾಗಿ ಮೂಲಗಳು ತಿಳಿಸಿವೆ.

ಸಭೆಯಲ್ಲಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಮೇ 4ರೊಳಗೆ ದೆಹಲಿಗೆ ಕರೆಯಿಸಿ ನಾಯಕತ್ವ ಬದಲಾವಣೆ ಬಗ್ಗೆ ಸ್ಪಷ್ಟ ನಿರ್ಧಾರ ಕೈಗೊಳ್ಳಬೇಕು ಎಂದು ಡಿಕೆ ಸಹೋದರರು ಖರ್ಗೆ ಮುಂದೆ ಪಟ್ಟು ಹಿಡಿದಿದ್ದಾರೆ ಎನ್ನಲಾಗಿದೆ. ಈಗಾಗಲೇ ಸರ್ಕಾರದ ಆಡಳಿತಾತ್ಮಕ ದಾಖಲೆಗಳನ್ನು ಸರಿಪಡಿಸಿರುವುದರಿಂದ ಹಾಗೂ ಐದು ರಾಜ್ಯಗಳ ಚುನಾವಣೆಯೂ ಮುಗಿದಿರುವುದರಿಂದ ಮತ್ತಷ್ಟು ವಿಳಂಬ ಅನಾವಶ್ಯಕ ಎಂದು ಅಭಿಪ್ರಾಯಪಟ್ಟಿದ್ದಾರೆ.

ಮೇ ಹಾಗೂ ಜೂನ್ ತಿಂಗಳಲ್ಲಿ ನಡೆಯಲಿರುವ ವಿಧಾನ ಪರಿಷತ್ ಮತ್ತು ರಾಜ್ಯಸಭೆ ಚುನಾವಣೆಗಳನ್ನು ನೆಪವಿಟ್ಟು ಮತ್ತೆ ನಾಯಕತ್ವ ಬದಲಾವಣೆಯನ್ನು ಮುಂದೂಡುವುದು ಸರಿಯಲ್ಲ ಎಂದು ಡಿಕೆ ಸಹೋದರರು ಸ್ಪಷ್ಟವಾಗಿ ತಿಳಿಸಿದ್ದಾರೆ. ಐದು ರಾಜ್ಯಗಳ ಚುನಾವಣಾ ಫಲಿತಾಂಶ ಹೊರಬರುವುದಕ್ಕೂ ಮುನ್ನವೇ ಈ ವಿಚಾರದಲ್ಲಿ ಅಂತಿಮ ತೀರ್ಮಾನ ಕೈಗೊಳ್ಳಬೇಕು ಎಂದು ಹೈಕಮಾಂಡ್ ಮೇಲೆ ಒತ್ತಡ ತಂದಿದ್ದಾರೆ ಎನ್ನಲಾಗಿದೆ.

# ಎಎಪಿ ಸಂಸದ ಸೇರ್ಪಡೆ: ರಾಜ್ಯಸಭೆಯಲ್ಲಿ ಎನ್‌ಡಿಎ ಬಲವರ್ಧನೆ, 145ಕ್ಕೆ ಏರಿಕೆ

**ನವದೆಹಲಿ, ಏ.25:** ಆಪ್ ಪಕ್ಷದ 7 ರಾಜ್ಯಸಭಾ ಸಂಸದರು ಬಿಜೆಪಿ ಪಕ್ಷಕ್ಕೆ ಸೇರ್ಪಡೆ ಬಳಿಕ ರಾಜ್ಯಸಭೆಯಲ್ಲಿ ಎಂಡಿಎಗೆ ಮೂರನೇ ಎರಡರಷ್ಟು ಬಹುಮತವನ್ನು ಪಡೆಯಲು ಕೇವಲ 17 ಸದಸ್ಯರ ಅವಶ್ಯಕತೆ ಇದೆ. ಆಮ್ ಆದ್ಮಿ ಪಕ್ಷದ ಸಂಸದರ ಪಕ್ಷಾಂತರದೊಂದಿಗೆ ಎನ್‌ಡಿಎ ಈಗ ಮೇಲ್ಮನೆಯಲ್ಲಿ 145 ಸಂಸದರ ಬೆಂಬಲವನ್ನು ಹೊಂದಿದೆ.

■ ಮೂರನೇ ಎರಡರಷ್ಟು ಬಹುಮತಕ್ಕೆ ಕೇವಲ 17 ಸ್ಥಾನಗಳ ಕೊರತೆ

244 ಸದಸ್ಯ ಬಲದ ಸದನದಲ್ಲಿ ಮೂರನೇ ಎರಡರಷ್ಟು ಬಹುಮತದ ಸಂಖ್ಯೆ 163 ಆಗಿದೆ. ರಾಜ್ಯಸಭಾ ಅಧ್ಯಕ್ಷ ಸಿಪಿ ರಾಧಾಕೃಷ್ಣನ್ ಅವರು ಆಪ್ ಸಂಸದರ ವಿಲೀನವನ್ನು ಅನುಮೋದಿಸಿದ ಬಳಿಕ ಆಡಳಿತ ಪಕ್ಷದ ಸಂಸದರ ಸಂಖ್ಯೆ 113ಕ್ಕೆ ಏರಿಕೆಯಾಗಲಿದೆ.

ಪ್ರಸ್ತುತ ಬಿಜೆಪಿ 106 ಸಂಸದರನ್ನು ಹೊಂದಿದೆ. ಇದಲ್ಲದೆ ಆಡಳಿತ ಪಕ್ಷವು ಏಳು ನಾಮನಿರ್ದೇಶಿತ ಸದಸ್ಯರು ಮತ್ತು ಇಬ್ಬರು ಸ್ವತಂತ್ರ ಸಂಸದರ ಬೆಂಬಲವನ್ನು ಪಡೆಯುವ ಸಾಧ್ಯತೆಯಿದೆ. ಇದರಿಂದ ಬಿಜೆಪಿಗೆ ಬೆಂಬಲ ನೀಡುವ ಒಟ್ಟು ಸದಸ್ಯರ ಸಂಖ್ಯೆ 122ಕ್ಕೆ ತಲುಪಲಿದೆ, ಇದು ಸದನದ ಅರ್ಧ ಸಂಖ್ಯೆಗೆ ಸಮವಾಗಿದೆ. ಮೇಲ್ಮನೆಯಲ್ಲಿ ಮೂರನೇ ಎರಡರಷ್ಟು ಬಹುಮತವನ್ನು ಪಡೆದರೆ ಸಾಂವಿಧಾನಿಕ ತಿದ್ದುಪಡಿಗಳ ನಿರ್ಣಾಯಕ ಶಾಸನಗಳನ್ನು ಅಂಗೀಕರಿಸುವುದು ಎಂಡಿಎ ಮೈತ್ರಿಕೂಟಕ್ಕೆ ಸುಲಭವಾಗಿದೆ.

## ಬಿಜೆಪಿಯದ್ದು ವಾಷಿಂಗ್ ಮಷಿನ್ ರಾಜಕೀಯ

**ನವದೆಹಲಿ, ಏಪ್ರಿಲ್ 25:** ಆಮ್ ಆದ್ಮಿ ಪಕ್ಷದ (ಎಎಪಿ) ಏಳು ರಾಜ್ಯಸಭಾ ಸದಸ್ಯರು ಆಡಳಿತ ಪಕ್ಷ ಬಿಜೆಪಿಯೊಂದಿಗೆ ವಿಲೀನಗೊಂಡ ವರದಿಗಳ ನಡುವೆ, ಕಾಂಗ್ರೆಸ್ ನಾಯಕ ಜೈರಾಮ್ ರಮೇಶ್ ಶನಿವಾರ ಭಾರತೀಯ ಜನತಾ ಪಕ್ಷದ ಮೇಲೆ ತೀವ್ರ ವಾಗ್ದಾಳಿ ನಡೆಸಿದರು,



ರಾಜಕೀಯ ಪಕ್ಷಾಂತರಿಗಳನ್ನು ಹೀರಿಕೊಳ್ಳಲು ಮತ್ತು ಅವರ ಹಿಂದಿನ ಸ್ಥಾನಗಳನ್ನು ಶುದ್ಧೀಕರಿಸಲು ಅವರು "ವಾಷಿಂಗ್ ಮೆಷಿನ್" ಎಂದು ಕರೆದದ್ದನ್ನು ಬಳಸುತ್ತಿದ್ದಾರೆ ಎಂದು ಆರೋಪಿಸಿದರು. ರಮೇಶ್ ಹೇಳಿಕೆಯಲ್ಲಿ, "ಮೋದಿ ವಾಷಿಂಗ್ ಪೌಡರ್ ಜೊತೆಗೆ ಬಿಜೆಪಿ ವಾಷಿಂಗ್ ಮೆಷಿನ್ ಮರಳಿದೆ. ಸದ್ಗುಣ, ಸಮಗ್ರತೆ ಮತ್ತು ಸಿದ್ಧಾಂತದ ಮಾದರಿಗಳಾಗಿ ತಮ್ಮನ್ನು ತಾವು ಬಿಂಬಿಸಿಕೊಂಡವರು ಕ್ರೂರವಾಗಿ ಬಹಿರಂಗಗೊಂಡಿದ್ದಾರೆ" ಎಂದು ಹೇಳಿದರು. ಅವರ ಹೇಳಿಕೆಗಳು ಬಿಜೆಪಿ ಮತ್ತು ಪಕ್ಷಾಂತರಗೊಂಡಿರುವ ನಾಯಕರನ್ನು ಗುರಿಯಾಗಿಸಿಕೊಂಡಂತೆ ಕಂಡುಬಂದಿದೆ, ಇದು ಅವರ ಹಿಂದಿನ ಸಾರ್ವಜನಿಕ ನಿಲುವುಗಳು ಮತ್ತು ಪ್ರಸ್ತುತ ರಾಜಕೀಯ ಆಯ್ಕೆಗಳ ನಡುವಿನ ವಿರೋಧಾಭಾಸವನ್ನು ಸೂಚಿಸುತ್ತದೆ.

# ಅಮೆರಿಕದೊಂದಿಗೆ ಒಪ್ಪಂದ ಇಚ್ಛಿಸದ ಇರಾನ್ ನಾಯಕರನ್ನು ಕೊಲ್ಲಿ: ಟ್ರಂಪ್

**ನವದೆಹಲಿ, ಏ.25:** ಅಮೆರಿಕದೊಂದಿಗೆ ಒಪ್ಪಂದ ಮಾಡಿಕೊಳ್ಳಲು ಇಚ್ಛಿಸದ ಇರಾನ್ ನಾಯಕರನ್ನು ಕೊಲ್ಲುವಂತೆ ಕರೆನೀಡುವ ಸಾಮಾಜಿಕ ಮಾಧ್ಯಮದ ಪೋಸ್ಟ್ ಹಂಚಿಕೊಳ್ಳುವ ಮೂಲಕ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತೊಂದು ವಿವಾದ ಸೃಷ್ಟಿಸಿದ್ದಾರೆ. ವಾಷಿಂಗ್ಟನ್ ಪೋಸ್ಟ್ ಅಂಕಣಕಾರ ಮಾರ್ಕ್ ಥಿಸೆನ್ (Xಹ್ಯಾಂಡಲ್ @marcthiessen) ಅವರು, "ಇರಾನ್‌ನಲ್ಲಿ ಎರಡು ಬಣಗಳಿದ್ದು, ಒಂದು ಬಣ ಒಪ್ಪಂದವನ್ನು ಬಯಸಿದರೆ ಮತ್ತೊಂದು ಒಪ್ಪಂದವನ್ನು ಬಯಸದ ಬಣ. ಹಾಗಿದ್ದಾಗ ಒಪ್ಪಂದ ಬಯಸದವರನ್ನು ಕೊಲ್ಲೋಣ ಎಂದು ಎಕ್ಸ್‌ನಲ್ಲಿ ಸಂದೇಶ ಪೋಸ್ಟ್ ಮಾಡಿದ್ದ ಸಂದೇಶವನ್ನು ಅಮೆರಿಕದ ಅಧ್ಯಕ್ಷ ಟ್ರಂಪ್ ಹಂಚಿಕೊಂಡಿದ್ದು, ಇದು ವಿವಾದಕ್ಕೆ ಕಾರಣವಾಗಿದೆ.



■ ಸಾಮಾಜಿಕ ಮಾಧ್ಯಮದಲ್ಲಿ ಸಂದೇಶ ಹಂಚಿಕೊಂಡು ವಿವಾದ ಸೃಷ್ಟಿಸಿದ ಅಧ್ಯಕ್ಷ ಟ್ರಂಪ್

ಇದಕ್ಕೆ ತೀವ್ರವಾಗಿ ಪ್ರತಿಕ್ರಿಯಿಸಿರುವ ಇರಾನ್ ವಿದೇಶಾಂಗ ಸಚಿವಾಲಯದ ವಕ್ತಾರ ಎಸ್ಮಾಯಿಲ್ ಬಘಾಹಿ, ಇದು ಗಂಭೀರ ನೈತಿಕ ಪತನಕ್ಕೆ ಸಾಕ್ಷಿ. ಇಂತಹ ಕ್ರಮಗಳು ಅಮೆರಿಕವು ತನ್ನ ಹಳೆಯ ಮೌಲ್ಯಗಳಿಂದ ದೂರ ಸರಿದು ಹಿಂಸಾಚಾರ ಮತ್ತು ಉಗ್ರವಾದವನ್ನು ಉತ್ತೇಜಿಸುವತ್ತ ಸಾಗುತ್ತಿರುವುದನ್ನು ಪ್ರತಿಬಿಂಬಿಸುತ್ತವೆ ಎಂದಿದ್ದಾರೆ. "ಒಂದು ಕಾಲದಲ್ಲಿ ತನ್ನನ್ನು ತಾನು ಪ್ರಜಾಪ್ರಭುತ್ವ, ಸ್ವಾತಂತ್ರ್ಯ ಮತ್ತು ಮಾನವೀಯ ಮೌಲ್ಯಗಳ ತೊಟ್ಟಿಲು ಎಂದು ಕರೆದುಕೊಳ್ಳುತ್ತಿದ್ದ ಅಮೆರಿಕ, ಈಗ ಭಯೋತ್ಪಾದನೆ, ಕೊಲೆ ಮತ್ತು ಸಾಮೂಹಿಕ ಹಿಂಸಾಚಾರದ ಪ್ರವರ್ತಕನಾಗುತ್ತಿದೆ," ಎಂದು ವಕ್ತಾರರು ಟೀಕಿಸಿದರು. "ಇದನ್ನು ಆಳವಾದ ನೈತಿಕ ವೈಫಲ್ಯ ಎಂದು ಕರೆಯದೆ ಇನ್ನೇನು ಹೇಳಬೇಕು" ಎಂದು ಅವರು ಪ್ರಶ್ನಿಸಿದರು.

## ಇಸ್ಲಾಮಾಬಾದ್‌ನಲ್ಲಿ ಅಮೆರಿಕ ಜತೆ ಯಾವುದೇ ಸಭೆ ನಡೆಸಲ್ಲ: ಇರಾನ್

**ಟೆಹ್ರಾನ್,** ಏ.25: ಇಸ್ಲಾಮಾಬಾದ್‌ನಲ್ಲಿ ಇರಾನ್ ಮತ್ತು ಅಮೆರಿಕ ನಡುವೆ ಯಾವುದೇ ಸಭೆ ನಡೆಸಲು ಯೋಜಿಸಲಾಗಿಲ್ಲ ಎಂದು ಇರಾನ್ ವಿದೇಶಾಂಗ ಸಚಿವಾಲಯದ ವಕ್ತಾರ ಎಸ್ಮಾಯಿಲ್ ಬಘೈ ಶನಿವಾರ ತಿಳಿಸಿದ್ದಾರೆ. ಇರಾನ್ ಮತ್ತು ಅಮೆರಿಕ ನಡುವೆ ಯಾವುದೇ ಸಭೆ ನಡೆಸಲು ಯೋಜಿಸಲಾಗಿಲ್ಲ. ಇರಾನ್‌ನ ಅಭಿಪ್ರಾಯಗಳನ್ನು ಪಾಕಿಸ್ತಾನಕ್ಕೆ ತಿಳಿಸಲಾಗುವುದು ಎಂದು ಹೇಳಿದ್ದಾರೆ. ನಾವು ಅಧಿಕೃತ ಭೇಟಿಗಾಗಿ ಇಸ್ಲಾಮಾಬಾದ್‌ಗೆ ಆಗಮಿಸುತ್ತೇವೆ. ವಿದೇಶಾಂಗ ಸಚಿವ (ಅಬ್ಬಾಸ್) ಅರಘ್ಚಿ ಪಾಕಿಸ್ತಾನದ ಉನ್ನತ ಅಧಿಕಾರಿಗಳನ್ನು ಭೇಟಿಯಾಗಲಿದ್ದಾರೆ ಮತ್ತು ಅಮೆರಿಕ ಹೇರಿದ ಆಕ್ರಮಣಕಾರಿ ಯುದ್ಧವನ್ನು ಕೊನೆಗೊಳಿಸಲು ಮತ್ತು ನಮ್ಮ ಪ್ರದೇಶದಲ್ಲಿ ಶಾಂತಿಯನ್ನು ಪುನಃಸ್ಥಾಪಿಸಲು ಉತ್ತಮ ಕಚೇರಿಗಳನ್ನು ಸಂಪರ್ಕಿಸಲಿದ್ದಾರೆ ಎಂದು ಬಘೈ ಹೇಳಿದ್ದಾರೆ.

# ಗ್ರಾಮೀಣ ಕುಡಿಯುವ ನೀರು ತುರ್ತು ಕಾಮಗಾರಿಗಳಿಗೆ 4500 ಲಕ್ಷ ರೂ. ಅನುದಾನ

**ಬೆಂಗಳೂರು, ಏ.25:** ಸರ್ಕಾರದ ಗ್ರಾಮೀಣ ಕುಡಿಯುವ ನೀರು ಮತ್ತು ಸ್ವಚ್ಛತಾ ಇಲಾಖೆ ವತಿಯಿಂದ 2026?27ನೇ ಸಾಲಿನ ರಾಜ್ಯ ಯೋಜನೆಯಡಿ ಗ್ರಾಮೀಣ ಪ್ರದೇಶಗಳ ಜನರಿಗೆ ಬೇಸಿಗೆ ಅವಧಿಯಲ್ಲಿ ಕುಡಿಯುವ ನೀರಿನ ಅಭಾವ ಎದುರಾದಲ್ಲಿ ಟ್ಯಾಂಕರಗಳ ಮೂಲಕ ಕುಡಿಯುವ ನೀರು ಸರಬರಾಜು ಮಾಡಲು ಹಾಗೂ ಖಾಸಗಿ ಕೊಳವೆಬಾವಿಗಳನ್ನು ಬಾಡಿಗೆ ಪಡೆಯಲು ಹಾಗೂ ಇತರೆ ತುರ್ತು ಕ್ರಮಗಳಿಗೆ 4,500 ಲಕ್ಷ ರೂ. ಅನುದಾನವನ್ನು ವಿವಿಧ ಜಿಲ್ಲೆಗಳಿಗೆ ಅಗತ್ಯನುಸಾರ ಹಂಚಿಕೆ ಮಾಡಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಈ ಅನುದಾನದಲ್ಲಿ ಸಾಮಾನ್ಯ ವೆಚ್ಚಕ್ಕೆ 3415.50 ಲಕ್ಷ ರೂ., ಪರಿಶಿಷ್ಟ ಜಾತಿ ಉಪಯೋಜನೆ (ಎಸ್.ಸಿ.ಪಿ) ಅಡಿ 771.75 ಲಕ್ಷ ರೂ. ಹಾಗೂ. ಹಾಗೂ ಪರಿಶಿಷ್ಟ

### 2026-27ನೇ ಸಾಲಿಗೆ ಜಿಲ್ಲೆಗಳಿಗೆ ಹಂಚಿಕೆ: ಸಚಿವ ಪ್ರಿಯಾಂಕ್ ಖರ್ಗೆ ಮಾಹಿತಿ

ಪಂಗಡಗಳ ಉಪಯೋಜನೆ (ಟಿ.ಎಸ್.ಪಿ) ಅಡಿ 312.75 ಲಕ್ಷ ರೂ. ಮೀಸಲಿಡಲಾಗಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಮಾಹಿತಿ ನಿಡಿದ್ದಾರೆ.

ಗ್ರಾಮೀಣ ಪ್ರದೇಶಗಳಲ್ಲಿ ಉಂಟಾಗುವ ಕುಡಿಯುವ ನೀರಿನ ತುರ್ತು ಸಮಸ್ಯೆಗಳನ್ನು ನಿವಾರಿಸಲು ಟ್ಯಾಂಕರ್ ಮೂಲಕ ಹಾಗೂ ಬಾಡಿಗೆ ಕೊಳವೆಬಾವಿಗಳ ಮೂಲಕ ನೀರು ಸರಬರಾಜು ಮಾಡಲು ಆದ್ಯತೆ ನೀಡಬೇಕು, ಸ್ಥಗಿತಗೊಂಡಿರುವ ಕೊಳವೆಬಾವಿಗಳನ್ನು ಫ್ಲಶಿಂಗ್ / redrilling / hydrofracturing ಮೂಲಕ ಆಳಗೊಳಿಸಲು



ಪ್ರಯತ್ನಿಸಬೇಕು, ಅನಿವಾರ್ಯವಾದಲ್ಲಿ ಮಾತ್ರ ಭೂವಿಜ್ಞಾನಿಗಳ ಸಲಹೆ ಮೇರೆಗೆ ಹೊಸ ಕೊಳವೆಬಾವಿ ಕೊರೆಯಲು ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಲಾಗಿದೆ ಎಂದೂ ಸಚಿವ ಪ್ರಿಯಾಂಕ್ ಖರ್ಗೆ ಮಾಹಿತಿ ನೀಡಿದ್ದಾರೆ. ಹಾಗೂ ಇಂಥ ಕ್ರಮಗಳಿಗೆ Task Force ಸಮಿತಿಯಲ್ಲಿ ಅನುಮೋದನೆಯನ್ನು ಪಡೆಯಲು ಸಿಇಓಗಳಿಗೆ ತಿಳಿಸಲಾಗಿದೆ.

ಯೋಜನೆಗಳ ಅನುಷ್ಠಾನದಲ್ಲಿ ಗುಣಮಟ್ಟ ಮತ್ತು ಪಾರದರ್ಶಕತೆಯನ್ನು ಕಟ್ಟುನಿಟ್ಟಾಗಿ ಪಾಲಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದ್ದು, ಕಾರ್ಯಗಳ ಪ್ರಗತಿಯನ್ನು ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಸಂಬಂಧಿಸಿದ ಇಂಜಿನಿಯರ್‌ಗಳು ನಿಯಮಿತವಾಗಿ ಪರಿಶೀಲಿಸುವ ಜವಾಬ್ದಾರಿಯನ್ನು ಹೊತ್ತುಕೊಳ್ಳಬೇಕು ಎಂದು ನಿರ್ದೇಶಿಸಿರುವ ಸಚಿವರು ಈ ಕ್ರಮದಿಂದ ಗ್ರಾಮೀಣ ಪ್ರದೇಶಗಳಲ್ಲಿ ಸುರಕ್ಷಿತ ಕುಡಿಯುವ ನೀರಿನ ಲಭ್ಯತೆ ಹೆಚ್ಚಾಗಿ, ಸಾರ್ವಜನಿಕ ಆರೋಗ್ಯ ಮತ್ತು ಜೀವನಮಟ್ಟದಲ್ಲಿ ಮಹತ್ವದ ಸುಧಾರಣೆ ಕಾಣಿಸಿಕೊಳ್ಳಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಈ ಸಂಬಂಧ ವಿವರವಾದ ಆದೇಶವನ್ನು ಗ್ರಾಮೀಣ ನೀರು ಸರಬರಾಜು ಇಲಾಖೆ ಹೊರಡಿಸಿದ್ದು ಅಧಿಕಾರಿಗಳಿಗೆ ರವಾನಿಸಿದೆ.

### ಯಾವ ಜಿಲ್ಲೆಗೆ ಎಷ್ಟು? (ಲಕ್ಷ ರೂ.ಗಳಲ್ಲಿ)

**ಬಾಗಲಕೋಟೆ 150, ಬೆಂಗಳೂರು 150, ಬೆಳಗಾವಿ 200, ಬೆಂಗಳೂರು (ಗ್ರಾ) 150, ಬೆಂಗಳೂರು (ನಗರ) 150, ಬೀದರ್, 150, ಚಾಮರಾಜನಗರ 150, ಚಿಕ್ಕಬಳ್ಳಾಪುರ 150, ಚಿಕ್ಕಮಗಳೂರು 150, ಚಿತ್ರದುರ್ಗ 150, ದಕ್ಷಿಣ ಕನ್ನಡ 100, ದಾವಣಗೆರೆ 100, ಧಾರವಾಡ 100, ಗದಗ 100, ಹಾಸನ 150, ಹಾವೇರಿ 150, ಕಲಬುರಗಿ 200, ಕೊಡಗು 100, ಕೋಲಾರ, 200, ಕೊಪ್ಪಳ, 150, ಮಂಡ್ಯ 100, ಮೈಸೂರು, 150, ರಾಯಚೂರು 200, ರಾಮನಗರ 200, ಶಿವಮೊಗ್ಗ 150, ತುಮಕೂರು 100, ಉಡುಪಿ 200, ಉತ್ತರ ಕನ್ನಡ 100, ವಿಜಯನಗರ 150, ವಿಜಯಪುರ 150, ಯಾದಗಿರಿ 150.**

# ಎಎಪಿ ಸಂಸದರ ಬಿಜೆಪಿ ಸೇರ್ಪಡೆ ತನಿಖಾ ಸಂಸ್ಥೆಗಳ ದುರುಪಯೋಗದ ಪರಿಣಾಮ: ಸಿಪಿಐಎಂ ಆರೋಪ

**ನವದೆಹಲಿ, ಏ.25:** ರಾಜ್ಯಸಭಾ ಸದಸ್ಯರಾದ ರಾಘವ್ ಛಡ್ಡಾ, ಅಶೋಕ್ ಮಿತ್ತಲ್ ಮತ್ತು ಸಂದೀಪ್ ಪಾಠಕ್ ಅವರು ಶುಕ್ರವಾರ ಎಎಪಿ ತೊರೆದಿದ್ದು, ಬಿಜೆಪಿ ಸೇರ್ಪಡೆಯಾಗುವುದಾಗಿ ಘೋಷಿಸಿದ್ದಾರೆ. ಆದರೆ ಈ ಮೂವರು ಸಂಸದರ ಈ ನಿರ್ಧಾರವು ಜನರ ನಂಬಿಕೆಗೆ ಬಗೆಯುವ ದ್ರೋಹ. ಇದು ಆಡಳಿತಾರೂಢ ಬಿಜೆಪಿಯ ತನಿಖಾ ಸಂಸ್ಥೆಗಳ ದುರುಪಯೋಗ ಮಾಡಿರುವ ಪರಿಣಾಮ ಎಂದು ಸಿಪಿಐಎಂ ರಾಜ್ಯಸಭಾ ನಾಯಕ ಜಾನ್ ಬ್ರಿಟ್ಟಾಸ್ ಆರೋಪಿಸಿದ್ದಾರೆ. ರಾಜ್ಯಸಭಾ ಸದಸ್ಯ ಅಶೋಕ್ ಮಿತ್ತಲ್ ವಿರುದ್ಧ ಜಾರಿ ನಿರ್ದೇಶನಾಲಯ ದಾಳಿಯ ನಂತರ ಇದೀಗ ಬಿಜೆಪಿ ಸೇರ್ಪಡೆಗೆ ಮುಂದಾಗುತ್ತಿದ್ದಾರೆ. ಈ ಹಿಂದೆಯೇ ರಾಜಕೀಯ ಉದ್ದೇಶಗಳಿಗಾಗಿ ಕೇಂದ್ರ ಸಂಸ್ಥೆಗಳನ್ನು ಬಳಸುವುದರ ವಿರುದ್ಧ ಸುಪ್ರೀಂ



ಕೋರ್ಟ್ ಎಚ್ಚರಿಕೆ ನೀಡಿತ್ತು ಎಂದು ಜಾನ್ ಬ್ರಿಟ್ಟಾಸ್ ಹೇಳಿದ್ದಾರೆ.

ಇನ್ನು ಬಿಜೆಪಿ ವಿರೋಧಿಯಾಗಿದ್ದುಕೊಂಡು ರಾಜ್ಯಸಭೆಗೆ ಆಯ್ಕೆಯಾದ ಎಎಪಿ ಸಂಸದರು ಈಗ ಬಿಜೆಪಿಗೆ ಸೇರುವ ಮೊದಲು ರಾಜ್ಯಸಭೆಗೆ ರಾಜೀನಾಮೆ ನೀಡಬೇಕಾಗಿತ್ತು ಎಂದು ಸಿಪಿಐ(ಎಂಎಲ್) ಪ್ರಧಾನ ಕಾರ್ಯದರ್ಶಿ ದೀಪಂಕರ್ ಭಟ್ಟಾಚಾರ್ಯ ಹೇಳಿದ್ದಾರೆ. ಬಿಜೆಪಿ ವಿರೋಧಿ ಮತಗಳನ್ನು ಪಡೆದು ಆಯ್ಕೆಯಾದವರು ಈ ಎಎಪಿ ನಾಯಕರು. ಇದೀಗ ಬಿಜೆಪಿಗೆ ಸೇರುವುದು ಮತದಾರರ ನಂಬಿಕೆ ಮತ್ತು ಜನಾದೇಶಕ್ಕೆ ಮಾಡಿದ ದ್ರೋಹ. ಈ ಸಂಸದರು ತಮ್ಮ ರಾಜಕೀಯ ಪಕ್ಷವನ್ನು ಬದಲಾಯಿಸಲು ಸ್ವತಂತ್ರರು. ಆದರೆ ತಮ್ಮ ಮತದಾರರನ್ನು ಅವಮಾನಿಸುವ ಯಾವುದೇ ಹಕ್ಕು ಅವರಿಗಿಲ್ಲ ಎಂದು ಭಟ್ಟಾಚಾರ್ಯ ತಿಳಿಸಿದ್ದಾರೆ.

ರಾಘವ್ ಛಡ್ಡಾ ಪಕ್ಷದ ಚಟುವಟಿಕೆಗಳಿಂದ ದೂರ ಉಳಿಯುತ್ತಿದ್ದಂತೆ ಎಎಪಿ ರಾಜ್ಯಸಭೆಯ ಉಪನಾಯಕರ ಸ್ಥಾನದಿಂದ ಚಡ್ಡಾ ಅವರನ್ನು ತೆಗೆದುಹಾಕಿ ಅಶೋಕ್ ಮಿತ್ತಲ್ ಅವರಿಗೆ ಆ ಸ್ಥಾನವನ್ನು ನೀಡಲಾಗಿತ್ತು. ಅದಾದ ಬೆನ್ನಲ್ಲೇ ಅಶೋಕ್ ಮಿತ್ತಲ್ ಅವರ ನಿವಾಸ ಮತ್ತು ಕಚೇರಿಗಳ ಮೇಲೆ ಜಾರಿ ನಿರ್ದೇಶನಾಲಯ ಇ.ಡಿ ದಾಳಿ ನಡೆಸಿದೆ.

ಅಶೋಕ್ ಮಿತ್ತಲ್ ಅವರ ಮೇಲೆ ಇಡಿ ದಾಳಿ ನಡೆಯಲು ರಾಘವ್ ಚಡ್ಡಾ ಅವರೇ ಕಾರಣ ಎಂದು ಆಮ್ ಆದ್ಮಿ ಪಕ್ಷದ ಕೆಲವು ನಾಯಕರು ಆರೋಪಿಸಿದ್ದರು. ರಾಘವ್ ಚಡ್ಡಾ ಅವರು ಬಿಜೆಪಿಯೊಂದಿಗೆ ಕೈಜೋಡಿಸಿ ಈ ದಾಳಿಗೆ ಸಂಚು ರೂಪಿಸಿದ್ದಾರೆ ಎಂಬುದು ಪಕ್ಷದ ಆರೋಪವಾಗಿತ್ತು. ಎಲ್ಲ ಆರೋಪಗಳ ಬೆನ್ನಲ್ಲೇ ಇದೀಗ ಚಡ್ಡಾ, ಮಿತ್ತಲ್ ಸೇರಿದಂತೆ ಮೂವರು ಎಎಪಿ ಸಂಸದರು ಬಿಜೆಪಿ ಸೇರಲು ಮುಂದಾಗಿದ್ದಾರೆ. ಆದ್ದರಿಂದ ಕೇಂದ್ರ ಸರ್ಕಾರವು ತನಿಖಾ ಸಂಸ್ಥೆಗಳನ್ನು ದುರುಪಯೋಗ ಮಾಡಿಕೊಂಡು ನಾಯಕರುಗಳು ಬಿಜೆಪಿ ಸೇರುವಂತೆ ಮಾಡುತ್ತಿದೆ ಎಂಬ ಚರ್ಚೆಗಳು ಹೆಚ್ಚಾಗಿದೆ.



ಜಮ್ಮು ಮತ್ತು ಕಾಶ್ಮೀರದ ಮಾಜಿ ಮುಖ್ಯಮಂತ್ರಿ ಮತ್ತು ಪೀಪಲ್ಸ್ ಡೆಮಾಕ್ರಟಿಕ್ ಪಕ್ಷದ ಅಧ್ಯಕ್ಷೆ ಮೆಹಬೂಬಾ ಮುಫ್ತಿ, ಶನಿವಾರ ದಕ್ಷಿಣ ಕಾಶ್ಮೀರದ ಅನಂತನಾಗ್ ಜಿಲ್ಲೆಯ ಡಾಕ್ ಬಂಗಲೋದಲ್ಲಿ ಸಾರ್ವಜನಿಕ ರ‍್ಯಾಲಿಯಲ್ಲಿ ಮಾತನಾಡಿದರು.

# ಪಕ್ಷಾಂತರಿ ರಾಜ್ಯಸಭಾ ಸದಸ್ಯರ ಅನರ್ಹತೆಗೆ ಆಮ್‌ಆದ್ಮಿ ಕೋರಲಿದೆ: ಛಡ್ಡಾ, ಮಲಿವಾಲ್‌ಗೆ ಸಂಜಯ್ ತಿರುಗೇಟು

**ನವದೆಹಲಿ, ಏ.25:** ಏಳು ರಾಜ್ಯಸಭಾ ಸಂಸದರು ಪಕ್ಷ ತೊರೆದು ಬಿಜೆಪಿಗೆ ಸೇರಿದ ಒಂದು ದಿನದ ನಂತರ, ಹಿರಿಯ ನಾಯಕ ಸಂಜಯ್ ಸಿಂಗ್ ಶನಿವಾರ ತಮ್ಮ ಪಕ್ಷವು ರಾಜ್ಯಸಭಾ ಅಧ್ಯಕ್ಷರಿಗೆ ಮೇಲ್ಮನೆಯಿಂದ ಅವರನ್ನು ಅನರ್ಹಗೊಳಿಸುವಂತೆ ಕೋರಿ ಪತ್ರ ಬರೆಯಲಿದೆ ಎಂದು ಹೇಳಿದ್ದಾರೆ.

"ಪಕ್ಷಾಂತರ ವಿರೋಧಿ ಕಾನೂನು ರಾಜ್ಯಸಭೆ ಅಥವಾ ಲೋಕಸಭೆಯಲ್ಲಿ ಯಾವುದೇ ವಿಭಜನೆ ಅಥವಾ ಬಣವನ್ನು ಅನುಮತಿಸುವುದಿಲ್ಲ ಎಂದು ಸ್ಪಷ್ಟವಾಗಿ ಹೇಳುತ್ತದೆ. ಅಂತಹ ಕ್ರಮಗಳಿಗೆ ಮೂರನೇ ಎರಡರಷ್ಟು ಬಹುಮತದ ಬೆಂಬಲವಿದ್ದರೂ ಸಹ ಯಾವುದೇ ಕಾನೂನು ಮಾನ್ಯತೆ ಇಲ್ಲ" ಎಂದು ಸಿಂಗ್ ಹೇಳಿದರು. ಏತನ್ಮಧ್ಯೆ, ಪಕ್ಷಾಂತರಗೊಂಡ ಎಎಪಿ ಸಂಸದೆ ಸ್ವಾತಿ ಮಲಿವಾಲ್ ಪಕ್ಷವು ತನ್ನ ಮೂಲ ತತ್ವಗಳಿಂದ "ದೂರ ಸಾಗಿದೆ" ಮತ್ತು ಅದರ ನಾಯಕ ಅರವಿಂದ್ ಕೇಜ್ರಿವಾಲ್ ಇನ್ನು ಮುಂದೆ ಅದೇ ವ್ಯಕ್ತಿಯಲ್ಲ ಎಂದು ಆರೋಪಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿಯವರ "ನಿರ್ಣಾಯಕ ಮತ್ತು ಬಲವಾದ ನಾಯಕತ್ವ" ವನ್ನು ಶ್ಲಾಘಿಸಿದ ಮಲಿವಾಲ್, "ನಾನು ನನ್ನ ಮನೆಯನ್ನು ತೊರೆದಿದ್ದೇನೆ, ಏಳು ವರ್ಷಗಳ ಕಾಲ ಕೊಳೆಗೇರಿಗಳಲ್ಲಿ ವಾಸಿಸುತ್ತಿದ್ದೆ, ನನ್ನ ಕೆಲಸವನ್ನು



ತ್ಯಜಿಸಿದೆ ಮತ್ತು ಪ್ರತಿಯೊಂದು ಚಳುವಳಿಯನ್ನು ಬೆಂಬಲಿಸಿದೆ. ಆದರೆ ಹಲ್ಲೆಗೊಳಗಾದ ನಂತರ ನಾನು ಎಫ್‌ಐಆರ್ ದಾಖಲಿಸಲು ಪ್ರಯತ್ನಿಸಿದಾಗ, ಕೇಜ್ರಿವಾಲ್ ಅವರ ನಿವಾಸದಲ್ಲಿ ಅವರ ಸಹಾಯಕರಿಂದ ನನಗೆ ಥಳಿಸಲಾಯಿತು." ದೂರನ್ನು ಮುಂದುವರಿಸಲು ಪ್ರಯತ್ನಿಸಿದಾಗ, ಅದನ್ನು ಹಿಂಪಡೆಯಲು "ಬೆದರಿಕೆ ಮತ್ತು ಒತ್ತಡ" ಹಾಕಲಾಯಿತು ಎಂದು ಅವರು ಹೇಳಿಕೊಂಡಿದ್ದಾರೆ. ದೆಹಲಿಯಲ್ಲಿ ಬಿಜೆಪಿಗೆ ಅಧಿಕಾರ ಕಳೆದುಕೊಂಡು ಕೇವಲ ಒಂದು ವರ್ಷದ ನಂತರ, ಶುಕ್ರವಾರ ಎಎಪಿಯ ಏಳು ರಾಜ್ಯಸಭಾ ಸಂಸದರಾದ ರಾಘವ್ ಛಡ್ಡಾ, ಸ್ವಾತಿ ಮಲಿವಾಲ್, ಸಂದೀಪ್ ಪಾಠಕ್, ಹರ್ಭಜನ್ ಸಿಂಗ್, ಅಶೋಕ್ ಮಿತ್ತಲ್, ರಾಜಿಂದರ್ ಗುಪ್ತಾ ಮತ್ತು ವಿಕ್ರಮ್ ಸಾಹ್ನಿ ಪಕ್ಷಕ್ಕೆ ರಾಜೀನಾಮೆ ನೀಡಿದಾಗ ಅದು ದೊಡ್ಡ ಹಿನ್ನಡೆಯನ್ನು ಅನುಭವಿಸಿತು. "ಯಾವುದೇ ಒಳ್ಳೆಯ ವ್ಯಕ್ತಿ ಅವರೊಂದಿಗೆ ಹೆಚ್ಚು ಕಾಲ ಕೆಲಸ ಮಾಡಲು ಸಾಧ್ಯವಿಲ್ಲ. ಅವರು ಒಂದು ಹೇಳುತ್ತಾರೆ ಇನ್ನೊಂದು ಮಾಡುತ್ತಾರೆ" ಎಂದು ಮಲಿವಾಲ್ ಕೇಜ್ರಿವಾಲ್ ಬಗ್ಗೆ ಹೇಳಿದರು.

# ಮರಾಠಿಗೆ ಆದ್ಯತೆ ನೀಡಬೇಕು, ಆದರೆ ಭಾಷೆಯ ಹೆಸರಿನಲ್ಲಿ ಹಿಂಸಾಚಾರ ಸಹಿಸುವುದಿಲ್ಲ: ಮಹಾರಾಷ್ಟ್ರ ಮುಖ್ಯಮಂತ್ರಿ ಎಚ್ಚರಿಕೆ

**ಮುಂಬೈ,ಏ.25:** ರಾಜ್ಯದಲ್ಲಿ ಮರಾಠಿಗೆ ಆದ್ಯತೆ ನೀಡಬೇಕು, ಆದರೆ ಭಾಷೆಯ ಹೆಸರಿನಲ್ಲಿ ಯಾವುದೇ ರೀತಿಯ ಹಿಂಸಾಚಾರವನ್ನು ಸಹಿಸುವುದಿಲ್ಲ ಸಿಎಂ ದೇವೇಂದ್ರ ಫಡ್ನವೀಸ್ ಎಚ್ಚರಿಕೆ ನೀಡಿದ್ದಾರೆ. ಮುಂಬೈನಂತಹ ನಗರಗಳು ಮತ್ತು ಮಹಾರಾಷ್ಟ್ರದಾದ್ಯಂತ ಮರಾಠಿಯನ್ನು ಪ್ರಚಾರ ಮಾಡುವುದು ತಪ್ಪಲ್ಲ ಆದರೆ ಅದನ್ನು ಜವಾಬ್ದಾರಿಯುತವಾಗಿ ಮಾಡಬೇಕು ಎಂದು ಹೇಳಿದರು. ಭಾಷಾ ಸಮಸ್ಯೆ ಇತ್ಯರ್ಥಪಡಿಸಲು ಮರಾಠಿ ಅರ್ಥವಾಗದ ಆಟೋ ಮತ್ತು ಟ್ಯಾಕ್ಸಿ ಚಾಲಕರಿಗೆ ಭಾಷಾ ತರಬೇತಿಯನ್ನು ನೀಡಲಾಗುವುದು, ಭಾಷೆ ತಿಳಿಯದ ಚಾಲಕರಿಗೆ ನಾವು ಮರಾಠಿ ಕಲಿಸುತ್ತೇವೆ. ಭಾಷೆಯ ಹೆಸರಿನಲ್ಲಿ ಬಲವಂತಪಡಿಸುವುದು ಅಥವಾ ಹಿಂಸಾಚಾರದಲ್ಲಿ ತೊಡಗುವುದು ಸ್ವೀಕಾರಾರ್ಹವಲ್ಲ ಎಂದು



ಫಡ್ನವೀಸ್ ಹೇಳಿದರು.

ಮುಂಬೈ ಸಮೀಪದ ಥಾಣೆಯಲ್ಲಿ ಮಹಾರಾಷ್ಟ್ರ ನವನಿರ್ಮಾಣ ಸೇನೆಯ ಕಚೇರಿಯ ಬಳಿ ಮರಾಠಿಯೇತರ ಆಟೋ ಮತ್ತು ಟ್ಯಾಕ್ಸಿ ಚಾಲಕರಿಗೆ ಎಚ್ಚರಿಕೆ ನೀಡುವ ಬ್ಯಾನರ್‌ಗಳನ್ನು ಹಾಕಲಾಗಿದ್ದ ಉದ್ವಿಗ್ನತೆಯ ಹಿನ್ನೆಲೆಯಲ್ಲಿ ಸಿಎಂ ದೇವೇಂದ್ರ ಫಡ್ನವೀಸ್ ಈ ಹೇಳಿಕೆ ನೀಡಿದರು. ಮೇ 1 ರಿಂದ ಮಹಾರಾಷ್ಟ್ರದಾದ್ಯಂತ ಆಟೋ ಮತ್ತು ಟ್ಯಾಕ್ಸಿ ಚಾಲಕರನ್ನು ಅವರ ಮರಾಠಿ ಪ್ರಾವೀಣ್ಯತೆಗಾಗಿ ಮೌಲ್ಯಮಾಪನ ಮಾಡಲಾಗುವುದು ಎಂದು ಸಾರಿಗೆ ಸಚಿವ ಪ್ರತಾಪ್ ಸರ್‌ನಾಯಕ್ ಘೋಷಿಸಿದರು. ಮರಾಠಿಯೇತರ ಚಾಲಕರಿಗೆ ತರಬೇತಿ ಮಾಡ್ಯೂಲ್‌ಗಳನ್ನು ವಿನ್ಯಾಸಗೊಳಿಸಲು ಸರ್ಕಾರವು ಕೊಂಕಣ ಮರಾಠಿ ಸಾಹಿತ್ಯ ಪರಿಷತ್ ಮತ್ತು ಮುಂಬೈ ಮರಾಠಿ ಸಾಹಿತ್ಯ ಸಂಘದಂತಹ ಸಂಸ್ಥೆಗಳೊಂದಿಗೆ ಪಾಲುದಾರಿಕೆ ಹೊಂದಿದೆ. ಯಾವುದೇ ಲಿಖಿತ ಪರೀಕ್ಷೆ ಇರುವುದಿಲ್ಲ, ಬದಲಾಗಿ, ಮೂಲ ಮರಾಠಿಯನ್ನು ಅರ್ಥಮಾಡಿಕೊಳ್ಳುವ ಮತ್ತು ಮಾತನಾಡುವ ಸಾಮರ್ಥ್ಯದ ಮೇಲೆ ಚಾಲಕರನ್ನು ಮೌಲ್ಯಮಾಪನ ಮಾಡಲಾಗುತ್ತದೆ ಎಂದು ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ. ಅರ್ಹತೆ ಪಡೆದವರಿಗೆ ಪ್ರಾವೀಣ್ಯತೆಯ ಪುರಾವೆಯಾಗಿ ಪ್ರಮಾಣೀಕರಣವನ್ನು ನೀಡಲಾಗುತ್ತದೆ.

# ತೆಲಂಗಾಣ ರಾಷ್ಟ್ರ ಸೇನಾ ಹೆಸರಿನ ಹೊಸ ರಾಜಕೀಯ ಪಕ್ಷ ಆರಂಭಿಸಿದ ಕವಿತಾ

**ಹೈದ್ರಬಾದ್,ಏ.25:** ತೆಲಂಗಾಣ ಮಾಜಿ ಮುಖ್ಯಮಂತ್ರಿ ಕೆ. ಚಂದ್ರಶೇಖರ್ ರಾವ್ ಅವರ ಪುತ್ರಿ ಕೆ. ಕವಿತಾ ತೆಲಂಗಾಣ ರಾಷ್ಟ್ರ ಸೇನಾ ಹೆಸರಿನ ಹೊಸ ರಾಜಕೀಯ ಪಕ್ಷ ಸ್ಥಾಪಿಸಿದ್ದಾರೆ. ಕಳೆದ ವರ್ಷ ಕೆ. ಕವಿತಾ ಅವರನ್ನು ಬಿಆರ್‌ಎಸ್ನಿಂದ ಅಮಾನತುಗೊಳಿಸಲಾಗಿತ್ತು.

ತಮ್ಮ ಹೊಸಪಕ್ಷವನ್ನು ಕೆ. ಕವಿತಾ ಹೈದರಾಬಾದ್‌ನಲ್ಲಿ ಉದ್ಘಾಟಿಸಿದರು. ಹೊಸ ಪಕ್ಷವನ್ನು ಪ್ರಾರಂಭಿಸುವ ಮೊದಲು, 1969 ರ ತೆಲಂಗಾಣಕ್ಕೆ ಪ್ರತ್ಯೇಕ ರಾಜ್ಯಕ್ಕಾಗಿ ಒತ್ತಾಯಿಸಿ ನಡೆದ ಚಳವಳಿಯ ಸಮಯದಲ್ಲಿ ಪ್ರಾಣ ಕಳೆದುಕೊಂಡವರಿಗೆ ಕವಿತಾ ಗೌರವ ಸಲ್ಲಿಸಿದರು. ರಾಜ್ಯದ ಜನರ ಆಶಯಗಳನ್ನು ಈಡೇರಿಸುವ ಮತ್ತು ಅದರ ಅಪೂರ್ಣ ಕಾರ್ಯಸೂಚಿಯನ್ನು ಪೂರೈಸುವತ್ತ ತಮ್ಮ ಪಕ್ಷ ಗಮನಹರಿಸುತ್ತದೆ ಎಂದು ಕವಿತಾ ಹೇಳಿದರು.

ಇಂದು ನಾವು ಹೊಸಪಕ್ಷವನ್ನು ಟಿಆರ್‌ಎಸ್ ಅಥವಾ ತೆಲಂಗಾಣ ರಾಷ್ಟ್ರಸೇನಾ ಎಂದು ಕರೆಯಲಾಗುತ್ತದೆ. ನಾವು ಚುನಾವಣಾ ಆಯೋಗಕ್ಕೂ ಅರ್ಜಿ ಸಲ್ಲಿಸಿದ್ದೇವೆ. ಅದರ ಅನುಮೋದನೆಗಾಗಿ ನಾವು ಆಶಿಸಿದ್ದೆವು. ತೆಲಂಗಾಣ ರಾಷ್ಟ್ರ ಸೇನಾ ಅಂತಿಮ ಹೆಸರಾಗಬೇಕೆಂದು



ನಾವು ಆಶಿಸುತ್ತೇವೆ. ಈ ಹೆಸರಿಗಾಗಿ ನಾವು ನಮ್ಮ ಜೀವನದುದ್ದಕ್ಕೂ ಶ್ರಮಿಸಿದ್ದೇವೆ.


ಟಿಆರ್‌ಎಸ್ ಅನ್ನು ಯಶಸ್ವಿಗೊಳಿಸಲು ನಾವು 20 ವರ್ಷಗಳ ಕಠಿಣ ಪರಿಶ್ರಮವನ್ನು ಹಾಕಿದ್ದೇವೆ. ತೆಲಂಗಾಣವನ್ನು ರಾಜ್ಯವನ್ನಾಗಿ ಮಾಡುವಲ್ಲಿ ನಾವು ಯಶಸ್ವಿಯಾಗಿದ್ದೇವೆ.

ದುರದೃಷ್ಟವಶಾತ್, ಅದರ ನಂತರ, ವಿಷಯಗಳು ದಾರಿತಪ್ಪಿದವು ಮತ್ತು ಜನರ ಆಶಯಗಳನ್ನು ಗೌರವಿಸಲಾಗಿಲ್ಲ. ಬಿಜೆಪಿಯ 10 ವರ್ಷಗಳ ಆಳ್ವಿಕೆಯಲ್ಲಿ ಅಥವಾ ಕಾಂಗ್ರೆಸ್ನ ಎರಡು ವರ್ಷಗಳ ಆಳ್ವಿಕೆಯಲ್ಲಿ, ರೈತರು ಮತ್ತು ಯುವಕರ ನಿರೀಕ್ಷೆಗಳು ಈಡೇರಲಿಲ್ಲ. ಟಿಆರ್‌ಎಸ್ ಸಂಪೂರ್ಣವಾಗಿ ಪ್ರಾದೇಶಿಕ ಪಕ್ಷವಾಗಿದ್ದು, ಪ್ರಾದೇಶಿಕ ಸಮಸ್ಯೆಗಳ ಮೇಲೆ 95% ಗಮನಹರಿಸುತ್ತದೆ. ಒಬಿಸಿಗಳಿಗೆ 50% ಮೀಸಲಾತಿಗಾಗಿಯೂ ನಾವು ಹೋರಾಡುತ್ತೇವೆ ಎಂದು ಕವಿತಾ ಹೇಳಿದರು.

# ವಿಧಾನಸಭಾ ಚುನಾವಣೆಯಲ್ಲಿ ಗಂಭೀರ ದುರ್ನಡತೆ ಐವರು ಪೊಲೀಸ್ ಅಧಿಕಾರಿಗಳ ಅಮಾನತು

ಕೋಲ್ಕತ್ತಾ: ವಿಧಾನಸಭಾ ಚುನಾವಣೆಯ ಸಮಯದಲ್ಲಿ ತಟಸ್ಥತೆಯನ್ನು ಕಾಯ್ದುಕೊಳ್ಳಲು ವಿಫಲರಾದ ಮತ್ತು "ಗಂಭೀರ ದುರ್ನಡತೆ" ತೋರಿದ ಆರೋಪದ ಮೇಲೆ ಡೈಮಂಡ್ ಹಾರ್ಬರ್ನಲ್ಲಿ ನಿಯೋಜಿಸಲಾದ ಐದು ಪೊಲೀಸ್ ಅಧಿಕಾರಿಗಳನ್ನು ಅಮಾನತುಗೊಳಿಸಿ ಅವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವಂತೆ ಚುನಾವಣಾ ಆಯೋಗ ಪಶ್ಚಿಮ ಬಂಗಾಳ ಸರ್ಕಾರಕ್ಕೆ ನಿರ್ದೇಶನ ನೀಡಿದೆ.

ಪಶ್ಚಿಮ ಬಂಗಾಳದ ಮುಖ್ಯ ಚುನಾವಣಾಧಿಕಾರಿ ಪೊಲೀಸ್ ಸಿಬ್ಬಂದಿಯ ನಡವಳಿಕೆಯ ಕುರಿತು ಸಲ್ಲಿಸಿದ ವರದಿಯನ್ನು ಆಧರಿಸಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಚುನಾವಣಾ ಸಮಿತಿಯು ರಾಜ್ಯ ಮುಖ್ಯ ಕಾರ್ಯದರ್ಶಿಗೆ ತಿಳಿಸಿದೆ. ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಸಂದೀಪ್ ಗರ್ಗ್, ಎಸ್‌ಡಿಪಿಒ ಸಜಲ್ ಮೊಂಡಲ್, ಡೈಮಂಡ್ ಹಾರ್ಬರ್ ಪೊಲೀಸ್ ಠಾಣೆಯ



ಉಸ್ತುವಾರಿ ಇನ್ಸ್‌ಪೆಕ್ಟರ್ ಮೌಸಮ್ ಚಕ್ರವರ್ತಿ, ಫಾಲ್ಟಾ ಪೊಲೀಸ್ ಠಾಣೆಯ ಉಸ್ತುವಾರಿ ಇನ್ಸ್ಪೆಕ್ಟರ್ ಅಜಯ್ ಬಾಗ್ ಮತ್ತು ಉಸ್ಥಿ ಪೊಲೀಸ್ ಠಾಣೆಯ ಉಸ್ತುವಾರಿ ಅಧಿಕಾರಿ ಸುಭೇಚಾ ಬಾಗ್ ವಿರುದ್ಧ ಕ್ರಮಕ್ಕೆ ಸೂಚಿಸಿದೆ.

2026 ರ ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯ ಸಮಯದಲ್ಲಿ ಅವರ ಗಂಭೀರ ದುಷ್ಕೃತ್ಯ ಮತ್ತು ತಟಸ್ಥತೆಯನ್ನು ಕಾಯ್ದುಕೊಳ್ಳಲು ವಿಫಲವಾದ ಅಧಿಕಾರಿಗಳನ್ನು ತಕ್ಷಣವೇ ಅಮಾನತುಗೊಳಿಸಬೇಕು ಮತ್ತು ಶಿಸ್ತು ಕ್ರಮ ಕೈಗೊಳ್ಳಬೇಕೆಂದು ಆಯೋಗವು ನಿರ್ದೇಶಿಸುತ್ತದೆ ಎಂದು ಚುನಾವಣಾ ಆಯೋಗವು ತನ್ನ ಆದೇಶದಲ್ಲಿ ತಿಳಿಸಿದೆ.

ಐಪಿಎಸ್ ಅಧಿಕಾರಿಯಾಗಿರುವ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಗರ್ಗ್ ಅವರ ಕುರಿತು ಗೃಹ ಸಚಿವಾಲಯದಲ್ಲಿರುವ ಅವರ ಕೇಡರ್ ನಿಯಂತ್ರಣ ಪ್ರಾಧಿಕಾರಕ್ಕೆ ವರದಿಯನ್ನು ಕಳುಹಿಸುವಂತೆ ಆಯೋಗವು ರಾಜ್ಯ ಸರ್ಕಾರವನ್ನು ಕೇಳಿದೆ. ಅದೇ ಆದೇಶದಲ್ಲಿ, ಚುನಾವಣಾ ಕರ್ತವ್ಯದ ಸಮಯದಲ್ಲಿ ಅಧೀನ ಅಧಿಕಾರಿಗಳಲ್ಲಿ ಶಿಸ್ತು ಮತ್ತು ನ್ಯಾಯಸಮ್ಮತತೆಯನ್ನು ಖಚಿತಪಡಿಸಿಕೊಳ್ಳಲು ವಿಫಲವಾದ ಡೈಮಂಡ್ ಹಾರ್ಬರ್ ಪೊಲೀಸ್ ವರಿಷ್ಠಾಧಿಕಾರಿ ಇಶಾನಿ ಪಾಲ್ ಅವರಿಗೆ ಚುನಾವಣಾ ಸಮಿತಿ ಎಚ್ಚರಿಕೆ ನೀಡಿದೆ. ರಾಜ್ಯ ಆಡಳಿತವು ಆದೇಶಗಳನ್ನು ತಕ್ಷಣ ಜಾರಿಗೆ ತರುವಂತೆ ನಿರ್ದೇಶಿಸಲಾಗಿದೆ.



ಬಿಜೆಪಿ ಸಂಸದೆ ಬಾನ್ಸುರಿ ಸ್ವರಾಜ್ ಶನಿವಾರ ನವದೆಹಲಿಯ ಪಕ್ಷದ ಪ್ರಧಾನ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು.


# ಅಪ್ರಕಟಿತ ಪುಸ್ತಕದ ವಿಚಾರವಾಗಿ ಅನಗತ್ಯವಾಗಿ ನನ್ನನ್ನು ಎಳೆತರಲಾಯಿತು

**ನವದೆಹಲಿ, ಏ.25:** ಅಪ್ರಕಟಿತ ಆತ್ಮಚರಿತ್ರೆ ಫೋರ್ ಸ್ಟಾರ್ಸ್ ಆಫ್ ಡೆಸ್ಟಿನಿ ವಿಚಾರವಾಗಿ ನನ್ನನ್ನು ಅನಗತ್ಯವಾಗಿ ಎಳೆದು ತರಲಾಯಿತು ಎಂದು ಮಾಜಿ ಸೇನಾ ಮುಖ್ಯಸ್ಥ ಎಂ.ಎಂ.ನರವಣೆ ಹೇಳಿದ್ದಾರೆ.

**ದಿ ಕ್ಯೂರಿಯಸ್ ಅಂಡ್ ದಿ ಕ್ಲಾಸಿಫೈಡ್:** ಅನ್‌ಅರ್ಥಿಂಗ್ ಮಿಲಿಟರಿ ಮಿಥ್ಸ್ ಅಂಡ್ ಮಿಸ್ಟರೀಸ್' ಎಂಬ ಪುಸ್ತಕವನ್ನು ಬಿಡುಗಡೆಗೊಳಿಸಿ ಮಾತನಾಡಿದ ಅವರು, ಆ ಹಳೆಯ ಘಟನೆಯನ್ನು ಮೆಲುಕು ಹಾಕಿದ್ದಾರೆ. ನಾನು ಆ ಘಟನೆಯಿಂದ ಹೊರ ಬಂದಿದ್ದು, ಈಗಾಗಲೇ ಎರಡು ಪುಸ್ತಕಗಳನ್ನು ಬರೆದಿದ್ದೇನೆ. ಮೂರನೆಯದು ಶೀಘ್ರದಲ್ಲೇ ಬಿಡುಗಡೆಯಾಗಲಿದೆ ಎಂದು ತಿಳಿಸಿದ್ದಾರೆ.

ಈ ವರ್ಷದ ಆರಂಭದಲ್ಲಿ ನರವಣೆ ಅವರ 'ಅಪ್ರಕಟಿತ ಆತ್ಮಚರಿತ್ರೆ'ಯಾದ 'ಫೋರ್ ಸ್ಟಾರ್ಸ್ ಆಫ್ ಡೆಸ್ಟಿನಿ' ಪುಸ್ತಕದ ವಿಚಾರ ರಾಜಕೀಯ ವಲಯದಲ್ಲಿ ಭಾರಿ ವಿವಾದಕ್ಕೆ ಕಾರಣವಾಗಿತ್ತು. ಪುಸ್ತಕವನ್ನು ಪರಿಶೀಲಿಸುವವರೆಗೆ ಅದನ್ನು ತಡೆಹಿಡಿಯುವಂತೆ ರಕ್ಷಣಾ ಸಚಿವಾಲಯವು ಪ್ರಕಾಶಕರಿಗೆ ಸೂಚಿಸಿತ್ತು. ನನ್ನ ಮಟ್ಟಿಗೆ ವಿಷಯ ಅಲ್ಲಿಗೆ ಮುಗಿದಿತ್ತು. ನಾನು ಮುಂದೆ ಸಾಗಿದ್ದೆ.. ಅದು ಮುಗಿದ ಅಧ್ಯಾಯ. ಆದರೆ, ಅನಗತ್ಯವಾಗಿ ನನ್ನನ್ನು ಉಲ್ಲೇಖಿಸುವುದು, ಪ್ರಕಟವಾಗದ ಪುಸ್ತಕದ ವಿಷಯಕ್ಕೆ ನನ್ನನ್ನು ಎಳೆದುತಂದು ಸುದ್ದಿಯಾಗುವಂತೆ ಮಾಡಿದ್ದು ಅಗತ್ಯವಿರಲಿಲ್ಲ ಎಂದು ನರವಣೆ ಸಂದರ್ಶನದಲ್ಲಿ ಹೇಳಿದ್ದಾರೆ.

ಫೆಬ್ರವರಿಯಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಲೋಕಸಭೆಯಲ್ಲಿ ಈ ಆತ್ಮಚರಿತ್ರೆಯ ಆಯ್ದ ಭಾಗಗಳನ್ನು



ಉಲ್ಲೇಖಿಸದಂತೆ ತಡೆಯಲಾಗಿತ್ತು. ಏಕೆಂದರೆ ಅದು ಇನ್ನೂ ಪ್ರಕಟವಾಗಿರಲಿಲ್ಲ. ನರವಣೆ ಅವರ ಇತ್ತೀಚಿನ ಪುಸ್ತಕವು ಗಂಭೀರ ಶೈಕ್ಷಣಿಕ ಪ್ರಯತ್ನಕ್ಕಿಂತ ಹೆಚ್ಚಾಗಿ ಮನರಂಜನಾ ಓದಿಗಾಗಿ ಸಿದ್ಧಪಡಿಸಲಾಗಿದೆ.

ರೂಪಾ ಪಬ್ಲಿಕೇಷನ್ಸ್ ಹೊರತಂದಿರುವ ಈ ಪುಸ್ತಕವು ಭಾರತೀಯ ಸೇನೆ, ನೌಕಾಪಡೆ ಮತ್ತು ವಾಯುಪಡೆಗೆ ಸಂಬಂಧಿಸಿದ ಕೆಲವು ರೋಚಕ ಮಾಹಿತಿ ಮತ್ತು ದಂತಕಥೆಗಳನ್ನು ಒಳಗೊಂಡಿದೆ.

**ಜೈಹಿಂದ್:** ಪುಸ್ತಕದಲ್ಲಿ ನರವಣೆ ಅವರು ಭಾರತೀಯ ಸಶಸ್ತ್ರ ಪಡೆಗಳಲ್ಲಿ ಬಳಕೆಯಾಗುವ 'ಜೈ ಹಿಂದ್' ಅಭಿನಂದನೆಯ ಮೂಲವನ್ನು ಸ್ವಾತಂತ್ರ್ಯ ಚಳವಳಿಯಿಂದ ಹಿಡಿದು ಸೇನೆಯಲ್ಲಿ ಅದರ ಅಳವಡಿಕೆಯವರೆಗೆ ವಿವರಿಸಿದ್ದಾರೆ. '

ಜೈ ಹಿಂದ್' ಮೊದಲು ಭಾರತೀಯ ವಾಯುಪಡೆಯಲ್ಲಿ ಬಳಕೆಯಾಯಿತು. ನಂತರ ಸೇನೆ ಮತ್ತು ನೌಕಾಪಡೆಯಲ್ಲೂ ಅಳವಡಿಸಿಕೊಳ್ಳಲಾಯಿತು. ಹಿಂದೆ ಸೆಲ್ಯೂಟ್ ಮಾಡುವಾಗ ಯಾವುದೇ ಶಬ್ದ ಮಾಡುತ್ತಿರಲಿಲ್ಲ. ಆಯಾ ರೆಜಿಮೆಂಟ್‌ಗಳು 'ಸತ್ ಶ್ರೀ ಅಕಾಲ್' ಅಥವಾ 'ರಾಮ್ ರಾಮ್' ಎಂಬ ತಮ್ಮದೇ ಆದ ಘೋಷಣೆಗಳನ್ನು ಬಳಸುತ್ತಿದ್ದವು.

# ನೀತಿ ಆಯೋಗದ ಸದಸ್ಯರಾಗಿ ಪ್ರೊ.ಕೆ.ವಿ.ರಾಜು

**ನವದೆಹಲಿ,ಏ.25:** ಹೆಸರಾಂತ ಆರ್ಥಿಕ ತಜ್ಞ ಪ್ರೊ. ಕೆ. ವಿ. ರಾಜು ಅವರನ್ನು ನೀತಿ ಆಯೋಗದ ಸದಸ್ಯರನ್ನಾಗಿ ಕೇಂದ್ರ ಸರ್ಕಾರ ನೇಮಕ ಮಾಡಿದೆ. ಈ ಬಗ್ಗೆ ಕೇಂದ್ರ ಶುಕ್ರವಾರ ಆದೇಶ ಹೊರಡಿಸಿದೆ. ಪ್ರೊ. ರಾಜು ಅವರು ಪ್ರಸ್ತುತ ಕಳೆದ ಒಂಬತ್ತು ವರ್ಷಗಳಿಂದ ಉತ್ತರ ಪ್ರದೇಶ ಮುಖ್ಯಮಂತ್ರಿಯವರ ಆರ್ಥಿಕ ಸಲಹೆಗಾರರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಇದಕ್ಕೂ ಮುನ್ನ ಅವರು ಐದು ವರ್ಷಗಳ ಕಾಲ ಕರ್ನಾಟಕ ಮುಖ್ಯಮಂತ್ರಿಯವರ ಆರ್ಥಿಕ ಸಲಹೆಗಾರರಾಗಿ ಕೆಲಸ ಮಾಡಿದ್ದರು.



ಅಲ್ಲದೆ, ಛಿಹೈದರಾಬಾದ್‌ನ ಐಸಿಆರ್ ಐ ಎಸ್ ಎ ಟಿ ಸಂಸ್ಥೆಯಲ್ಲಿ ಪ್ರಧಾನ ವಿಜ್ಞಾನಿಯಾಗಿ ಕಾರ್ಯನಿರ್ವಹಿಸಿದ್ದಾರೆ. ಕೊಲಂಬೊದ ಐಡಬ್ಲೂಎಂ ಐ ನಲ್ಲಿ ಸಾಮಾಜಿಕ ವಿಜ್ಞಾನಿಯಾಗಿ ಕೆಲಸ ಮಾಡಿದ್ದಾರೆ. ಅಮೆರಿಕದ ಐಎಫ್ ಪಿಆರ್ ಐನಲ್ಲಿ ಸಂದರ್ಶಕ ರಿಸರ್ಚ್ ಫೆಲೋ ಆಗಿದ್ದರು. ಬೆಂಗಳೂರಿನ ಐಎಸ್ ಇಸಿಯ ಲ್ಲಿ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸಿದ್ದಾರೆ. ತಮ್ಮ ಸಂಶೋಧನಾ ವೃತ್ತಿಜೀವನವನ್ನು ಗುಜರಾತಿನ ಆನಂದದಲ್ಲಿರುವ ಐಆರ್ ಎಂಎ ದಲ್ಲಿ ಪ್ರಾರಂಭಿಸಿದರು. ಪ್ರಸ್ತುತ ಅವರು ಬೆಂಗಳೂರಿನ ಚಾಣಕ್ಯ ವಿಶ್ವವಿದ್ಯಾಲಯದ ಪ್ರೊಫೆಸರ್ ಆಗಿದ್ದು, ಪ್ರಧಾನಮಂತ್ರಿಯವರ ಆರ್ಥಿಕ ಸಲಹಾ ಮಂಡಳಿಯ ಸದಸ್ಯರಾಗಿದ್ದಾರೆ. ಅವರು 26 ಪುಸ್ತಕಗಳು ಮತ್ತು 102 ಲೇಖನಗಳನ್ನು ಪ್ರಕಟಿಸಿದ್ದಾರೆ.

# ದೇಶದ ಎಲ್ಲ ಕಾರಾಗೃಹಗಳಲ್ಲಿ ಇ–ಪ್ರಿಸನ್ಸ್ ತಂತ್ರಾಂಶ ಅಳವಡಿಕೆಗೆ ಸುಪ್ರೀಂ ಆದೇಶ

**ನವದೆಹಲಿ, ಏ.25:** ಜೀವಾವಧಿ ಶಿಕ್ಷೆ ಅನುಭವಿಸುತ್ತಿರುವ ಮತ್ತು ಕ್ಷಮಾದಾನಕ್ಕೆ ಅರ್ಹರಾಗಿರುವ ಕೈದಿಗಳ ಬಿಡುಗಡೆಯಲ್ಲಿ ಆಗುತ್ತಿರುವ ವಿಳಂಬಕ್ಕೆ ಮುಕ್ತಿ ಹಾಡಲು ಸುಪ್ರೀಂ ಕೋರ್ಟ್ ಮಹತ್ವದ ಕ್ರಮ ಕೈಗೊಂಡಿದೆ. ದೇಶದ ಎಲ್ಲಾ ಕಾರಾಗೃಹಗಳಲ್ಲಿ 'ಇ–ಪ್ರಿಸನ್ಸ್' ಸಾಫ್ಟ್‌ವೇರ್ ಕಡ್ಡಾಯವಾಗಿ ಅಳವಡಿಸಲು ಮತ್ತು ಅದನ್ನು ನ್ಯಾಯಾಲಯಗಳೊಂದಿಗೆ ಸಂಯೋಜಿಸಲು ದೇಶದ ಎಲ್ಲ ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಸುಪ್ರೀಂ ಕೋರ್ಟ್ ಆದೇಶಿಸಿದೆ.

ಶಿಕ್ಷೆ ಪೂರ್ಣಗೊಂಡಿದ್ದರೂ ಅಥವಾ ಜಾಮೀನು ಸಿಕ್ಕಿದ್ದರೂ ದಾಖಲೆಗಳ ಸಾಗಾಟ ವಿಳಂಬದಿಂದಾಗಿ



ಕೈದಿಗಳು ವಿನಾಕಾರಣ ಜೈಲಿನಲ್ಲಿ ಉಳಿಯುವಂತಾಗಿತ್ತು. ಇನ್ನು ಮುಂದೆ ನ್ಯಾಯಾಲಯದ ಆದೇಶಗಳು ಡಿಜಿಟಲ್ ರೂಪದಲ್ಲಿ ಕ್ಷಣಾರ್ಧದಲ್ಲಿ ಜೈಲು ತಲುಪಲಿವೆ. ರಾಷ್ಟ್ರೀಯ ಮಾಹಿತಿ ಕೇಂದ್ರ ಅಭಿವೃದ್ಧಿಪಡಿಸಿರುವ ಈ 'ಇ–ಪ್ರಿಸನ್ಸ್' ತಂತ್ರಾಂಶವು ಕೈದಿಗಳ ವಿವರ, ಶಿಕ್ಷೆಯ ಅವಧಿ ಮತ್ತು ಬಿಡುಗಡೆಯ ದಿನಾಂಕಗಳನ್ನು ಸ್ವಯಂಚಾಲಿತವಾಗಿ ನಿರ್ವಹಿಸುತ್ತದೆ.

ಇದರಿಂದಾಗಿ ಮಾನವ ಹಸ್ತಕ್ಷೇಪ ಮತ್ತು ವಿಳಂಬ ತಪ್ಪಲಿದೆ. ಅರ್ಹ ಕೈದಿಗಳ ಬಿಡುಗಡೆ ತಡವಾಗುವುದು ಅವರ ಮೂಲಭೂತ ಹಕ್ಕುಗಳ ಉಲ್ಲಂಘನೆಯಾಗಿದೆ. ತಾಂತ್ರಿಕ ಕಾರಣಗಳಿಗಾಗಿ ಯಾರೂ ಜೈಲಿನಲ್ಲಿ ಒಂದು ದಿನವೂ ಹೆಚ್ಚುವರಿಯಾಗಿ ಕಳೆಯಬಾರದು," ಎಂದು ನ್ಯಾಯಮೂರ್ತಿಗಳಾದ ಅಭಯ್ ಎಸ್. ಓಕಾ ಮತ್ತು ಕೆ.ವಿ. ವಿಶ್ವನಾಥನ್ ಅವರಿದ್ದ ಪೀಠವು ಕಠಿಣವಾಗಿ ಹೇಳಿದೆ.

# ಕಾಂತಾರ ದೈವಪಾತ್ರಕ್ಕೆ ಅವಮಾನ: ಒಂದು ತಿಂಗಳಲ್ಲಿ ಚಾಮುಂಡಿ ಬೆಟ್ಟಕ್ಕೆ ರಣವೀರ್ ಭೇಟಿ– ಹೈಕೋರ್ಟ್ ನಿರ್ದೇಶನ

**ಬೆಂಗಳೂರು, ಏ.25:** ಕಾಂತಾರ ಚಾಪ್ಟರ್–1 ಚಿತ್ರದ ದೈವಪಾತ್ರದ ಬಗ್ಗೆ ಅಪಮಾನಕಾರಿಯಾಗಿ ಮಾತನಾಡಿದ ಆರೋಪಕ್ಕೆ ಗುರಿಯಾಗಿರುವ ಬಾಲಿವುಡ್ ನಟ ರಣವೀರ್ ಸಿಂಗ್ ಅವರು ಒಂದು ತಿಂಗಳಲ್ಲಿ ಮೈಸೂರಿನ ಚಾಮುಂಡಿ ಬೆಟ್ಟ ದೇವಸ್ಥಾನಕ್ಕೆ ಭೇಟಿ ನೀಡಲು ನಿರ್ದೇಶಿಸಲಾಗುವುದು ಎಂದಿರುವ ಹೈಕೋರ್ಟ್ ಅರ್ಜಿ ವಿಲೇವಾರಿ ಮಾಡಿದೆ.

ಗೋವಾದಲ್ಲಿ ನಡೆದಿದ್ದ ಭಾರತೀಯ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ (ಐಎಫ್ಎಫ್ಐ) ಕಾಂತಾರ ಚಾಪ್ಟರ್–1 ಚಿತ್ರದ ಚಾಮುಂಡಿ ದೈವಕ್ಕೆ ಅಪಮಾನ ಮಾಡಿದ ಆರೋಪದ ಸಂಬಂಧ ದಾಖಲಾಗಿರುವ ಖಾಸಗಿ ದೂರು ಮತ್ತು ಅದರ ಮುಂದುವರಿದ ಭಾಗವಾಗಿ ಬೆಂಗಳೂರಿನ ಹೈಗ್ರೌಂಡ್ಸ್ ಠಾಣೆಯಲ್ಲಿ ದಾಖಲಾಗಿರುವ ಎಫ್ಐಆರ್ ರದ್ದುಪಡಿಸುವಂತೆ ಕೋರಿ ರಣವೀರ್ ಸಿಂಗ್ ಸಲ್ಲಿಸಿದ್ದ ಅರ್ಜಿಯ ವಿಚಾರಣೆಯನ್ನು ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರ ಏಕಸದಸ್ಯ ಪೀಠ ನಡೆಸಿತು.

ರಣವೀರ್ ಪ್ರತಿನಿಧಿಸಿದ್ದ ಹಿರಿಯ ವಕೀಲ ಸಜ್ಜನ್ ಪೂವಯ್ಯ ಅವರು, ರಣವೀರ್ ಬೇಷರತ್ ಕ್ಷಮೆಯಾಚಿಸಿರುವ ಅಫಿಡವಿಟ್




ಹಾಕಿದ್ದೇವೆ. ದೇವಸ್ಥಾನಕ್ಕೆ ರಣವೀರ್ ಸಿಂಗ್ ಭೇಟಿ ನೀಡುತ್ತಾರೆ ಎಂದು ಹೇಳಲಾಗಿದೆ. ದಿನಾಂಕ ಹಾಕಿಲ್ಲ. ಪೀಠವೇ ನಿರ್ದಿಷ್ಟ ದಿನ ನಿಗದಿ ಮಾಡಬಹುದು. ಅಂದು ದೇವಾಲಯಕ್ಕೆ ಹೋಗಲಿದ್ದಾರೆ ಎಂದರು.

ಇದಕ್ಕೆ ದೂರುದಾರರ ಪರ ವಕೀಲ ಸಿಜಿ ಮಲೆಯಾಳ್ ಅವರು, ಪೂವಯ್ಯ ಅವರಿಗೆ ಇದೊಂದು ಪ್ರಕರಣವಷ್ಟೆ. ನಮಗೆ ಇದು ನಂಬಿಕೆಯ ವಿಚಾರ ಎಂದರು. ಈ ಹಂತದಲ್ಲಿ ಮಧ್ಯಪ್ರವೇಶಿಸಿದ ಪೀಠವು, ಇದೇ ಕಾರಣಕ್ಕೆ ಪ್ರಕರಣಕ್ಕೆ ಇದುವರೆಗೂ ತಡೆ ನೀಡಿಲ್ಲ ಎಂದಿತು. ಆಗ ಸಿಜಿ ಅವರು, ಪ್ರತಿಯೊಂದು ಪದಕ್ಕೂ ತನ್ನದೇ ಆದ ತೂಕವಿದೆ. ಪದಗಳು ಪ್ರಭಾವ ಮತ್ತು ಪರಿಣಾಮಗಳನ್ನು ಉಂಟು ಮಾಡುತ್ತವೆ. ಇದೇ ವೇಳೆ ದೇವಸ್ಥಾನಕ್ಕೆ ಭೇಟಿ ನೀಡಲಾಗುವುದು ಎಂದು ರಣವೀರ್ ಅಫಿಡವಿಟ್‌ನಲ್ಲಿ ಹೇಳಿದ್ದಾರೆ. ಸಮಯ ಬಂದಾಗ ಎಂದು ಹೇಳಿದ್ದಾರೆ. ಅದು 30, 40 ದಿನವಾಗಬಹುದು. ಒಂದು ವರ್ಷ.. ಹತ್ತು ವರ್ಷ ಆಗಬಹುದು ಎಂದು ಶಂಕೆ ವ್ಯಕ್ತಪಡಿಸಿದರು.

ಇದಕ್ಕೆ ಪೀಠವು ನಾಲ್ಕು ವಾರಗಳಲ್ಲಿ ರಣವೀರ್ ದೇವಸ್ಥಾನಕ್ಕೆ ಭೇಟಿ ನೀಡಬೇಕು ಎಂದು ಆದೇಶದಲ್ಲಿ ಉಲ್ಲೇಖಿಸಲಾಗುವುದು ಎಂದರು. ಆಗ ಸಿಜಿ ಅವರು, ಇತರ ಸೆಲೆಬ್ರಿಟಿಗಳು ಇದನ್ನು ಲಘುವಾಗಿ ಪರಿಗಣಿಸಬಾರದು. ಕಠಿಣ ಎಚ್ಚರಿಕೆಯನ್ನು ಈ ನ್ಯಾಯಾಲಯ ನೀಡಬೇಕು ಎಂದರು. ಇದಕ್ಕೆ ಪೀಠವು ಖಂಡಿತವಾಗಿಯೂ ಎಚ್ಚರಿಸಲಾಗುವುದು. ಕಾನೂನಿನ ಅನ್ವಯ ಉತ್ತರಿಸಬೇಕು ಎಂದಾದರೆ ಎಚ್ಚರಿಸುವ ಪರಿಸ್ಥಿತಿ ನಿರ್ಮಾಣವೇ ಆಗಲ್ಲ ಎಂದಿತು. ಈ ಹಂತದಲ್ಲಿ ಪೀಠವು, ಜನರ ಭಾವನೆಗಳನ್ನು ಕೇಳಿಯಾಗಿದೆ. ಕಾನೂನಾತ್ಮಕವಾಗಿ ಉತ್ತರಿಸಬೇಕು ಎಂದಾದರೆ ಸಾಕಷ್ಟು ತೀರ್ಪುಗಳಿವೆ. ನಾಲ್ಕು ವಾರದಲ್ಲಿ ರಣವೀರ್ ಚಾಮುಂಡಿ ಬೆಟ್ಟಕ್ಕೆ ಭೇಟಿ ನೀಡಬೇಕು ಎಂದಿತು. ಆಗ ಪೂವಯ್ಯ ಈ ಎರಡು ನಿರ್ದಿಷ್ಟ ಸಿನಿಮಾಗಳು (ದುರಂಧರ್) ಬಂದ ಮೇಲೆ ಭದ್ರತೆಯ ಸಮಸ್ಯೆ ಹೆಚ್ಚಾಗಿದೆ ಎಂದರು. ಇದಕ್ಕೆ ಪೀಠವು ಭದ್ರತೆಯ ಸಮಸ್ಯೆ. ರಣವೀರ್ ಜವಾಬ್ದಾರಿಯುತ ನಾಗರಿಕನಾಗಿದ್ದು, ಅವರು ಅದನ್ನು ಮಾಡಲಿದ್ದಾರೆ ಎಂದಿತು.

ರಾಜ್ಯ ಹೆಚ್ಚುವರಿ ಸರ್ಕಾರಿ ಅಭಿಯೋಜಕ ಬಿ.ಎನ್. ಜಗದೀಶ್ ಅವರು ರಣವೀರ್ ಬರುವ ಮಾಹಿತಿಯನ್ನು ಮುಂಚಿತವಾಗಿ ನೀಡಲು ಆದೇಶಿಸಬೇಕು ಎಂದರು. ಎಲ್ಲವನ್ನು ಆಲಿಸಿದ ಪೀಠವು ರಣವೀರ್ ಅಫಿಡವಿಟ್ ಸ್ವೀಕರಿಸಿ, ಅರ್ಜಿ ಇತ್ಯರ್ಥಪಡಿಸಲಾಗಿದೆ ಎಂದು ಆದೇಶಿಸಿತು.

# ಒಳಮೀಸಲಾತಿಯ ಸರ್ಕಾರದ ಕ್ರಮದಿಂದ ಎಸ್‌ಸಿಯಲ್ಲಿ ಗೊಂದಲ ಸೃಷ್ಟಿ: ಗೋವಿಂದ ಕಾರಜೋಳ ಆರೋಪ

**ಬೆಂಗಳೂರು, ಏ.25:** ಪರಿಶಿಷ್ಟ ಜಾತಿಗಳ ಒಳಮೀಸಲಾತಿ ಕುರಿತಂತೆ ಸಚಿವ ಸಂಪುಟದಲ್ಲಿ ಸರ್ಕಾರ ತೆಗೆದುಕೊಂಡಿರುವ ಕ್ರಮವು ಆ ವರ್ಗದವರಲ್ಲಿ ಗೊಂದಲ ಸೃಷ್ಟಿಗೆ ಕಾರಣವಾಗಿದೆ ಎಂದು ಬಿಜೆಪಿ ಮುಖಂಡರು ಆರೋಪಿಸಿದ್ದಾರೆ.

ಬಿಜೆಪಿ ಕಚೇರಿಯಲಿ ನಡೆದ ಜಂಟಿ ಸುದ್ದಿಗೋಷ್ಠಿಯಲ್ಲಿ ಸಂಸದ ಎಂ.ಗೋವಿಂದ ಕಾರಜೋಳ, ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಮಾಜಿ ಶಾಸಕ ಎನ್ .ಮಹೇಶ್, ಕೇಂದ್ರ ಮಾಜಿ ಸಚಿವ ಎ. ನಾರಾಯಣಸ್ವಾಮಿ ಸರ್ಕಾರದ ತೀರ್ಮಾನಕ್ಕೆ ಅಸಮಾಧಾನ ವ್ಯಕ್ತಪಡಿಸಿದರು. ಈ ವೇಳೆ ಗೋವಿಂದ ಕಾರಜೋಳ, ಪರಿಶಿಷ್ಟ ಜಾತಿಗಳ ಒಳಮೀಸಲಾತಿ ಹಂಚಿಕೆಗಾಗಿ ಸರ್ಕಾರ ರಚಿಸಿದ್ದ ನಿವೃತ್ತ ನ್ಯಾಯಮೂರ್ತಿ ಎಚ್.ಎನ್. ನಾಗಮೋಹನ್‌ದಾಸ್ ವರದಿ ತಿಸ್ಕರಿಸಲಾಗಿದೆ. ಸರ್ಕಾರದ ಮುಖ್ಯ ಕಾರ್ಯದರ್ಶಿ ನೀಡಿರುವ ವರದಿಯನ್ನು ಅಂಗೀಕರಿಸಲಾಗಿದೆ. ಈ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜ್ಯದ ಜನತೆಗೆ ಅನ್ಯಾಯ ಮಾಡಿದ್ದಾರೆ ಎಂದರು.

ಛಲವಾದಿ ನಾರಾಯಣಸ್ವಾಮಿ ಮಾತನಾಡಿ, ಸರ್ಕಾರಿ ಉದ್ಯೋಗಗಳನ್ನು ಭರ್ತಿ ಮಾಡದೇ ಯುವ ಸಮೂಹದ ಅಸಮಾಧಾನವನ್ನು



ತಡೆಯಲು ಒಳ ಮೀಸಲಾತಿ ನೀಡಲು ನಿರ್ಧಾರ ತೆಗೆದುಕೊಳ್ಳಲಾಗಿದೆ.

ಪರಿಶಿಷ್ಟ ಜಾತಿಗಳಿಗೆ ಶೇ.17ರಷ್ಟು ಮೀಸಲಾತಿ ನೀಡುವ ಕಾಯಿದೆ ಜಾರಿಯಲ್ಲಿದ್ದರೂ ಶೇ.15ರಂತೆ ಒಳಮೀಸಲಾತಿ ಹಂಚಿಕೆ ಮಾಡಲಾಗಿದೆ ಎಂದು ದೂರಿದರು.

# ರಾಷ್ಟ್ರೀಯ ಜನಗಣತಿ ಕಾರ್ಯಕ್ಕೆ ಸಿಬ್ಬಂದಿ ಕೊರತೆ: ಕೇಂದ್ರ ಪಾಲಿಕೆಯಿಂದ ಕಠಿಣ ಕ್ರಮ

**ಬೆಂಗಳೂರು, ಏ.25:** ರಾಷ್ಟ್ರೀಯ ಜನಗಣತಿ–2027ರ ಅಂಗವಾಗಿ ನಡೆಯುತ್ತಿರುವ ಮನೆ ಪಟ್ಟಿ ಹಾಗೂ ಜನ ಗಣತಿ ಕಾರ್ಯಕ್ಕೆ ಸಿಬ್ಬಂದಿ ಕೊರತೆ ಉಂಟಾಗಿರುವ ಹಿನ್ನೆಲೆಯಲ್ಲಿ, ಬೆಂಗಳೂರು ಕೇಂದ್ರ ನಗರ ಪಾಲಿಕೆ ಕಠಿಣ ಕ್ರಮಕ್ಕೆ ಮುಂದಾಗಿದೆ.

ಪಾಲಿಕೆಯ ವ್ಯಾಪ್ತಿಯಲ್ಲಿ ಏಪ್ರಿಲ್ 16ರಿಂದ ಆರಂಭಗೊಂಡಿರುವ ಈ ಗಣತಿ ಕಾರ್ಯಕ್ಕೆ ವಿವಿಧ ಇಲಾಖೆ ಹಾಗೂ ನಿಗಮ ಮಂಡಳಿಗಳ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ. ಆದರೆ ಹಲವರು ಕರ್ತವ್ಯಕ್ಕೆ ಹಾಜರಾಗದೇ ಇರುವುದರಿಂದ ಗಣತಿ ಕಾರ್ಯ ನಿರೀಕ್ಷಿತ ವೇಗದಲ್ಲಿ ನಡೆಯುತ್ತಿಲ್ಲ ಎನ್ನುವುದು ಗಮನಕ್ಕೆ ಬಂದಿದೆ.



ಈ ಹಿನ್ನೆಲೆ, ಗಣತಿ ಕಾರ್ಯಕ್ಕೆ ನಿಯೋಜಿಸಲ್ಪಟ್ಟ ಸಿಬ್ಬಂದಿಯನ್ನು ತಕ್ಷಣ ಬಿಡುಗಡೆಗೊಳಿಸುವಂತೆ ಸಂಬಂಧಿತ ಇಲಾಖೆಗಳ ಮುಖ್ಯಸ್ಥರಿಗೆ ಪಾಲಿಕೆ ಆಯುಕ್ತರಾದ ರಾಜೇಂದ್ರ ಚೋಳನ್ ಪತ್ರ ಬರೆದಿದ್ದಾರೆ.

ಬೆಸ್ಕಾಂ, ಬೆಂಗಳೂರು ಜಲ ಮಂಡಳಿ, ಶಾಲಾ ಶಿಕ್ಷಣ ಇಲಾಖೆ, ತಾಂತ್ರಿಕ ಶಿಕ್ಷಣ ಇಲಾಖೆ ಹಾಗೂ ವಾಣಿಜ್ಯ ತೆರಿಗೆ ಇಲಾಖೆಗೆ ಈ ಸಂಬಂಧ ಸೂಚನೆ ನೀಡಲಾಗಿದೆ.

ನಿಗದಿತ ಸಿಬ್ಬಂದಿಯನ್ನು ಬಿಡುಗಡೆಗೊಳಿಸದಿದ್ದಲ್ಲಿ, ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಜನಗಣತಿ ಕಾಯ್ದೆ 1948 ಹಾಗೂ ಭಾರತೀಯ ನ್ಯಾಯ ಸಂಹಿತೆ 2023ರಡಿ ಎಫ್‌ಐಆರ್ ದಾಖಲಿಸುವ ಎಚ್ಚರಿಕೆಯನ್ನು ಕೂಡ ನೀಡಲಾಗಿದೆ. ಗಣತಿ ಕಾರ್ಯವನ್ನು ಕಾಲಮಿತಿಯೊಳಗೆ ಪರಿಣಾಮಕಾರಿಯಾಗಿ ಪೂರ್ಣಗೊಳಿಸಲು ಎಲ್ಲ ಇಲಾಖೆಗಳಿಂದ ಸಹಕಾರ ಅಗತ್ಯವೆಂದು ಆಯುಕ್ತರು ತಿಳಿಸಿದ್ದಾರೆ.



ಬೆಂಗಳೂರಿನ ವಿಧಾನಸೌಧದ ಎದುರು ಶನಿವಾರ ಮಹಾಬೋಧಿ ಸಮಾಜದ ಬೌದ್ಧ ಸನ್ಯಾಸಿಗಳು ಶಾಂತಿಗಾಗಿ ನಡಿಗೆ ನಡೆಸಿದರು.

### ಶಿಕ್ಷೆ ಪ್ರಮಾಣ ರದ್ದು ಕೋರಿ ಮೇಲ್ಮನವಿ

# ಜಾಮೀನು ಮಂಜೂರು ಮಾಡುವಂತೆ ವಿನಯ್ ಕುಲಕರ್ಣಿ ಹೈಕೋರ್ಟ್ ಮೊರೆ

**ಬೆಂಗಳೂರು, ಏ.25:** ಬಿಜೆಪಿ ಮುಖಂಡ ಯೋಗೇಶ್ ಗೌಡ ಕೊಲೆ ಪ್ರಕರಣದಲ್ಲಿ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಿಂದ ಜೀವಾವಧಿ ಶಿಕ್ಷೆಗೊಳಗಾಗಿರುವ ವಿನಯ್ ಕುಲಕರ್ಣಿ ಅವರು ಕೆಳ ನ್ಯಾಯಾಲಯ ನೀಡಿದ್ದ ದೋಷಿ ಆದೇಶ ಮತ್ತು ಶಿಕ್ಷೆಯ ಪ್ರಮಾಣವನ್ನು ರದ್ದುಗೊಳಿಸುವಂತೆ ಕೋರಿ ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದಾರೆ.

ಪ್ರಕರಣದಲ್ಲಿ ತಮಗೆ ವಿಧಿಸಲಾಗಿರುವ ಕಠಿಣ ಶಿಕ್ಷೆಗೆ ತಡೆಯಾಜ್ಞೆ ನೀಡಬೇಕು ಮತ್ತು ಜಾಮೀನು ಮಂಜೂರು ಮಾಡಬೇಕು ಎಂದು ವಿನಯ್ ಕುಲಕರ್ಣಿ ಮನವಿ ಮಾಡಿದ್ದಾರೆ.

ನಿಯಮಗಳ ಪ್ರಕಾರ, ಎರಡು ವರ್ಷಕ್ಕಿಂತ ಹೆಚ್ಚಿನ ಶಿಕ್ಷೆಯಾದಲ್ಲಿ ಜನಪ್ರತಿನಿಧಿಗಳು ತಮ್ಮ ಸ್ಥಾನವನ್ನು ಕಳೆದುಕೊಳ್ಳಬೇಕಾಗುತ್ತದೆ. ಹೀಗಾಗಿ ತಮ್ಮ ಶಾಸಕ ಸ್ಥಾನಕ್ಕೆ ಎದುರಾಗಿರುವ ಅನರ್ಹತೆಯ ಭೀತಿ ತಪ್ಪಿಸಿಕೊಳ್ಳಲು



ಅವರು ಶಿಕ್ಷೆಗೆ ತಕ್ಷಣವೇ ತಡೆ ನೀಡುವಂತೆ ನ್ಯಾಯಾಲಯವನ್ನು ಕೋರಿದ್ದಾರೆ ಎನ್ನಲಾಗಿದೆ. ಶಿಕ್ಷೆಯ ಆದೇಶಕ್ಕೆ ತಡೆ ಸಿಗದಿದ್ದರೆ ಅವರು ಶಾಸಕ ಸ್ಥಾನದಿಂದ ಕೆಳಗಿಳಿಯುವ ಸಾಧ್ಯತೆ ದಟ್ಟವಾಗಿದೆ. ಈಗಾಗಲೇ ಹೈಕೋರ್ಟ್‌ನಲ್ಲಿ ಸಲ್ಲಿಕೆಯಾಗಿರುವ ಈ ಅರ್ಜಿಯ ವಿಚಾರಣೆಯು ಮುಂದಿನವಾರ ನಡೆಯುವ ಸಾಧ್ಯತೆಯಿದೆ. ಈ ಹಂತದಲ್ಲಿ ಪ್ರಕರಣದ ತನಿಖೆ ನಡೆಸಿದ್ದ ಸಿಬಿಐ ತನ್ನ ವಾದವನ್ನು ಮಂಡಿಸಲಿದ್ದು, ನ್ಯಾಯಾಲಯವು ಉಭಯ ಪಕ್ಷಗಳ ವಾದ–ಪ್ರತಿವಾದಗಳನ್ನು ಆಲಿಸಲಿದೆ.

### ಶೃಂಗೇರಿ ಕ್ಷೇತ್ರದ ಅಂಚೆ ಮತ ಮರುಎಣಿಕೆಗೆ ಹೈಕೋರ್ಟ್ ಸೂಚನೆ

# ಮೇ 2ರಂದು ದಿನ ನಿಗದಿ, ಚಿಕ್ಕಮಗಳೂರಿನ ಐಡಿಎಸ್‌ಜಿ ಕಾಲೇಜಿನಲ್ಲಿ ಎಣಿಕೆ ಕಾರ್ಯ

**ಬೆಂಗಳೂರು, ಏ.25:** ಶೃಂಗೇರಿ ಶಾಸಕ ಟಿಡಿ ರಾಜೇಗೌಡಗೆ ಹೈಕೋರ್ಟ್ ಬಿಗ್ ಶಾಕ್ ನೀಡಿದೆ.

ಶೃಂಗೇರಿ ಕ್ಷೇತ್ರದ ಅಂಚೆ ಮತ ಮರು ಎಣಿಕೆಗೆ ಹೈಕೋರ್ಟ್ ಸೂಚನೆ ನೀಡಿದ್ದು, ಮೇ 2ರಂದು ಬೆಳಿಗ್ಗೆ 9 ಗಂಟೆಗೆ ಅಂಚೆ ಮತ ಮರು ಎಣಿಕೆ ನಡೆಯಲಿದೆ.

ಚಿಕ್ಕಮಗಳೂರಿನ ಐಡಿಎಸ್‌ಜಿ ಕಾಲೇಜಿನಲ್ಲಿ ಮರು ಮತ ಎಣಿಕೆ ನಡೆಯಲಿದೆ. ಹೈಕೋರ್ಟ್‌ನ ತೀರ್ಪಿನಿಂದ ದೊಡ್ಡ ಶಾಸಕ ರಾಜೇಗೌಡರಿಗೆ ಶಾಕ್ ಆಗಿದೆ. ಕಳೆದ ಚುನಾವಣೆಯಲ್ಲಿ ಶೃಂಗೇರಿ ಕ್ಷೇತ್ರದಲ್ಲಿ ಅಂಚೆ ಮತಗಳ ಬಗ್ಗೆ ಉಂಟಾದ ವಿವಾದ ಇದೀಗ ಮರು ಎಣಿಕೆಯ ಹಂತಕ್ಕೆ ಬಂದಿದೆ. ಶೃಂಗೇರಿ ಕ್ಷೇತ್ರದ ಅಂಚೆ ಮತಗಳ ಕುರಿತಾಗಿ ಮಾಜಿ ಶಾಸಕ ಡಿ.ಎನ್. ಜೀವರಾಜ್ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.

ಟಿ.ಡಿ. ರಾಜೇಗೌಡ ಅವರ ಆಯ್ಕೆ ಅಸಿಂಧು ಎಂದು ಪ್ರಶ್ನಿಸಿ, ವಿಶೇಷವಾಗಿ ಅಂಚೆ ಮತಗಳ ಎಣಿಕೆಯಲ್ಲಿ ಅಸಂಗತತೆ ಇದೆ



ಎಂದು ಆರೋಪಿಸಿದ್ದರು. ಈ ಅರ್ಜಿಯನ್ನು ಪರಿಶೀಲಿಸಿದ ಹೈಕೋರ್ಟ್, ಅಂಚೆ ಮತಗಳ ಮರು ಎಣಿಕೆ ನಡೆಸುವಂತೆ ಆದೇಶ ನೀಡಿದೆ. ಮರು ಎಣಿಕೆ ಕಾರ್ಯಕ್ಕಾಗಿ ಚುನಾವಣಾ ಆಯೋಗ ಈಗಾಗಲೇ ಸಿದ್ಧತೆಗಳನ್ನು ಆರಂಭಿಸಿದೆ.

# ಒಳಮೀಸಲಾತಿ ನಿರ್ಣಯ ಅಪೂರ್ಣ, ಅಲೆಮಾರಿ ಸಮುದಾಯಕ್ಕೆ ಅನ್ಯಾಯ: ಎಸ್. ಸಂಗಮೇಶ್

**ಬೆಂಗಳೂರು, ಏ.25:** ರಾಜ್ಯ ಸರ್ಕಾರ ಪ್ರಕಟಿಸಿರುವ ಪರಿಶಿಷ್ಟ ಜಾತಿಗಳ ಒಳ ಮೀಸಲಾತಿ ತಬ್ಬಲಿ ಮತ್ತು ಅಲೆಮಾರಿ ಸಮುದಾಯಗಳಿಗೆ ನ್ಯಾಯಯುತ ಪಾಲು ನೀಡದಿರುವುದು ಸರ್ಕಾರದ ಗಂಭೀರ ವೈಫಲ್ಯ. ಇಂತಹ ನಿರ್ಲಕ್ಷ್ಯವು ದುರ್ಬಲ ಸಮುದಾಯಗಳ ಮೇಲಿನ ಅನ್ಯಾಯವನ್ನು ಮತ್ತಷ್ಟು ಗಾಢಗೊಳಿಸುತ್ತದೆ ಎಂದು ಕರ್ನಾಟಕ ರಾಜ್ಯ ಯುವ ಸಮೂಹ ಅಧ್ಯಕ್ಷ ಎಸ್. ಸಂಗಮೇಶ್ ಆರೋಪಿಸಿದ್ದಾರೆ.

ಒಳಮೀಸಲಾತಿ ಸೂತ್ರ ಸಮಗ್ರ ಸಾಮಾಜಿಕ ನ್ಯಾಯದ ಪರಿಹಾರವಲ್ಲ, ಕೇವಲ ರಾಜಕೀಯ ಹೊಂದಾಣಿಕೆಯ ಫಲವಾಗಿದೆ. ಸರ್ಕಾರ ವಿವಿಧ ಆಯೋಗಗಳ ವರದಿಗಳನ್ನು ಕಡೆಗಣಿಸಿದೆ.

ವೈಜ್ಞಾನಿಕ ಹಾಗೂ ನ್ಯಾಯಸಮ್ಮತವಲ್ಲದ, ಆಧಾರವಿಲ್ಲದ ತಮಗೆ ಅನುಕೂಲವಾಗಿವಂತೆ ಹಂಚಿಕೆ ಮಾಡಿರುವುದು ಖಂಡನೀಯ. ಇಂತಹ ಕ್ರಮವು ಸಂವಿಧಾನಾತ್ಮಕ ಮೌಲ್ಯಗಳಿಗೆ ವಿರುದ್ಧವಾಗಿದ್ದು, ಸಾಮಾಜಿಕ ನ್ಯಾಯದ ತತ್ವಗಳಿಗೆ ಧಕ್ಕೆ ತರುತ್ತದೆ ಎಂದು ಹೇಳಿದ್ದಾರೆ.ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಅವರು, ಈಗಿನ ಪರಿಸ್ಥಿತಿಯಲ್ಲಿ ಒಳಮಿಸಲಾತಿ ಸೂತ್ರವವನ್ನು ಸ್ವಾಗತಿಸುತ್ತೇವೆ. ಆದಾಗ್ಯೂ, ಈಗಾಗಲೇ ತೆಗೆದುಕೊಂಡಿರುವ ಈ ನಿರ್ಣಯವನ್ನು ಸರ್ಕಾರ ವಿಳಂಬವಿಲ್ಲದೇ ಜಾರಿಗೆ ತರಬೇಕು.

ನಿರುದ್ಯೋಗಿಗಳ ಭವಿಷ್ಯ ಹಿತದೃಷ್ಟಿಯಿಂದ ಇದು ಅಗತ್ಯ. ಒಳ ಮೀಸಲಾತಿ ವಿಚಾರದಲ್ಲಿ ಇದು ಅಂತಿಮವಲ್ಲ. ಸರ್ಕಾರದ ಮುಂದಿನ ನಡೆ ಸರಿಯಾಗಿರದಿದ್ದರೆ, ರಾಜ್ಯಾದ್ಯಂತ ತೀವ್ರ ಹೋರಾಟಗಳನ್ನು ಹಮ್ಮಿಕೊಳ್ಳಲಾಗುವುದು ಎಂಬುದನ್ನು ಸ್ಪಷ್ಟಪಡಿಸುತ್ತೇವೆ ಎಂದಿದ್ದಾರೆ.

ಹೇಳಿಕೆಗೆ ವಕೀಲರಾದ ಹನುಮೇಶ ಗುಂಡೂರ, ಪದಾಧಿಕಾರಿಗಳಾದ ಅಗ್ನಿ ಅಜಿತ್, ನಿಂಗರಾಜ್ ಗುಳೆ, ದೇವರಾಜ್ ಹೆಚ್ ಎಂ, ಲೋಹಿತ್ ಎಸ್, ಮಲ್ಲಿಕಾರ್ಜುನ ಬಾಂಬೇಕರ್, ಜಿಎಂ ಬಬಲಾದ್, ಮಂಜುನಾಥ ಬಿ, ಸಂಗಮೇಶ್ ಅಣ್ಣಾ ಅಭಿಮಾನಿ ಬಳಗದ ಅಧ್ಯಕ್ಷ ಸುನೀಲ್ ಕಳಬಂಡಿ ಸಹಿ ಮಾಡಿದ್ದಾರೆ.

# ಅಂತರ್ಜಲಮಟ್ಟ ಹೆಚ್ಚಿಸಲು ವಿನೂತನ ಅಭಿಯಾನ ಜಲಮಂಡಳಿ ಅಧ್ಯಕ್ಷ ಡಾ.ರಾಮ್‌ಪ್ರಸಾತ್ ಮನೋಹರ್

**ಗ್ರಾಹಕರು ಇಚ್ಚಿಸಿದರೆ ಜಲಮಂಡಳಿಯಿಂದಲೇ ಮಳೆನೀರು ಕೊಯ್ಲು ವ್ಯವಸ್ಥೆ ಅಳವಡಿಕೆ**



**ಬೆಂಗಳೂರು, ಏ.25:** ಈ ಬಾರಿ ಮುಂಗಾರು ಮಳೆ ಕಡಿಮೆಯಾಗುವ ಹವಾಮಾನ ಇಲಾಖೆಯ ಮುನ್ಸೂಚನೆಯ ಹಿನ್ನೆಲೆಯಲ್ಲಿ ಅಂತರ್ಜಲಮಟ್ಟ ಹೆಚ್ಚಿಸಲು ಹಾಗೂ ಮೇಲ್ಮೈ ನೀರಿನ ಮೇಲಿನ ಅವಲಂಬನೆ ತಗ್ಗಿಸಲು ಬೆಂಗಳೂರು ಜಲ ಮಂಡಳಿಯು ಮಹತ್ವದ ಹೆಜ್ಜೆಯಿಟ್ಟಿದೆ.

ನಗರದಲ್ಲಿ ಮಳೆನೀರು ಕೊಯ್ಲು ಅಭಿಯಾನವನ್ನು ಮತ್ತಷ್ಟು ಚುರುಕುಗೊಳಿಸುವ ಉದ್ದೇಶದಿಂದ, ಇಚ್ಚಿಸುವ ಗ್ರಾಹಕರ ಕಟ್ಟಡಗಳಲ್ಲಿ ಜಲಮಂಡಳಿಯೇ ಖುದ್ದಾಗಿ ಅತ್ಯಾಧುನಿಕ ಹಾಗೂ ವಿನೂತನ ತಂತ್ರಜ್ಞಾನದ ಮಳೆನೀರು ಕೊಯ್ಲು ವ್ಯವಸ್ಥೆಯನ್ನು ಅಳವಡಿಸಲು ಮುಂದಾಗಿದೆ ಎಂದು ಜಲಮಂಡಳಿ ಅಧ್ಯಕ್ಷರಾದ ಡಾ. ರಾಮ್ ಪ್ರಸಾತ್ ಮನೋಹರ್ ತಿಳಿಸಿದ್ದಾರೆ.

ಜಾಗದ ಕೊರತೆಯಿಂದಾಗಿ ಮಳೆನೀರು ಕೊಯ್ಲು ಅಳವಡಿಸಿಕೊಳ್ಳಲು ಹಿಂಜರಿಯುವ ಗ್ರಾಹಕರಿಗಾಗಿ ಅತ್ಯಂತ ಕಡಿಮೆ ಜಾಗದಲ್ಲಿ ಅಳವಡಿಸಬಹುದಾದ ಹೊಸ ತಂತ್ರಜ್ಞಾನವನ್ನು ಪರಿಚಯಿಸಲಾಗುತ್ತಿದೆ. ಇದು ಕಾವೇರಿ ನೀರು ಹಾಗೂ ಅಂತರ್ಜಲದ ಮೇಲಿನ ಅವಲಂಬನೆಯನ್ನು ಗಣನೀಯವಾಗಿ ಕಡಿಮೆಗೊಳಿಸಲಿದೆ. ಇದರಲ್ಲಿ ಆಂಟಿ–ಚೋಕ್ ನೇಯ್ಗೆಯನ್ನು ಹೊಂದಿರುವ **SS**316 ಮೆಶ್ ಅಳವಡಿಸಲಾಗಿದೆ.

ಫಿಲ್ಟರ್ ಒಳಗಿರುವ ಸ್ಟ್ರೀಮ್ ಲೈನರ್ ವಿನ್ಯಾಸವು ಒಳಬರುವ ನೀರಿನ ವೇಗವನ್ನು ಗರಿಷ್ಠಗೊಳಿಸುತ್ತದೆ.

ಕೇವಲ ಗುರುತ್ವಾಕರ್ಷಣೆಯ ಶಕ್ತಿಯನ್ನು ಬಳಸಿಕೊಂಡು 60 ಮೈಕ್ರಾನ್ ಮೆಶ್‌ನಲ್ಲಿ 90% ಕ್ಕಿಂತ ಹೆಚ್ಚು ನೀರನ್ನು ಮರುಪಡೆಯುವ ಅದ್ಭುತ ಸಾಮರ್ಥ್ಯವನ್ನು ಇದು ಹೊಂದಿದೆ.

ಇದರಲ್ಲಿರುವ ರೆಗ್ಯುಲೇಟರಿ ಸಿಸ್ಟಮ್ ಮತ್ತು ಆಟೋಮ್ಯಾಟಿಕ್ ವಿಂಡೋ ಒಟ್ಟಾಗಿ ಕೆಲಸ ಮಾಡಲಿದ್ದು, ನೀರಿನಲ್ಲಿರುವ

ಅಷ್ಟೇ ದೊಡ್ಡಗಾತ್ರದ ತ್ಯಾಜ್ಯ ವಿದ್ದರೂ ಅದನ್ನು ತಕ್ಷಣವೇ ಹೊರಹಾಕಿ ಅತ್ಯಂತ ಶುದ್ಧ ನೀರನ್ನು ಒದಗಿಸುತ್ತದೆ. ಮಳೆನೀರು ಕೊಯ್ಲು ಅಳವಡಿಸಿಕೊಳ್ಳದ ಕಾರಣಕ್ಕಾಗಿ ಬೆಂಗಳೂರು ನಗರದ ಅನೇಕ ಗ್ರಾಹಕರು ಜಲಮಂಡಳಿಗೆ ಪ್ರತಿ ತಿಂಗಳು ದಂಡ ಪಾವತಿಸುತ್ತಿದ್ದಾರೆ. ಜಲಮಂಡಳಿಯು ಈ ದಂಡದ ರೂಪದಲ್ಲಿಯೇ ಪ್ರತಿ ತಿಂಗಳು 3 ಕೋಟಿ ರೂ. ಗಳಷ್ಟು ಆದಾಯ ಸಂಗ್ರಹಿಸುತ್ತಿದೆ. ಗ್ರಾಹಕರಿಗೆ ಅನುಕೂಲವಾಗಬೇಕು ಹಾಗೂ ಮಳೆ ನೀರಿನ ಸದ್ಬಳಕೆಯಾಗಬೇಕು ಎಂಬ ಸದುದ್ದೇಶದಿಂದ ಈ ಹೊಸ ಯೋಜನೆಯನ್ನು ರೂಪಿಸಲಾಗಿದೆ ಎಂದು ಡಾ. ರಾಮ್‌ಪ್ರಸಾತ್ ಮನೋಹರ್ ತಿಳಿಸಿದ್ದಾರೆ.

ಈ ಯೋಜನೆಯಡಿ ಇಚ್ಚಿಸುವ ಗ್ರಾಹಕರ ಕಟ್ಟಡಗಳಿಗೆ ಜಲ ಮಂಡಳಿಯೇ ಮಳೆನೀರು ಕೊಯ್ಲು ವ್ಯವಸ್ಥೆಯನ್ನು ಅಳವಡಿಸಲಿದೆ. ಇದಕ್ಕಾಗಿ ತಗಲುವ ವೆಚ್ಚವನ್ನು, ಗ್ರಾಹಕರು ಪ್ರತಿ ತಿಂಗಳು ಪಾವತಿಸುವ ಪೆನಾಲ್ಟಿ ಮೊತ್ತದ ರೂಪದಲ್ಲೇ ಹಂತ ಹಂತವಾಗಿ ವಸೂಲಿ ಮಾಡಲು ನಿರ್ಧರಿಸಲಾಗಿದೆ. ಇದರಿಂದ ಕಾಲಕ್ರಮೇಣ ಗ್ರಾಹಕರಿಗೆ ದಂಡ ಕಟ್ಟುವ ಕಿರಿಕಿರಿ ತಪ್ಪುವುದರ ಜೊತೆಗೆ, ಮಾಸಿಕ ನೀರಿನ ಬಿಲ್ ಪ್ರಮಾಣವೂ ಗಣನೀಯವಾಗಿ ಕಡಿಮೆಯಾಗಲಿದೆ.

ಈ ವಿನೂತನ ಮಳೆನೀರು ಕೊಯ್ಲು ಪದ್ಧತಿಯನ್ನು ಈಗಾಗಲೇ ಪ್ರಾಯೋಗಿಕವಾಗಿ (ಪೈಲಟ್ ಪ್ರಾಜೆಕ್ಟ್) 75 ಕಡೆಗಳಲ್ಲಿ ಅಳವಡಿಸಲಾಗಿದ್ದು, ಅತ್ಯುತ್ತಮ ಗುಣಮಟ್ಟದ ನೀರು ಲಭ್ಯವಾಗುತ್ತಿರುವುದು ದೃಢಪಟ್ಟಿದೆ.

ಪ್ರಾಯೋಗಿಕ ಯಶಸ್ಸಿನ ನಂತರ ಈವರೆಗೂ ಮಳೆನೀರು ಕೊಯ್ಲು ಅಳವಡಿಸಿಕೊಳ್ಳದ ಕಟ್ಟಡಗಳಿಗೆ ಇದನ್ನು ವಿಸ್ತರಿಸುವ ಬೃಹತ್ ಅಭಿಯಾನಕ್ಕೆ ಜಲಮಂಡಳಿ ಸಿದ್ಧತೆ ನಡೆಸಿದೆ ಎಂದು ಎಂದು ಜಲಮಂಡಳಿ ಅಧ್ಯಕ್ಷರು ತಿಳಿಸಿದ್ದಾರೆ.

### ರಾಜ್ಯದ ಹಲವೆಡೆ ಗುಡುಗುಸಹಿತ ಮಳೆ: ಹವಾಮಾನ ಇಲಾಖೆ ಮುನ್ಸೂಚನೆ

# ಕರಾವಳಿ ಜಿಲ್ಲೆಗಳಲ್ಲಿ ಸೆಖೆ ಮುಂದುವರಿಕೆ, ಸಿಲಿಕಾನ್ ಸಿಟಿಗೆ ಸದ್ಯಕ್ಕಿಲ್ಲ ವರುಣನ ಸಿಂಚನ

**ಬೆಂಗಳೂರು, ಏ.25:** ರಾಜ್ಯದಲ್ಲಿ ಬಿಸಿಲಿನ ತಾಪ ಏರುತ್ತಿದ್ದು, ಇದರಿಂದ ಕಂಗೆಟ್ಟಿರುವ ಜನತೆಗೆ ಭಾರತೀಯ ಹವಾಮಾನ ಇಲಾಖೆ ಕೊಂಚ ನೆಮ್ಮದಿಯ ಸುದ್ದಿ ನೀಡಿದೆ. ಕರ್ನಾಟಕದ ಹಲವು ಭಾಗಗಳಲ್ಲಿ ಭಾನುವಾರ ಗುಡುಗು, ಮಿಂಚು ಹಾಗೂ ಆಲಿಕಲ್ಲು ಸಹಿತ ಮಳೆಯಾಗುವ ಮುನ್ಸೂಚನೆ ನೀಡಿದೆ. ಹವಾಮಾನ ಇಲಾಖೆಯ ಇತ್ತೀಚಿನ ವರದಿಗಳ ಪ್ರಕಾರ, ಮುಂಗಾರು ಪೂರ್ವ ಮಳೆಯ ಅಬ್ಬರ ಜೋರಾಗಲಿದ್ದು, ಮುನ್ನೆಚ್ಚರಿಕಾ ಕ್ರಮವಾಗಿ ರಾಜ್ಯದ 21 ಜಿಲ್ಲೆಗಳಿಗೆ 'ಯೆಲ್ಲೋ ಅಲರ್ಟ್' ಘೋಷಿಸಲಾಗಿದೆ. ಮಳೆಯ ಜೊತೆಗೆ ಗಂಟೆಗೆ 40 ರಿಂದ 50 ಕಿ.ಮೀ ವೇಗದಲ್ಲಿ ಬಲವಾದ ಬಿರುಗಾಳಿ ಬೀಸುವ ಸಾಧ್ಯತೆಯಿದೆ ಎಂದು ಇಲಾಖೆ ಎಚ್ಚರಿಸಿದೆ.

ಹವಾಮಾನ ಇಲಾಖೆಯ ಮುನ್ಸೂಚನೆಯಂತೆ, ಬೆಳಗಾವಿ, ಗದಗ, ಬಳ್ಳಾರಿ ಮುಂತಾದ ಭಾಗಗಳಲ್ಲಿ ಬಿರುಗಾಳಿ ಸಹಿತ ಗುಡುಗು, ಮಿಂಚಿನ ಮಳೆಯಾಗಲಿದೆ. ಕೆಲವು ಸ್ಥಳಗಳಲ್ಲಿ ಆಲಿಕಲ್ಲು ಮಳೆಯಾಗುವ ಎಚ್ಚರಿಕೆಯನ್ನೂ



ನೀಡಲಾಗಿದ್ದು, ರೈತರು ಹಾಗೂ ಸಾರ್ವಜನಿಕರು ಎಚ್ಚರಿಕೆಯಿಂದ ಇರುವಂತೆ ಸೂಚಿಸಲಾಗಿದೆ.

ದಿಢೀರ್ ಹವಾಮಾನ ಬದಲಾವಣೆಯಿಂದಾಗಿ ತಾಪಮಾನದಲ್ಲಿ ಕೊಂಚ ಇಳಿಕೆಯಾಗುವ ನಿರೀಕ್ಷೆಯಿದೆ.ದಕ್ಷಿಣ ಒಳನಾಡಿನ ಜಿಲ್ಲೆಗಳಾದ ಮೈಸೂರು, ಮಂಡ್ಯ, ಹಾಸನ, ಕೊಡಗು, ಚಿಕ್ಕಮಗಳೂರು, ಶಿವಮೊಗ್ಗ, ಚಾಮರಾಜನಗರ, ಚಿತ್ರದುರ್ಗ, ದಾವಣಗೆರೆ, ತುಮಕೂರು ಮತ್ತು ವಿಜಯನಗರ ಸೇರಿದಂತೆ ವಿವಿಧೆಡೆ ಹಗುರದಿಂದ ಸಾಧಾರಣ ಮಳೆಯಾಗುವ ನಿರೀಕ್ಷೆಯಿದೆ.

ಕರಾವಳಿ ಕರ್ನಾಟಕದ ಜಿಲ್ಲೆಗಳಲ್ಲಿ ಬಿಸಿಲು ಮತ್ತು ಅತಿ ಹೆಚ್ಚು ಸೆಖೆಯ ವಾತಾವರಣ ಮುಂದುವರಿಯಲಿದ್ದು, ಕೆಲವು ಸ್ಥಳಗಳಲ್ಲಿ ಮಾತ್ರ ಗುಡುಗು ಸಹಿತ ಮಳೆಯಾಗಬಹುದು ಎಂದು ವರದಿ ಸ್ಪಷ್ಟಪಡಿಸಿದೆ.

ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿ ವರುಣನ ಸಿಂಚನವಾಗುತ್ತಿದ್ದರೆ, ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಮಾತ್ರ ಸದ್ಯಕ್ಕೆ ಮಳೆಯಾಗುವ ಯಾವುದೇ ಲಕ್ಷಣಗಳಿಲ್ಲ. ಹವಾಮಾನ ವರದಿಯ ಪ್ರಕಾರ, ಏಪ್ರಿಲ್ 28 ರವರೆಗೂ ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ಸಂಪೂರ್ಣ ಒಣಹವೆ ಮುಂದುವರಿಯಲಿದೆ.

ಮೋಡಕವಿದ ವಾತಾವರಣ ಕಂಡುಬಂದರೂ, ಮಳೆಯಾಗುವ ಸಾಧ್ಯತೆ ತೀರಾ ಕಡಿಮೆ. ನಗರದ ಗರಿಷ್ಠ ತಾಪಮಾನ 36.4 ರಿಂದ 37 ಡಿಗ್ರಿ ಸೆಲ್ಸಿಯಸ್ ಆಸುಪಾಸಿನಲ್ಲಿ ಇರಲಿದ್ದು, ಕನಿಷ್ಠ ತಾಪಮಾನ 24 ಡಿಗ್ರಿ ಸೆಲ್ಸಿಯಸ್ ಇರಲಿದೆ.ಒಂದೆಡೆ ಮಳೆಯಾಗುತ್ತಿದ್ದರೆ, ಮತ್ತೊಂದೆಡೆ ಮಳೆ ಇಲ್ಲದ ಬಹುತೇಕ ಪ್ರದೇಶಗಳಲ್ಲಿ ಮುಂದಿನ 5 ದಿನಗಳಲ್ಲಿ ರಾಜ್ಯದ ಗರಿಷ್ಠ ತಾಪಮಾನದಲ್ಲಿ 2 ರಿಂದ 3 ಡಿಗ್ರಿ ಸೆಲ್ಸಿಯಸ್ ಏರಿಕೆಯಾಗುವ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದೆ. ತಾಪಮಾನ ಹೆಚ್ಚಿರುವ ಕಡೆಗಳಲ್ಲಿ ಜನರು ಮಧ್ಯಾಹ್ನದ ವೇಳೆ ಹೊರಬರುವಾಗ ಎಚ್ಚರಿಕೆ ವಹಿಸಬೇಕು.

# ಒಳಮೀಸಲಾತಿ ಐತಿಹಾಸಿಕ ನಿರ್ಣಯ: ಸಿಎಂಗೆ ಸಚಿವ ತಿಮ್ಮಾಪುರ ನಿಯೋಗದ ಕೃತಜ್ಞತೆ

**ಬೆಂಗಳೂರು, ಏ.25:** ಒಳ ಮೀಸಲಾತಿ ಜಾರಿಗೊಳಿಸುವ ಮೂಲಕ ಐತಿಹಾಸಿಕ ತೀರ್ಮಾನ ಕೈಗೊಂಡ ಮುಖ್ಯಮಂತ್ರಿ ಸಿದ್ದರಾಮಯ್ಯರಿಗೆ, ಅಬಕಾರಿ ಮತ್ತು ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ನೇತೃತ್ವದ ನಿಯೋಗ ಕೃತಜ್ಞತೆ ಅರ್ಪಿಸಿತು.

ಮುಖ್ಯಮಂತ್ರಿ ನಿವಾಸ ಕಾವೇರಿಯಲ್ಲಿ ಸಿಎಂ ಸಿದ್ದರಾಮಯ್ಯರನ್ನು ಭೇಟಿ ಮಾಡಿದ ಸಚಿವ ತಿಮ್ಮಾಪುರ ಹಾಗೂ ನೂರಾರು ದಲಿತ ಎಡ ಸಮುದಾಯದ ನಾಯಕರು, ಮೂವತ್ತು ವರ್ಷಗಳ




ಬೇಡಿಕೆ ಈಡೇರಿಸಿದ್ದಕ್ಕೆ ಸಿಹಿ ತಿನ್ನಿಸಿ ಧನ್ಯವಾದ ತಿಳಿಸಿದರು. ನಮ್ಮ ಒಳ ಮೀಸಲಾತಿ ಹೋರಾಟ 30–40 ವರ್ಷಗಳದ್ದು. ಹಲವು ಸರ್ಕಾರಗಳು, ಮುಖ್ಯಮಂತ್ರಿಗಳಿಂದ ಸಾಧ್ಯವಾಗದ ಕೆಲಸವನ್ನ ಸಿದ್ದರಾಮಯ್ಯ ರವರು ಮಾಡಿ ತೋರಿಸಿದ್ದಾರೆ. ಸಿದ್ದರಾಮಯ್ಯ ಸಾಹೇಬರು ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು, ಸರ್ವ ಜನಾಂಗ ಒಪ್ಪುವಂತೆ ಮಾಡಿ, ಎಲ್ಲಾ ಸಂಪುಟ ಸಚಿವರ ಸರ್ವಾನುಮತದಿಂದ ನಿರ್ಣಯ ಕೈಗೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ. ಈ ಮೂಲಕ ನಮ್ಮ ಸಮುದಾಯಕ್ಕೆ ಅನುಕೂಲ ಮಾಡಿಕೊಟ್ಟಿದ್ದಾರೆ. ನಮ್ಮ ಇಡೀ ಸಮುದಾಯ ಸಿದ್ದರಾಮಯ್ಯರನ್ನು ನೆನಪಿಟ್ಟುಕೊಳ್ಳಲಿದೆ. ಇಡೀ ಸಮುದಾಯ ಅವರಿಗೆ ಕೃತಜ್ಞರಾಗಿಲಿದೆ ಎಂದು ಸಚಿವ ತಿಮ್ಮಾಪುರ ಅವರು ಹೇಳಿದರು.

# ಡಾ.ರಾಜ್ ಸಮಾಧಿ ಸ್ಥಳ ಬಗ್ಗೆ ಪ್ರಶ್ನೆ ಎತ್ತಿದ್ದ ನಟ ಚೇತನ್ ಅಹಿಂಸಾ ವಿರುದ್ಧ ದೂರು

**ಬೆಂಗಳೂರು, ಏ.25:** ವರನಟ ಡಾ. ರಾಜ್‌ಕುಮಾರ್ ಸಮಾಧಿ ಸ್ಥಳದ ಬಗ್ಗೆ ಸರ್ಕಾರ ಮೀಸಲಿಟ್ಟಿದ್ದ 2 ಎಕರೆ ಪ್ರದೇಶದ ಬಗ್ಗೆ ಪ್ರಶ್ನೆ ಎತ್ತಿದ್ದ ನಟ ಚೇತನ್ ಅಹಿಂಸಾ ವಿರುದ್ಧ ಬಸವೇಶ್ವರ ನಗರ ಪೊಲೀಸ್ ಠಾಣೆಯಲ್ಲಿ ರಾಜ್‌ಕುಮಾರ್ ಸೇನೆಯಿಂದ ದೂರು ನೀಡಲಾಗಿದೆ.

ಡಾ.ರಾಜ್ ಹುಟ್ಟಿದ ದಿನದಂದು ಅವರ ಸಮಾಧಿಗೆ 2.5 ಎಕರೆ ಜಾಗ ನೀಡಿದ್ದು ಸರಿನಾ, 21ನೇ ಶತಮಾನದಲ್ಲಿ ಪ್ರಮುಖ ಹೋರಾಟವೇ ಭೂಮಿಯಾಗಿದೆ. ಸರ್ಕಾರವೂ ಅದನ್ನ ಗಮನದಲ್ಲಿಟ್ಟು ಕೊಂಡು ಸಾರ್ವಜನಿಕರ ಉಪಯೋಗಕ್ಕೆ ಹಂಚಬೇಕು. ಮತಗಳ ಲಾಭದ ಉದ್ದೇಶದಿಂದ ಹಂಚಬಾರದು ಎಂದು ಸೋಶಿಯಲ್ ಮೀಡಿಯಾದಲ್ಲಿ ನಟ ಚೇತನ್ ಅಹಿಂಸಾ ಪೋಸ್ಟ್ ಮಾಡಿದ್ದರು. ನಟ ಚೇತನ್ ಅಹಿಂಸಾ ವಿರುದ್ಧ ಕ್ರಮ ತೆಗೆದುಕೊಳ್ಳುವಂತೆ ದೂರಿನಲ್ಲಿ ಮನವಿ ಮಾಡಲಾಗಿದೆ. ಹಾಗೂ ಚೇತನ್ ಸಾರ್ವಜನಿಕವಾಗಿ ಕ್ಷಮೆ ಕೇಳಬೇಕು ಎಂದು ಆಗ್ರಹಿಸಿದ್ದಾರೆ.

ಈ ಬಗ್ಗೆ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಚೇತನ್, ನಾನು ಆಕ್ಷೇಪ ಎತ್ತಿದ್ದು ರಾಜ್‌ಕುಮಾರ್ ಅವರಿಗೆ ಸಂಬಂಧಿಸಿದ್ದಲ್ಲ. ನಾನು ಅಮೇರಿಕಾದಲ್ಲಿ ಇದ್ದಾಗಲೂ ಅವರ ಸಿನೆಮಾ ನೋಡಿದ್ದೇನೆ. ಚಿತ್ರರಂಗಕ್ಕೆ ಅವರು ಕೊಟ್ಟ ಕೊಡುಗೆ, ಚಿತ್ರಗಳನ್ನ ನೋಡಿದ್ದೇನೆ, ಆದರೆ ಅವರು ಕಾಲಾನಂತರ ಅವರ ಹೆಸರಲ್ಲಿ ಸರ್ಕಾರ ಲ್ಯಾಂಡ್ ಕೊಟ್ಟ ಬಗ್ಗೆ. ಮತಗಳು ಪಡೆಯುವ ಬಗ್ಗೆ ಸರ್ಕಾರ ಲ್ಯಾಂಡ್ ಕೊಟ್ಟಿದೆ. ಅದರ ಬಗ್ಗೆ ನನ್ನ ಪ್ರಶ್ನೆಯಷ್ಟೆ. ಚಿತ್ರರಂಗದಲ್ಲಿ ಸಾಕಷ್ಟು ಮಂದಿ ಕೊಡುಗೆ ಕೊಟ್ಟಿದ್ದಾರೆ



ಎಂದಿದ್ದಾರೆ.

ಗಾಜನೂರಿನಲ್ಲಿ ಮಾಡಬಹುದಿತ್ತು. ಪುಟ್ಟಣ್ಣ ಕಣಗಾಲ್, ನಂಜುಂಡಸ್ವಾಮಿ, ಸರೋಜದೇವಿ, ವಿಷ್ಣುವರ್ಧನ್, ನಿರ್ಮಾಪಕರು, ಸಾಕಷ್ಟು ಮಂದಿ ಇದ್ದಾರೆ. ಅವರಿಗೆ ಯಾರಿಗೂ ಜಾಗ ಕೊಟ್ಟಿಲ್ಲ. ಕುವೆಂಪು ಅವರದು ಕುಪ್ಪಳ್ಳಿಯಲ್ಲಿ ಮಾಡಲಾಗಿದೆ. ಇವರದು ಗಾಜನೂರಿನಲ್ಲಿ ಮಾಡಬಹುದಿತ್ತು ಎಂದಿದ್ದಾರೆ.

# ಹಳ್ಳ ಹಿಡಿದ ಜಲ್‌ಜೀವನ್ ಮಿಷನ್: ಕೆಟ್ಟು ನಿಂತ ಆರ್‌ಒ ಘಟಕಗಳು, ಶುದ್ಧ ಕುಡಿಯುವ ನೀರು ಮರೀಚಿಕೆ

**ಬೆಂಗಳೂರು, ಏ.25:** ದಿನದಿಂದ ದಿನಕ್ಕೆ ಬೇಸಿಗೆ ಬಿಸಿಲು ರಣ ರೂಪ ತಾಳುತ್ತಿದ್ದು, ಉರಿ ಬಿಸಿಲಿನಲ್ಲಿ ರಾಜ್ಯದ 3,382ಕ್ಕೂ ಅಧಿಕ ಶುದ್ಧ ಕುಡಿಯುವ ಘಟಕಗಳು ನಿಷ್ಕ್ರಿಯಗೊಂಡಿವೆ. ಇದರಿಂದ ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರಿಗೆ ಆಹಾಕಾರ ತಲೆ ದೋರಿದೆ. ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆಯ ಪ್ರಕಾರ, ರಾಜ್ಯದ ಒಟ್ಟು 19,652 ಆರ್.ಒ (ಶುದ್ಧೀಕರಣ) ಘಟಕಗಳ ಪೈಕಿ ಸಾಕಷ್ಟು ಘಟಕಗಳು ಕೆಟ್ಟು ನಿಂತಿವೆ. ಶುದ್ಧ ಕುಡಿಯುವ ನೀರಿಗೆ ಆಹಾಕಾರ ಎದುರಾಗಿದೆ.

ಈಗಾಗಲೇ ರಾಜ್ಯದ ಹಲವೆಡೆ ಬಿಸಿಲಿನ ತಾಪಕ್ಕೆ ಜನ ಕಂಗೆಟ್ಟಿದ್ದಾರೆ. ಈ ಮಧ್ಯೆ ಹಲವು ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಲ್ಬಣಗೊಂಡಿದೆ. ಜಲಜೀವನ್ ಮಿಷನ್ ಯೋಜನೆಯ ಅನುಷ್ಠಾನದಲ್ಲಿನ ವಿಳಂಬ, ಅನುದಾನದ ಕೊರತೆ ಮತ್ತು ಕಳಪೆ ಕಾಮಗಾರಿಯಿಂದಾಗಿ ಶುದ್ಧ ಕುಡಿಯುವ ನೀರು ಇಂದಿಗೂ ಕನಸಾಗಿಯೇ ಉಳಿದಿದೆ. ಗ್ರಾಮ ಪಂಚಾಯತ್‌ಗಳಿಗೆ ಈ ಘಟಕಗಳ ನಿರ್ವಹಣೆಯೇ ದೊಡ್ಡ ಸವಾಲಾಗಿ ಪರಿಣಮಿಸಿದೆ. ಅನಿವಾರ್ಯವಾಗಿ ಬಹುತೇಕ ಜನರು ಕೊಳವೆಬಾವಿ ನೀರಿನ ಮೊರೆ ಹೋಗಿದ್ದಾರೆ.



ಬೆಂಗಳೂರಿನಲ್ಲಿ ಶನಿವಾರ ಕೃಷಿ ವಿಜ್ಞಾನ ವಿಶ್ವವಿದ್ಯಾಲಯ (ಯುಎಎಸ್) ಜಿಕೆವಿಕೆ ಆವರಣದಲ್ಲಿ ಆಯೋಜಿಸಿದ್ದ ರೈತ ಸಂತೆ (ರೈತರ ಮಾರುಕಟ್ಟೆ) ಜನರನ್ನು ಆಕರ್ಷಿಸಿತು.

#### ಎಸ್‌ಎಸ್‌ಎಲ್‌ಸಿ ದಾಖಲೆ ಫಲಿತಾಂಶ

## ಪರೀಕ್ಷಾ ವಿಧಾನ ಮೌಲ್ಯಮಾಪನದಲ್ಲಿ ಗೋಲ್‌ಮಾಲ್ ಶಂಕೆ: ಎಚ್.ವಿಶ್ವನಾಥ್ ಆರೋಪ

**ಮೈಸೂರು, ಏ.25:** 2025–26ನೇ ಸಾಲಿನಲ್ಲಿ ಎಸ್.ಎಸ್.ಎಸ್.ಸಿ. ಫಲಿತಾಂಶ ಶೇ.94.1ರಷ್ಟು ದಾಖಲೆ ಫಲಿತಾಂಶ ಬಂದಿರುವುದಕ್ಕೆ ಪರಿಷತ್ ಬಿಜೆಪಿ ಸದಸ್ಯ ಹೆಚ್.ವಿಶ್ವನಾಥ್ ಅನುಮಾನ ವ್ಯಕ್ತಪಡಿಸಿದ್ದಾರೆ.

ಪರೀಕ್ಷೆ ವಿಧಾನ ಹಾಗೂ ಮೌಲ್ಯಮಾಪನದಲ್ಲಿ ಗೋಲ್‌ಮಾಲ್ ನಡೆದಿದೆ ಎಂದು ಆರೋಪಿಸಿದ್ದಾರೆ. ಮೈಸೂರಿನಲ್ಲಿ ಸುದ್ದಿಗೋಷ್ಠಿ ನಡೆಸಿದ ಹೆಚ್.ವಿಶ್ವನಾಥ್, ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ನಕಲು ಮಾಡಿಸಲಾಗಿದೆ. ಪರೀಕ್ಷಾ ಕೇಂದ್ರಗಳಲ್ಲಿನ ಸಿಸಿಟಿವಿ ಕ್ಯಾಮರಾ ತೆಗೆಸಿ ಅವ್ಯವಹಾರ ನಡೆಸಲಾಗಿದೆ ಎಂದು ಗಂಭೀರ ಆರೋಪ ಮಾಡಿದ್ದಾರೆ.

ಕಳೆದ ವರ್ಷ ಎಸ್.ಎಸ್.ಎಲ್.ಸಿಯಲ್ಲಿ ಶೇ.80.4ರಷ್ಟು ಫಲಿತಾಂಶ ಬಂದಿದ್ದು, ಈಬಾರಿ ಒಮ್ಮೆಲೇ ಶೇ.94.1ರಷ್ಟು ಬರಲು ಹೇಗೆ ಸಾಧ್ಯವಾಯಿತು. ಪರೀಕ್ಷಾ ವಿಧಾನ, ಮೌಲ್ಯಮಾಪನದ ಬಗ್ಗೆ ಅನುಮಾನವಿದೆ. ಇಂತಹ ಫಲಿತಾಂಶವನ್ನು ಸೋಮಾರಿ ಶಿಕ್ಷಕರು ಸ್ವಾಗತಿಸುತ್ತಾರಷ್ಟೇ ಎಂದಿದ್ದಾರೆ.

ಇಲ್ಲಿ ಗುಣಮಟ್ಟದ ಶಿಕ್ಷಣಕ್ಕೆ ಒತ್ತು ನೀಡುತ್ತಿಲ್ಲ. ಎಲ್ಲರೂ ಪಾಸಾಗಬೇಕು ಎಂಬ ಕಸರತ್ತು ನಡೆಸಲಾಗಿದೆ. ಹೀಗಾದರೆ ಮುಂದಿನ ದಿನಗಳಲ್ಲಿ ಅವರ ಕಥೆ ಏನು ಪಿಯು



ಹಂತದಲ್ಲಿ ಶಿಕ್ಷಣ ಮುಂದುವರೆಸುವವರ ಪ್ರಮಾಣ ಕಡಿಮೆಯಾಗಲಿದೆ. ಇದರಿಂದ ಸಮಸ್ಯೆಗಳಾಗಬಹುದು ಎಂದು ತಿಳಿಸಿದ್ದಾರೆ. 20ಕ್ಕೆ 20 ಆಂತರಿಕ ಅಂಕ ಎಲ್ಲರಿಗೂ ಕೊಡಲಾಗಿದೆ. ಇನ್ನು ಪಾಸಾಗಲು ಬೇಕಿರುವುದು ಕೇವಲ 13 ಅಂಕ ಮಾತ್ರ. ಅದನ್ನೂ ಕಾಪಿ ಮಾಡಿದ್ದಾರೆ. ಇದು ನೋವಿನ ಸಂಗತಿ. ಸಿಎಂ ಸಿದ್ದರಾಮಯ್ಯ ಸರ್ಕಾರ ಇಡೀ ಶಿಕ್ಷಣ ವ್ಯವಸ್ಥೆಯನ್ನೇ ಬುಡಮೇಲು ಮಾಡಲು ಹೊರಟಿದೆ ಎಂದು ಕಿಡಿಕಾರಿದರು. ಹಲವಾರು ಸರ್ಕಾರಿ ಶಾಲೆಗಳಲ್ಲಿ ಶಿಕ್ಷಕರೇ ಇಲ್ಲ. ಆದರಲ್ಲೂ ಉತ್ತರ ಕರ್ನಾಟಕ ಭಾಗದಲ್ಲಿ ಶಿಕ್ಷಕರ ಕೊರತೆ ಸಾಕಷ್ಟಿದೆ.

ಆದರೂ ಶೇ.94.1ರಷ್ಟು ಫಲಿತಾಂಶ ಬಂದಿದ್ದು ಹೇಗೆ? ಮಾತೃ ಭಾಷೆ ಕನ್ನಡದಲ್ಲಿಯೇ ಬಹಳಷ್ಟು ವಿದ್ಯಾರ್ಥಿಗಳು ಫೇಲ್ ಆಗಿದ್ದಾರೆ ಯಾಕೆ ಇದ್ಯಾವ ರೀತಿ ಸಾಧನೆ ಹಠಕ್ಕೆ ಬಿದ್ದು ಪಾಸ್ ಮಾಡಿದಂತಿದೆ ಎಂದು ಆರೋಪಿಸಿದ್ದಾರೆ.

## ಕಾಡುಪ್ರಾಣಿ, ಪಕ್ಷಿಗಳ ದಾಹ ತಣಿಸಲು ಅರಣ್ಯ ಇಲಾಖೆ ಕ್ರಮ

## ಕೃತಕ ತೊಟ್ಟಿ ನಿರ್ಮಿಸಿ, ಮೂರು ದಿನಕ್ಕೊಮ್ಮೆ ನೀರು ಪೂರೈಕೆ

**ಉತ್ತರಕನ್ನಡ, ಏ.25:** ಬಿಸಿಲ ಬೇಗೆಗೆ ಮಲೆನಾಡಿನಲ್ಲೂ ವನ್ಯ ಜೀವಿಗಳಿಗೆ ನೀರಿನ ಅಭಾವ ಎದುರಾಗಿದ್ದು, ಕಾಡು ಪ್ರಾಣಿ ಮತ್ತು ಪಕ್ಷಿಗಳ ದಾಹ ತಣಿಸಲು ಅರಣ್ಯ ಇಲಾಖೆ ಮುಂದಾಗಿದೆ.



ಉತ್ತರ ಕನ್ನಡ ಜಿಲ್ಲೆಯ ಅರಣ್ಯ ಪ್ರದೇಶದಲ್ಲಿ ವನ್ಯ ಜೀವಿಗಳಿಗಾಗಿ ಕೃತಕ ನೀರಿನ ತೊಟ್ಟಿಗಳನ್ನು ನಿರ್ಮಿಸಿ, ಮೂರು ದಿನಕ್ಕೊಮ್ಮೆ ನೀರನ್ನು ಪೂರೈಸಲಾಗುತ್ತಿದೆ. ಪಕ್ಷಿಗಳಿಗಾಗಿ ನೀರಿನ ಬಾಟಲ್‌ಗಳನ್ನು ಮರಗಳಿಗೆ ಕಟ್ಟಲಾಗುತ್ತಿದೆ.

ಜಿಲ್ಲೆಯ ಕಾಳಿ ಹುಲಿ ರಕ್ಷಿತ ಪ್ರದೇಶ ,ಶರಾವತಿ ಮೀಸಲು ಅರಣ್ಯ , ಬೇಡ್ತಿ –ಶಾಲ್ಮಲ ರಕ್ಷಿತ ಅರಣ್ಯ ವ್ಯಾಪ್ತಿಯಲ್ಲಿ ನೂರಾರು ನೀರಿನ ಮೂಲಗಳನ್ನು ಕೃತಕವಾಗಿ ಸೃಷ್ಟಿಮಾಡಲಾಗಿದೆ. ಶಿರಸಿ ತಾಲೂಕಿನ ಹುಲೇಕಲ್, ಮಂಚೀಕೇರಿ ಅರಣ್ಯ ವಿಭಾಗದಲ್ಲಿ ಪ್ರಾಣಿ ಪಕ್ಷಿಗಳು ಕುಡಿಯುವ ನೀರಿಗಾಗಿ, ನಾಡಿನತ್ತ ಬರುತ್ತಿವೆ. ಇದರಿಂದ ಉಂಟಾಗಬಹುದಾದ ಮಾನವ–ವನ್ಯಜೀವಿ ಸಂಘರ್ಷ ತಡೆಯಲು, ಕೃತಕ ನೀರಿನ ವ್ಯವಸ್ಥೆ ಮಾಡಲಾಗುತ್ತಿದೆ.

ಮಂಚೀಕೇರಿ ವಲಯ ಅರಣ್ಯಾಧಿಕಾರಿ ಬಸವರಾಜ ಬೋಚಳ್ಳಿ ಮಾತನಾಡಿ, ಮಂಚೀಕೇರಿ ವಲಯದ ಅರಣ್ಯ ಪ್ರದೇಶದಲ್ಲಿನ, ಕುಂದರಗಿ, ಜಕ್ಕೊಳ್ಳಿ ಮತ್ತು ಬಿಳಕಿ ಶಾಖೆಗಳಲ್ಲಿ, ನೀರಿನ ಸಮಸ್ಯೆಯಿದೆ. ಈ ಭಾಗದ 29 ಕಡೆ ನೀರು ಸಂಗ್ರಹಿಸಲು, ಸಿಮೆಂಟ್ ರಿಂಗ್‌ಗಳನ್ನು ಅಳವಡಿಸಿದ್ದು, ಮೂರು ದಿನಕ್ಕೊಮ್ಮೆ ನೀರು ತುಂಬಿಸಲಾಗುತ್ತಿದೆ. ಇದರಿಂದ ವನ್ಯ ಜೀವಿಗಳಿಗೆ, ಕಾಡಿನಲ್ಲೇ ಕುಡಿಯಲು ನೀರು ಲಭ್ಯವಾಗಲಿದ್ದು, ಗ್ರಾಮಗಳತ್ತ ಬರುವುದನ್ನು ತಪ್ಪಿಸಿ, ಮಾನವ–ವನ್ಯಜೀವಿ ಸಂಘರ್ಷ ತಡೆಯಲಾಗುತ್ತಿದೆ ಎಂದರು.

ಕುಂದರಗಿ ಶಾಖೆಯ ಉಪ ವಲಯ ಅರಣ್ಯ ಅಧಿಕಾರಿ ವೀರಪ್ಪ ಪಟಗಾರ್ ಮಾತನಾಡಿ, ಕುಂದರಿಗಿ ವಲಯದ, ಹೆಮ್ಮಡಿ ಮತ್ತು ಭರಣಿ ವ್ಯಾಪ್ತಿಯಲ್ಲಿ, ಚುಕ್ಕೆ ಜಿಂಕೆಗಳು, ಬಾರ್ಕಿಂಗ್ ಡೀರ್ ಹಾಗೂ ಮೌಸ್ ಡೀರ್‌ಗಳಂತಹ ವನ್ಯ ಪ್ರಾಣಿಗಳು ಹೆಚ್ಚಾಗಿವೆ. ಇವು ಬೇಸಿಗೆಯಲ್ಲಿ ನೀರನ್ನರಸಿ, ಗ್ರಾಮಗಳತ್ತ ಬಂದು , ಬೆಳೆ ಹಾನಿಗೆ ಕಾರಣವಾಗುತ್ತಿತ್ತು. ಕಾಡು ಪ್ರಾಣಿಗಳು ನಾಡಿಗೆ ಬರುವುದನ್ನು ತಡೆಯುವುದು ಮತ್ತು ಅವುಗಳ ರಕ್ಷಣೆಗಾಗಿ, ಗ್ರಾಮ ಅರಣ್ಯ ಸಮಿತಿಯ ಸಹಯೋಗದಲ್ಲಿ 10 ಕಡೆ ನೀರಿನ ತೊಟ್ಟಿಗಳನ್ನು ನಿರ್ಮಿಸಲಾಗಿದೆ ಎಂದರು.

ಜಕ್ಕೊಳ್ಳಿ ಶಾಖೆಯಲ್ಲಿ ಉಪ ವಲಯ ಅರಣ್ಯಾಧಿಕಾರಿ ಜಗದೀಶ್ ತಾನಾಜಿ ಪಾಲಕನವರ್ ಮಾತನಾಡಿ, ಜಕ್ಕೊಳ್ಳಿ ಮತ್ತು ಉಚಗೇರಿ ಗ್ರಾಮಗಳಲ್ಲಿ, ಎರಡು ಅರಣ್ಯ ಸಮಿತಿಗಳಿದ್ದು, ಜಕ್ಕೊಳ್ಳಿ ಗ್ರಾಮ ಅರಣ್ಯ ಸಮಿತಿಯಿಂದ, ಗ್ರಾಮ ಅರಣ್ಯ ಅಭಿವೃದ್ಧಿ ನಿಧಿ ಬಳಸಿ , ಅರಣ್ಯ ಪ್ರದೇಶದಲ್ಲಿ 10 ನೀರಿನ ತೊಟ್ಟಿಗಳ ನಿರ್ಮಾಣ ಮಾಡಿದ್ದು, ಪ್ರತಿ ಮೂರು ದಿನಗಳಿಗೊಮ್ಮೆ ನೀರು ತುಂಬಿಸಲಾಗುತ್ತಿದೆ. ಇದರಿಂದ ಬೇಸಿಗೆಯಲ್ಲಿ ಕಾಡು ಪ್ರಾಣಿಗಳಿಗೆ ಕುಡಿಯಲು ನೀರಿನ ಸಮಸ್ಯೆ ಉಂಟಾಗದಂತೆ ನೋಡಿಕೊಳ್ಳಲಾಗುತ್ತಿದೆ ಎಂದರು.

## ಬೆಳಕೋಣಿ ಸೇತುವೆ ಕಾಮಗಾರಿ ಶಾಸಕ ಪ್ರಭು ಚವ್ಹಾಣ್ ಪರಿಶೀಲನೆ

**ಬೀದರ್, ಏ. 25:** ಜಿಲ್ಲೆಯ ಔರಾದ್ ಕ್ಷೇತ್ರದ ಔರಾದ್–ಸದಾಶಿವಘಡ ರಾಜ್ಯ ಹೆದ್ದಾರಿಯ ಬೆಳಕೋಣಿ(ಚೌ) ಗ್ರಾಮದ ಸಮೀಪ ಸುಮಾರು 2 ಕೋಟಿ ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ಸೇತುವೆ ಕಾಮಗಾರಿ ಸ್ಥಳಕ್ಕೆ ಶಾಸಕ ಪ್ರಭು ಬಿ. ಚವ್ಹಾಣ್ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು.



ಕಾಮಗಾರಿಯ ಪ್ರಗತಿಯನ್ನು ಸವಿಸ್ತಾರವಾಗಿ ಅವಲೋಕಿಸಿದ ಅವರು, ಸಂಬಂಧಿತ ಅಧಿಕಾರಿಗಳು ಮತ್ತು ಗುತ್ತಿಗೆದಾರರಿಂದ ಮಾಹಿತಿ ಪಡೆದುಕೊಂಡರು. ಕಾಮಗಾರಿಯ ಗುಣಮಟ್ಟ, ಬಳಸಲಾಗುತ್ತಿರುವ ಸಾಮಗ್ರಿಗಳ ಮಟ್ಟ, ತಾಂತ್ರಿಕ ಅಂಶಗಳ ಕುರಿತು ವಿಚಾರಿಸಿದರು.

ಮಳೆಗಾಲದ ಸಂದರ್ಭದಲ್ಲಿ ರಸ್ತೆ ಕಡಿತಗೊಂಡು ಸಾಕಷ್ಟು ಅನಾನುಕೂಲ ಆಗುತ್ತಿರುವುದನ್ನು ಕಂಡು ಅವಶ್ಯಕ ಅನುದಾನ ತಂದು ಕಾಮಗಾರಿ ಆರಂಭಿಸಲಾಗಿದೆ. ಸಾರ್ವಜನಿಕರ ಹಿತದೃಷ್ಟಿಯಿಂದ ಕೈಗೆತ್ತಿಕೊಳ್ಳಲಾಗಿರುವ ಈ ಕಾಮಗಾರಿ ಕಾಲಮಿತಿಯಲ್ಲಿ ಮತ್ತು ಗುಣಮಟ್ಟದೊಂದಿಗೆ ಪೂರ್ಣಗೊಳಿಸಬೇಕು. ವಿಳಂಬ ಅಥವಾ ಗುಣಮಟ್ಟದಲ್ಲಿ ಕೊರತೆಯುಂಟಾದರೆ ಸಂಬಂಧಿಸಿದ ಅಧಿಕಾರಿಗಳು ಹಾಗೂ ಗುತ್ತಿಗೆದಾರರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಎಚ್ಚರಿಸಿದರು.


ಮುಖಂಡರಾದ ರಾಮಶೆಟ್ಟಿ ಪನ್ನಾಳೆ, ಶಿವಾಜಿರಾವ್ ಪಾಟೀಲ್ ಮುಂಗನಾಳ್, ಶಿವರಾಜ್ ಅಲ್ಮಾಜೆ, ರಾಜಕುಮಾರ್ ಸೋರಾಳೆ, ದೋಂಡಿಬಾ ನರೋಟೆ ಸೇರಿದಂತೆ ಇತರರು ಉಪಸ್ಥಿತರಿದ್ದರು. ಇತ್ತೀಚೆಗೆ ಅನಾರೋಗ್ಯ ದಿಂದ ಮೃತಪಟ್ಟ ಪಕ್ಷದ ಕಾರ್ಯಕರ್ತ ಸುಜಿತ ನ್ಯಾಲಕಲೆ ಅವರ ಮನೆಗೆ ಭೇಟಿ ನೀಡಿ ಸಾಂತ್ವನ ಹೇಳಿದರು.


**ಎಕಂಬಾ ಸೇತುವೆ ಪರಿಶೀಲನೆ:** ಎಕಂಬಾ ಗ್ರಾಮದ ಹತ್ತಿರ 2 ಕೋಟಿ ವೆಚ್ಚದಲ್ಲಿ ನಡೆಯುತ್ತಿರುವ ಸೇತುವೆ ನಿರ್ಮಾಣ ಕಾಮಗಾರಿ ಸ್ಥಳಕ್ಕೆ ಶಾಸಕರು ಇತ್ತೀಚೆಗೆ ಭೇಟಿ ನೀಡಿದರು. ಉತ್ತಮ ಗುಣಮಟ್ಟದ ಸಿಮೆಂಟ್, ಕಬ್ಬಿಣ ಹಾಗೂ ಮತ್ತಿತರೆ ಎಲ್ಲ ನಿರ್ಮಾಣ ಸಾಮಗ್ರಿಗಳನ್ನು ಬಳಸುವ ಮೂಲಕ ಕಾಮಗಾರಿಯನ್ನು ಗುಣಮಟ್ಟದಿಂದ ಮಾಡಬೇಕು. ಕ್ಯೂರಿಂಗ್ ಕೆಲಸ ಸರಿಯಾಗಿ ಆಗಬೇಕು. ಈ ವಿಷಯದಲ್ಲಿ ಯಾವುದೇ ನಿರ್ಲಕ್ಷ್ಯ ತೋರಿಸಿದರೆ ಸಹಿಸುವುದಿಲ್ಲ ಎಂದು ಶಾಸಕ ಚೌಹಾಣ್ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದರು.

## ಶ್ರೀ ಶೆಟ್ಟಿ ಸಂಗಪ್ಪ ಸ್ಮಾರಕ ಶಾಲೆಗೆ ಎಸ್‌ಎಸ್‌ಎಲ್‌ಸಿ ಶೇ.99.8ರಷ್ಟು ಫಲಿತಾಂಶ

**ಕಲಬುರಗಿ, ಏ.25–** ನಗರದ ಅಳಂದ ರಸ್ತೆಯಲ್ಲಿರುವಶೆಟ್ಟಿ ಸಂಗಪ್ಪ ಸ್ಮಾರಕ ಶಾಲೆ ಈ ಬಾರಿಯ ಎಸ್‌ಎಸ್‌ಎಲ್‌ಸಿಯಲ್ಲಿ ಶೇ. 99.8 ಫಲಿತಾಂಶ ಪಡೆದು ಉತ್ತಮ ಸಾಧನೆ ಮಾಡಿದೆ. ಶಾಲೆಯು ವರ್ಷದಿಂದ ವರ್ಷಕ್ಕೆ ಎಸ್‌ಎಸ್‌ಎಲ್‌ಸಿಯಲ್ಲಿ ಉತ್ತಮ ಸಾಧನೆಯನ್ನು ಮಾಡುತ್ತಿದ್ದು ಈ ಬಾರಿ ಶೇ.99.8ರಷ್ಟು ಫಲಿತಾಂಶ ದಾಖಲಿಸಿ ಶಾಲೆಗೆ ಕೀರ್ತಿ ತಂದಿದೆ ಎಂದು ಆಡಳಿತ ಮಂಡಳಿಯ ಅಧ್ಯಕ್ಷರಾದ ನ್ಯಾಯವಾದಿ ಮತ್ತು ಗೃಹ ರಕ್ಷಕ ದಳದ ಮಾಜಿ ಸಮಾದೇಷ್ಟರಾದ ಗಿರಿಜಾ ಶಂಕರ ಶೆಟ್ಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಶಾಲೆಯಲ್ಲಿ ಶೇ.95.36 ಅಂಕ ಪಡೆದ ರುಚಿ ಅಗ್ರಸ್ಥಾನ ಪಡೆದು





ಕೀರ್ತಿ ತಂದಿದ್ದಾಳೆ. ಸ್ವಾತಿ ಶೇ.91.36, ವೈಷ್ಣವಿ ಶೇ.90.72 ಆನಂದ್ ಶೇ.89.60, ವಿನಯ್ ಕುಮಾರ್ ಶೇ. 88, ಐಶ್ವರ್ಯ ಶೇ.86.56, ನೀರಜ್ ಶೇ. 85.92, ಸೌಂದರ್ಯ ಶೇ.85.28, ಸುಬ್ರಹ್ಮಣ್ಯ ಶೇ.82.72 ಹಾಗೂ ಸಾಗರ್ ಶೇ.81.28 ಅಂಕ ಪಡೆದು ಶಾಲೆಯ ಗೌರವ ಹೆಚ್ಚಿಸಿದ್ದಾರೆ.

ಶಾಲೆಯಲ್ಲಿ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಆಡಳಿತ ಮಂಡಳಿಯ ಅಧ್ಯಕ್ಷ ಗಿರಿಜಾ ಶಂಕರ್ ಶೆಟ್ಟಿ, ಸುಜಾತಾ ಗಿರಿಜಾ ಶಂಕರ್ ಶೆಟ್ಟಿ, ಸಂಗಪ್ಪ ಜಿ. ಶೆಟ್ಟಿ, ಅಮೂಲ್ಯ ಎಸ್. ಗುತ್ತೇದಾರ್, ಸತೀಶ್ ವಿ.ಗುತ್ತೇದಾರ್, ಸವಿತಾ ಗುತ್ತೇದಾರ್ ಹಾಗೂ ಶಾಲಾ ಪ್ರಾಂಶುಪಾಲರು ಶಿಕ್ಷಕರು ಮತ್ತು ಶಿಕ್ಷಕೇತರ ಸಿಬ್ಬಂದಿ ಶುಭ ಹಾರೈಸಿದ್ದಾರೆ.

## ಬಿಐಟಿಎಂಗೆ ಮತ್ತೊಂದು ಕೀರ್ತಿ: ಡಾ. ಜಗದೀಶ್ ಅಂತರರಾಷ್ಟ್ರೀಯ ಸಂಶೋಧನಾ ಸಾಧನೆ

ಬಳ್ಳಾರಿ, ಏ.25. ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ & ಮ್ಯಾನೇಜ್ಮೆಂಟ್ (ಬಿಐಟಿಎಂ), ಬಳ್ಳಾರಿಯ ಕಂಪ್ಯೂಟರ್ ಸೈನ್ಸ್ ಮತ್ತು ಎಂಜಿನಿಯರಿಂಗ್ ವಿಭಾಗದ ಪ್ರೊಫೆಸರ್ ಡಾ. ಜಗದೀಶ್ ಆರ್.ಎಂ. ಅವರು ತೈವಾನಿನ ನ್ಯಾಷನಲ್ ಕೌಶಿಯುಂಗ್ ಯೂನಿವರ್ಸಿಟಿ ಆಫ್ ಸೈನ್ಸ್ ಅಂಡ್ ಟೆಕ್ನಾಲಜಿ (ಎನ್.ಕೆ.ಯು.ಎಸ್.ಟಿ.)ಯ ಐಒಟಿ ಸೈಬರ್ಸಿಕ್ಯೂರಿಟಿ ಸಂಶೋಧನಾ ಸಂಸ್ಥೆಯಲ್ಲಿ ಅಂತರರಾಷ್ಟ್ರೀಯ ಪೋಸ್ಟ್‌ಡಾಕ್ಟರಲ್ ಕಾರ್ಯಕ್ರಮವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ್ದಾರೆ.

ಈ ಸಂಶೋಧನಾ ಕಾರ್ಯಕ್ರಮವನ್ನು ಪ್ರೊ. ಚಿನ್–ಶಿಹ್ ಶೈ (ಎನ್.ಕೆ.ಯು.ಎಸ್.ಟಿ.) ಹಾಗೂ ಡಾ. ಮೊಹಮ್ಮದ್ ಅಲಿ ಹುಸ್ಸೇನ್, ಡೀನ್ (ಆರ್ & ಡಿ), ಶ್ರೀನಿಧಿ ಇನ್ಸ್ಟಿಟ್ಯೂಟ್ ಆಫ್ ಸೈನ್ಸ್ & ಟೆಕ್ನಾಲಜಿ,



ಹೈದರಾಬಾದ್ ಅವರ ಮಾರ್ಗದರ್ಶನದಲ್ಲಿ ಕೈಗೊಂಡಿದ್ದಾರೆ.

ಐಒಟಿ ಬಳಸಿ ಬೆಳೆಗಳ ಮೇಲ್ವಿಚಾರಣೆಗಾಗಿ ಅಡಾಪ್ಟಿವ್ ಕೃತಕ ಬುದ್ಧಿಮತ್ತೆ (ಎಐ) ಆಧಾರಿತ ತಂತ್ರಜ್ಞಾನ ಎಂಬ ಮಹತ್ವದ ಸಂಶೋಧನಾ ವಿಷಯದ ಮೇಲೆ ಕಾರ್ಯನಿರ್ವಹಿಸಿರುವ ಡಾ. ಜಗದೀಶ್ ಅವರು, ಈ ಶೈಕ್ಷಣಿಕ ಪ್ರಯಾಣವು ಅತ್ಯಂತ ಸಮೃದ್ಧ ಮತ್ತು ಜ್ಞಾನವರ್ಧಕ ಅನುಭವವಾಗಿದ್ದು, ಐಒಟಿ ಹಾಗೂ ಕೃತಕ ಬುದ್ಧಿಮತ್ತೆ ಕ್ಷೇತ್ರಗಳಲ್ಲಿ ತಮ್ಮ ಸಂಶೋಧನಾ ಸಾಮರ್ಥ್ಯವನ್ನು ಮತ್ತಷ್ಟು ವಿಸ್ತರಿಸಲು ಸಹಕಾರಿಯಾಗಿದೆ ಎಂದು ತಿಳಿಸಿದ್ದಾರೆ.

ಈ ಸಾಧನೆಯ ಕುರಿತು ಸಂಸ್ಥೆಯ ಅಧ್ಯಕ್ಷರಾದ ಡಾ. ಯಶವಂತ್ ಭೂಪಾಲ್ ಅವರು ಸಂತಸ ವ್ಯಕ್ತಪಡಿಸಿ, ನಮ್ಮ ಸಂಸ್ಥೆಯ ಅಧ್ಯಾಪಕರು ಜಾಗತಿಕ ಮಟ್ಟದಲ್ಲಿ ಸಾಧನೆ ಮಾಡುತ್ತಿರುವುದು ಹೆಮ್ಮೆಯ ವಿಷಯವಾಗಿದ್ದು, ಇದು ನಮ್ಮ ಸಂಸ್ಥೆಯ ಗೌರವವನ್ನು ಮತ್ತಷ್ಟು ಹೆಚ್ಚಿಸುವಲ್ಲಿ ಮಹತ್ವದ ಪಾತ್ರವಹಿಸುತ್ತದೆ ಎಂದು ತಿಳಿಸಿದ್ದಾರೆ.

ಸಂಸ್ಥೆಯ ನಿರ್ದೇಶಕ ವೈ. ಜೆ. ಪೃಥ್ವಿರಾಜ್ ಭೂಪಾಲ್, ಡಾ. ಜಗದೀಶ್ ಅವರ ಸಾಧನೆ ನಮ್ಮ ವಿದ್ಯಾರ್ಥಿಗಳಿಗೆ ಪ್ರೇರಣಾ ಯಾಗಿದ್ದು, ಸಂಶೋಧನೆ ಮತ್ತು ನವೀನತೆಯತ್ತ ಹೆಜ್ಜೆ ಇಡುವಂತೆ ಉತ್ತೇಜಿಸುತ್ತದೆ ಎಂದು ಅಭಿನಂದಿಸಿದ್ದಾರೆ.

## ಹವಾಮಾನ ವೈಪರೀತ್ಯದಿಂದಾಗಿ ಅನ್ನ, ನೀರಿಗೆ ಹಾಹಾಕಾರ: ಕೋಡಿಮಠ ಶ್ರೀಗಳ ಸ್ಫೋಟಕ ಭವಿಷ್ಯ

**ಮಂಡ್ಯ, ಏ.25:** ಇತ್ತೀಚಿನ ಹವಾಮಾನ ವೈಪರೀತ್ಯದಿಂದ ಮುಂದಿನ ದಿನಗಳಲ್ಲಿ ದೇಶದಲ್ಲಿ ಅನ್ನ, ನೀರಿನ ಹಾಹಾಕಾರದ ಸಮಸ್ಯೆ ಎದುರಾಗಲಿದೆ ಎಂದು ಕೋಡಿಮಠದ ಮಹಾ ಸಂಸ್ಥಾನದ ಶ್ರೀ ಶಿವಾನಂದ ಶಿವಯೋಗಿ ರಾಜೇಂದ್ರ ಸ್ವಾಮೀಜಿ ಸ್ಫೋಟಕ ಭವಿಷ್ಯ ನುಡಿದಿದ್ದಾರೆ.

ಮದ್ದೂರು ತಾಲೂಕಿನ ಚಾಮನಹಳ್ಳಿ ಗ್ರಾಮದಲ್ಲಿ ಶನಿವಾರ ನಡೆದ ಶ್ರೀ ಬಂಡೆ ಶನೇಶ್ವರಸ್ವಾಮಿಯ ಜಾತ್ರಾ ಮಹೋತ್ಸವ ಹಾಗೂ ಮಹಾ ರಾಜಗೋಪುರದ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.ದಿನದಿಂದ ದಿನಕ್ಕೆ ಹವಾಮಾನ ವೈಪರಿತ್ಯರಿಂದ ಪ್ರಕೃತಿಯಲ್ಲಿ ಸಾಕಷ್ಟು ಏರುಪೇರಾಗುತ್ತಿದ್ದು, ಅಪಮೃತ್ಯು ಹೆಚ್ಚಾಗಲಿದೆ. ಹೀಗಾಗಿ, ಮುಂದಿನ ದಿನಗಳಲ್ಲಿ ದೇಶದಲ್ಲಿ ಅನ್ನ, ನೀರಿನ ಹಾಹಾಕಾರದ ಸಮಸ್ಯೆ ಎದುರಾಗಲಿದ್ದು, ಕರ್ನಾಟಕಕ್ಕೆ ಯಾವುದೇ ರೀತಿಯ ಸಮಸ್ಯೆ ಉಲ್ಬಣವಾಗುವುದಿಲ್ಲ ಎಂದರು.

#### ಮದ್ದೂರು ಉತ್ಸವ 2026: ಮ್ಯಾರಥಾನ್‌ಗೆ ಚಾಲನೆ

## ಜಾನಪದ ಸಂಸ್ಕೃತಿ ಉಳಿಸಿ ಬೆಳೆಸುವುದು ಎಲ್ಲರ ಆದ್ಯತೆ: ಚೆಲುವರಾಯಸ್ವಾಮಿ ಅಭಿಮತ

**ಮಂಡ್ಯ, ಏ.25:** ಮದ್ದೂರಿನ ಇತಿಹಾಸದಲ್ಲೆ ಪ್ರಪ್ರಥಮ ಬಾರಿಗೆ ಮದ್ದೂರು ಉತ್ಸವ–2026 ಕಾರ್ಯಕ್ರಮವನ್ನು ಅದ್ದೂರಿಯಾಗಿ ಆಚರಣೆ ಮಾಡುತ್ತಿದ್ದು, ಈ ಕಾರ್ಯಕ್ರಮಕ್ಕೆ ಜನತೆ ಪಕ್ಷಾತೀತವಾಗಿ ಬೆಂಬಲ ನೀಡಿ ಯಶಸ್ವಿಗೊಳಿಸುವಂತೆ ಕೃಷಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಮನವಿ ಮಾಡಿದರು.

ನಗರದ ಪ್ರವಾಸಿ ಮಂದಿರದ ಬಳಿ ಶನಿವಾರ ಮದ್ದೂರು ಉತ್ಸವದ ಪ್ರಾರಂಭೋತ್ಸವದ ಅಂಗವಾಗಿ ಪ್ರವಾಸಿ ಮಂದಿರದಿಂದ ಸತ್ಯಾಗ್ರಹಸೌಧವರಿಗೆ ಸುಮಾರು 4 ಕಿ.ಮೀ. ದೂರ ಹಮ್ಮಿಕೊಂಡಿದ್ದ ಬೃಹತ್ ಮ್ಯಾರಾಥಾನ್ (ಕಾಲ್ನಡಿಗೆ) ಜಾಥಾಗೆ ಚಾಲನೆ ನೀಡಿ ಮಾತನಾಡಿ, ಜಾನಪದ, ಕಲೆ, ಸಂಸ್ಕೃತಿಯನ್ನು ಉಳಿಸಿ, ಬೆಳೆಸುವುದು ನಮ್ಮೆಲ್ಲರ ಆದ್ಯತೆಯಾಗಿದೆ.

ಮದ್ದೂರು ಕೇವಲ ಭೌಗೋಳಿಕ ಗಡಿಯಲ್ಲ, ಇದು ತ್ಯಾಗರಾಜರ ನಾಡು, ಇತಿಹಾಸದ ಪುಟಗಳಲ್ಲಿ ದಾಖಲಾದ ಪುಣ್ಯಭೂಮಿ. ನಮ್ಮ ಜಾನಪದ, ಕಲೆ, ಕೃಷಿ ಸಂಸ್ಕೃತಿಯನ್ನು ಜಗತ್ತಿಗೆ ಸಾರಲು ಇಂತಹ ಉತ್ಸವಗಳು ಸೇತುವೆಯಾಗಲಿದೆ ಎಂದರು. ಶಾಸಕ ಕೆ.ಎಂ.ಉದಯ್ ಅವರು ಕದಲೂರು ಉದಯ್ ಚಾರಿಟಬಲ್ ಟ್ರಸ್ಟ್ ವತಿಯಿಂದ ಸಾಕಷ್ಟು ಮುತುವರ್ಜಿ ವಹಿಸಿಕೊಂಡು ಈ ಬಾರಿ ಮದ್ದೂರಿನ ಇತಿಹಾಸದ ಪುಟಗಳಲ್ಲಿ ಜನರ ಮನಸಿನಲ್ಲಿ ಶಾಶ್ವತವಾಗಿ ಉಳಿಯುವ ರೀತಿಯಲ್ಲಿ ಮದ್ದೂರು ಉತ್ಸವವನ್ನು ವ್ಯವಸ್ಥಿತವಾಗಿ ಆಚರಿಸುವ ಉದ್ದೇಶದಿಂದ ಹಲವಾರು ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ಜನರು ಅಗತ್ಯ ಸಹಕಾರ ನೀಡಬೇಕು ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಮನವಿ ಮಾಡಿದರು.

**ಉತ್ತಮ ರಾಸುಗಳಿಗೆ ನಗದು ಬಹುಮಾನ**

ಶಾಸಕ ಕೆ.ಎಂ.ಉದಯ್ ಮಾತನಾಡಿ, ಮದ್ದೂರು ಉತ್ಸವವನ್ನು ಏ.25 ರಿಂದ ಮೇ.6ವರೆಗೆ ನಡೆಯಲಿದ್ದು, ಏ.25 ರಿಂದ ಏ.30 ರವರೆಗೆ ರಾಸುಗಳ ಜಾತ್ರೆ ನಡೆಯಲಿದೆ. ಉತ್ತಮ ರಾಸುಗಳನ್ನು ಚಾಂಪಿಯನ್ ಎಂದು ಘೋಷಿಸಿ, ಕ್ರಮವಾಗಿ ಮೊದಲ ಚಾಂಪಿಯನ್‌ಗೆ 2 ಲಕ್ಷ ರೂ. ಎರಡನೇ ಚಾಂಪಿಯನ್‌ಗೆ 1 ಲಕ್ಷ ರೂ. ಮೂರನೇ ಚಾಂಪಿಯನ್ 50 ಸಾವಿರ ನಗದು ಬಹುಮಾನ ಕೊಡಲಾಗುವುದು.

ಅಲ್ಲದೇ 10 ರಾಸುಗಳಿಗೆ 10 ಸಾವಿರ ರೂ. ಸಮಾಧಾನಕರ ಬಹುಮಾನ ನೀಡಲಾಗುವುದು. ಮೊದಲ ಬಾರಿಗೆ ಜಾತ್ರೆಯಲ್ಲಿ ಪಾಲ್ಗೊಳ್ಳುವ ಟಗರುಗಳಿಗೂ ಕೂಡ ಕ್ರಮವಾಗಿ 10 ಸಾವಿರ ಹಾಗೂ 5 ಸಾವಿರ ನಗದು ಬಹುಮಾನ ನೀಡಲಾಗುವುದು. ಬಹುಮಾನ ವಿಜೇತ ರಾಸುಗಳನ್ನು ಏ.30 ರಂದು ಮದ್ದೂರು ಪ್ರವಾಸಿ ಮಂದಿರ ಆವರಣದಿಂದ ಶ್ರೀ ಉಗ್ರ ನರಸಿಂಹಸ್ವಾಮಿ ದೇವಾಲಯದವರೆಗೆ ಮೆರವಣಿಗೆ ಮೂಲಕ ಕರೆತಂದು ಬಹುಮಾನ ನೀಡಿ ಗೌರವಿಸಲಾಗುವುದು ಎಂದರು.

**ವಾಲಿಬಾಲ್ ಪಂದ್ಯಾವಳಿ**

ಮದ್ದೂರು ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ 18 ವರ್ಷ ಮೇಲ್ಪಟ್ಟ ಯುವಕ, ಯುವತಿಯರಿಗೆ ಏ.28, 29 ರಂದು ವಾಲಿಬಾಲ್ ಮತ್ತು ಕಬಡ್ಡಿ ಪಂದ್ಯಾವಳಿ ಆಯೋಜಿಸಲಾಗಿದ್ದು, ನಗರದ ತಾಲೂಕು ಕ್ರೀಡಾಂಗಣ ಹಾಗೂ ಜೂನಿಯರ್ ಕಾಲೇಜಿನ ಆವರಣದಲ್ಲಿ ಪಂದ್ಯಾವಳಿಗಳು ನಡೆಯಲಿದೆ. ವಿಜೇತ ತಂಡಗಳಿಗೆ ಕ್ರಮವಾಗಿ 50 ಸಾವಿರ, 25 ಸಾವಿರ, 10 ಸಾವಿರ ನಗದು ಬಹುಮಾನ ನೀಡುವುದರ ಜತೆಗೆ 10 ಸಾವಿರ ರೂ. ಸಮಾಧಾನಕರ ಬಹುಮಾನ ನೀಡಲಾಗುವುದು ಎಂದರು.

**ರಂಗೋಲಿ ಸ್ಪರ್ಧೆ**

ಮೇ.1 ರಿಂದ 4 ರವರೆಗೆ ಮದ್ದೂರು ನಗರದ ನಿವಾಸಿಗಳಿಗೆ ರಂಗೋಲಿ ಸ್ಪರ್ಧೆ ಆಯೋಜಿಸಲಾಗಿದ್ದು, ಸ್ಪರ್ಧೆಯು ಪ್ರತೀ ವಾರ್ಡ್ ಮಟ್ಟದಲ್ಲಿ ನಡೆಯಲಿದ್ದು, ವಿಜೇತರಾದ ಮಹಿಳೆಯರಿಗೆ ಮಿಕ್ಸಿ, ಕುಕ್ಕರ್, ಬಿಸಿ ನೀರು ಜಗ್ಗು ಬಹುಮಾನವಾಗಿ ನೀಡಲಾಗುವುದು. ಅಲ್ಲದೇ, ವಿಜೇತರಾದ ಮಹಿಳೆಯರಿಗೆ ಮತ್ತೊಮ್ಮೆ ಸ್ಪರ್ಧೆ ಆಯೋಜಿಸಿ ವಾಷಿಂಗ್ ಮೆಷಿನ್, ರೆಫ್ರಿಜಿರೇಟರ್, ಗ್ರೈಂಡರ್ ಹಾಗೂ 10 ಸಮಾಧಾನಕರ ಬಹುಮಾನ ನೀಡಲಾಗುವುದು ಎಂದರು.ಮೇ.6 ರಂದು ಮದ್ದೂರು ಪಟ್ಟಣದ ಕ್ರೀಡಾಂಗಣದಲ್ಲಿ ಸಂಗೀತ ರಸಸಂಜೆ ಆಯೋಜಿಸಲಾಗಿದ್ದು, ಕಾರ್ಯಕ್ರಮದಲ್ಲಿ ಸ್ಥಳೀಯ ಜನಪ್ರತಿನಿಧಿಗಳು ಸೇರಿದಂತೆ ಖ್ಯಾತ



ಚಲನಚಿತ್ರ ನಟ ನಟಿಯರು ಪಾಲ್ಗೊಳ್ಳಲಿದ್ದಾರೆ. ಜತೆಗೆ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಕಾರ್ಯಕ್ರಮದಲ್ಲಿ ಬಹುಮಾನ ವಿತರಿಸಲಾಗುವುದು ಎಂದರು.

ಇನ್ನು ಮ್ಯಾರಥಾನ್‌ಗೂ ಮುನ್ನ ಕೃಷಿ ಸಚಿವ ಎನ್.ಚಲುವರಾಯಸ್ವಾಮಿ, ಶಾಸಕರಾದ ಕೆ.ಎಂ.ಉದಯ್, ದಿನೇಶ್ ಗೂಳಿಗೌಡ ಹಾಗೂ ಅಧಿಕಾರಿಗಳು ಗೋಪೂಜೆ ಮಾಡಿದರು. ಬಳಿಕ ಪ್ರವಾಸಿ ಮಂದಿರದಿಂದ ನಗರದ ಪ್ರಮುಖ ಬೀದಿಗಳ ಮೂಲಕ ಶಿವಪುರ ಧ್ವಜ ಸತ್ಯಾಗ್ರಹ ಸೌಧದವರೆಗೆ ಶಾಸಕರಾದ ಕೆ.ಎಂ.ಉದಯ್, ದಿನೇಶ್ ಗೂಳಿಗೌಡ ಅವರು ಕಾಲ್ನಡಿಗೆ ಜಾಥಾದಲ್ಲಿ ಆಗಮಿಸಿ ಮ್ಯಾರಾಥಾನ್‌ಗೆ ಸಾಥ್ ನೀಡಿದರು. ಸಾವಿರಾರು ಸಂಖ್ಯೆಯಲ್ಲಿ ಭಾಗವಹಿಸಿದ್ದ ಸಾರ್ವಜನಿಕರು, ಶಿಕ್ಷಕರು, ಅಧಿಕಾರಿಗಳು, ವಿವಿಧ ಸಂಘ, ಸಂಸ್ಥೆಗಳ ಪದಾಧಿಕಾರಿಗಳು ಜಾಥಾದಲ್ಲಿ ಉತ್ಸಾಹದಿಂದ ಪಾಲ್ಗೊಂಡಿದ್ದರು.

#### ಮಂಡಕಳ್ಳಿ ವಿಮಾನನಿಲ್ದಾಣ ರನ್‌ವೇ ವಿಸ್ತರಣೆಗೆ ಎದುರಾಗಿರುವ ತೊಡಕು ಬಗೆಹರಿಸಿ

## ಅಧಿಕಾರಿಗಳಿಗೆ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಸೂಚನೆ

**ಸಮಸ್ಯೆ ಬಗೆಹರಿದರೆ ದೊಡ್ಡ ವಿಮಾನಗಳ ಕಾರ್ಯಾಚರಣೆಗೂ ಅನುಕೂಲ**

**ಮೈಸೂರು, ಏ.25:** ಇಲ್ಲಿನ ಮಂಡಕಳ್ಳಿಯಲ್ಲಿರುವ ವಿಮಾನ ನಿಲ್ದಾಣದ ರನ್‌ವೇ ವಿಸ್ತರಣೆಗೆ ಎದುರಾಗಿರುವ ತಾಂತ್ರಿಕ ತೊಡಕುಗಳನ್ನು ಕೂಡಲೇ ಬಗೆಹರಿಸಬೇಕು. ಸಂಬಂಧಿಸಿದ ಇಲಾಖೆಗಳವರು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಸೂಚಿಸಿದರು.

ವಿಮಾನ ನಿಲ್ದಾಣದ ಸಮುದಾಯ ಭವನದಲ್ಲಿ ಶನಿವಾರ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ. ಕೆಐಎಡಿಬಿಯವರು ಜಾಗದ ಸಮಸ್ಯೆ ಪರಿಹರಿಸದಿದ್ದರೆ ವಿಮಾನನಿಲ್ದಾಣ ವಿಸ್ತರಣಾ ಕಾರ್ಯಕ್ಕೆ ಅಡ್ಡಿಯಾಗುತ್ತದೆ. ಸ್ವಾಧೀನಪಡಿಸಿಕೊಂಡ ಭೂಮಿಯಲ್ಲಿರುವ ರಚನೆಗಳು ಹಾಗೂ ಮರಗಳಿಗೆ ಪರಿಹಾರದ ಮೌಲ್ಯಮಾಪನ ಮತ್ತು ವಿತರಣೆಗೆ ಸಂಬಂಧಿಸಿದ ಪ್ರಕ್ರಿಯೆಯನ್ನು ತ್ವರಿತವಾಗಿ ಕೈಗೊಳ್ಳಬೇಕು. ಇದು ಪೂರ್ಣ ಗೊಂಡರೆ, ಮುಂದಿನ ಅಭಿವೃದ್ಧಿ ಕಾರ್ಯಕ್ಕಾಗಿ ಭೂಮಿಯನ್ನು ಭಾರತೀಯ ವಿಮಾನಯಾನ ಪ್ರಾಧಿಕಾರ (ಎಎಐ)ಕ್ಕೆ ಸಾಧ್ಯವಾದಷ್ಟು ಬೇಗ ಹಸ್ತಾಂತರಿಸಬಹುದಾಗಿದೆ ಎಂದರು.

ರನ್‌ವೇ ವಿಸ್ತರಣೆ ಪ್ರಕ್ರಿಯೆಗೆಂದು ಕೈಗೊಳ್ಳಬೇಕಾದ ಕಾಮಗಾರಿಯ ಬಗ್ಗೆ ಎನ್‌ಎಚ್‌ಎಐನಿಂದ ಕರಡು ಡಿಪಿಆರ್ 2025ರ ಡಿ. 15ರಂದು ಸಲ್ಲಿಕೆಯಾಗಿದೆ. 520 ಮೀಟರ್ ಸುರಂಗ (ಭೂಗತ ಬಾಕ್ಸ್ ಸುರಂಗ), ಮೂರು ಕಾಲುವೆ ಬಾಕ್ಸ್ ಸುರಂಗಗಳು ಮತ್ತು ಕೆಪಿಟಿಸಿಎಲ್ ಯುಟಿಲಿಟಿ ಡಕ್ಟ್ ಸೇರಿದಂತೆ 3.5 ಕಿ.ಮೀ. ಮಾರ್ಗ ತಿರುವನ್ನು 612 ಕೋಟಿ ರೂ. (2018ರ ಅಂದಾಜಿಗಿಂತ 102 ಕೋಟಿ ರೂ. ಹೆಚ್ಚಾಗಿದೆ) ಪರಿಷ್ಕೃತ ವೆಚ್ಚದಲ್ಲಿ ಪ್ರಸ್ತಾಪಿಸಲಾಗಿದೆ. 2023ರ ಹಿಂದಿನ ಭೂಸ್ವಾಧೀನ ಸೇರಿದಂತೆ ಹೆಚ್ಚುವರಿ ವೆಚ್ಚವನ್ನು ಎನ್‌ಎಚ್‌ಎಐ ಭರಿಸಬೇಕೆಂದು ಪ್ರಾಧಿಕಾರ ಕೋರಿದೆ. ಇದನ್ನು ನವದೆಹಲಿಯ ಎನ್‌ಎಚ್‌ಎಐ ಹಿರಿಯ ಅಧಿಕಾರಿಗಳ ಗಮನಕ್ಕೆ ತರಲಾಗುವುದು ಎಂದು ತಿಳಿಸಿದರು. ಸುರಕ್ಷತೆ ಕಾರಣದಿಂದ 12 ಸುರಂಗ ಪ್ರವೇಶ/ನಿರ್ಗಮನ ಬಿಂದುಗಳನ್ನು



ನಿರ್ವಹಿಸಲು ತಜ್ಞರ ಸಮಿತಿ ರಚನೆಗೆ ಶಿಫಾರಸು ಮಾಡಲಾಗಿದೆ. ಏ.7ರಂದು ರಾಜ್ಯ ಪೊಲೀಸ್ ಒಪ್ಪಿಗೆಯನ್ನೂ ಕೋರಲಾಗಿದೆ. ಭೂಸ್ವಾಧೀನ, ರಚನೆಗಳು ಮತ್ತು ಮರಗಳಿಗೆ ಪರಿಹಾರ, ವಿದ್ಯುತ್ ಮಾರ್ಗಗಳ ತಿರುವು, ಹೆದ್ದಾರಿ ಮತ್ತು ಕಾಲುವೆ ಸ್ಥಳಾಂತರ ಮೊದಲಾದ ಕೆಲಸ ತ್ವರಿತಗೊಳಿಸಲು ಅಧಿಕಾರಿಗಳು ಕ್ರಮಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದರು.

ರನ್‌ವೇ ವಿಸ್ತರಣೆಗೊಂಡರೆ ಹೆಚ್ಚಿನ ವಿಮಾನಗಳ ಕಾರ್ಯಾಚರಣೆಗೆ ಅವಕಾಶ ಸಿಗಲಿದೆ. ಪ್ರಮುಖ ನಗರಗಳಿಗೆ ಸಂಪರ್ಕ ದೊರೆಯಲಿದೆ. ಈಗಿನ ರನ್‌ವೇ 1,740 ಮೀಟರ್ ಥ 30 ಮೀಟರ್ ಅಳತೆ ಹೊಂದಿದ್ದು, ಎಟಿಆರ್–72 ವಿಮಾನಗಳಿಗೆ ಸೂಕ್ತವಾಗಿದೆ. ಇದನ್ನು 2,300 ಮೀಟರ್ ಥ 45 ಮೀಟರ್‌ಗೆ ವಿಸ್ತರಿಸಿದರೆ ದೊಡ್ಡ ಏರ್‌ಬಸ್ ಎ–320 ಮತ್ತು ಬೋಯಿಂಗ್ 737 ಮಾದರಿಯ ವಿಮಾನಗಳ ಕಾರ್ಯಾಚರಣೆಗಳಿಗೆ ಅವಕಾಶ ದೊರೆಯುತ್ತದೆ. ಇದಕ್ಕೆ 240 ಎಕರೆ ಭೂಮಿ ಬೇಕಾಗುತ್ತದೆ. ಅದರಲ್ಲಿ 206 ಎಕರೆಯನ್ನು ಕೆಐಎಡಿಬಿ ಸ್ವಾಧೀನಪಡಿಸಿಕೊಂಡಿದೆ ಮತ್ತು ಭೂಮಾಲೀಕರಿಗೆ ಪರಿಹಾರವನ್ನು ಸಂಪೂರ್ಣವಾಗಿ ವಿತರಿಸಲಾಗಿದೆ. ಉಳಿದ 34 ಎಕರೆಗಳು ಸರ್ಕಾರಿ ಭೂಮಿಯಾಗಿದೆ. ನಿಲ್ದಾಣದ ಉತ್ತರ ಭಾಗದಲ್ಲಿ 7 ಎಕರೆಯಲ್ಲಿ ರಚಿಸಲಾದ ಕಂದಾಯ ಬಡಾವಣೆಗೆ ಸೇರಿದ ಜಾಗದ ಸಮಸ್ಯೆ ನಿವಾರಿಸಬೇಕಿದೆ ಎಂದು ವಿಮಾನ ನಿಲ್ದಾಣದ ನಿರ್ದೇಶಕಿ ಪಿ.ವಿ. ಉಷಾಕುಮಾರಿ ತಿಳಿಸಿದರು. ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ. ದೇವೇಗೌಡ, ಡಿಸಿಪಿ ಹರ್ಷ ಪ್ರಿಯಂವದ, ವಿಮಾನನಿಲ್ದಾಣ ಸಲಹಾ ಸಮಿತಿ ಸದಸ್ಯರು, ವಿವಿಧ ಇಲಾಖೆಗಳ ಅಧಿಕಾರಿಗಳು ಪಾಲ್ಗೊಂಡಿದ್ದರು.

## ಎಸ್‌ಎಸ್‌ಎಲ್‌ಸಿ ಫಲಿತಾಂಶ: 21ನೇ ಸ್ಥಾನಕ್ಕೆ ರಾಯಚೂರು

**ರಾಯಚೂರು, ಏ. 25:** ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಕಳೆದ ವರ್ಷ 32ನೇ ಸ್ಥಾನಕ್ಕೆ ಕುಸಿದು ಅತ್ಯಂತ ಕಳಪೆ ಸಾಧನೆ ತೋರಿದ್ದ ರಾಯಚೂರು ಜಿಲ್ಲೆ ಈ ಬಾರಿ ರಾಜ್ಯದ ಜಿಲ್ಲೆಗಳ ಸಾಲಿನಲ್ಲಿ 21ನೇ ಸ್ಥಾನದಲ್ಲಿ ಗುರುತಿಸಿಕೊಂಡು ಪ್ರಗತಿ ಸಾಧಿಸಿದೆ. ಪರಿಶ್ರಮಪಟ್ಟರೆ ಸಾಧನೆ ಸಾಧ್ಯ ಎನ್ನುವುದನ್ನು ನಿರೂಪಿಸಿದೆ. ಮಾನ್ವಿಯ ವಿದ್ಯಾರ್ಥಿ ಸುಖದೇವ ಕಟ್ಟಿಮನಿ ರಾಜ್ಯಕ್ಕೆ ಮೊದಲ ಸ್ಥಾನ ಪಡೆದು ಜಿಲ್ಲೆಯ ಗೌರವ ಹೆಚ್ಚಿಸಿದ್ದಾರೆ.

ರಾಯಚೂರು ಜಿಲ್ಲೆ ಶೇಕಡ



42.36ರಷ್ಟು ಪ್ರಗತಿ ಸಾಧಿಸಿದೆ. ಎಸ್‌ಎಸ್‌ಎಲ್‌ಸಿ ಪರೀಕ್ಷೆ 1, 2, 3ರಲ್ಲೂ ಶೇಕಡ 75ರಷ್ಟು ಸುಧಾರಣೆ ಕಂಡು ಬಂದಿದೆ. ಪರೀಕ್ಷೆಗೆ 27,757 ವಿದ್ಯಾರ್ಥಿಗಳು ಹಾಜರಾಗಿದ್ದರು. ಇದರಲ್ಲಿ 26,205 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಶೇಕಡ 94.41ರಷ್ಟು ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದಾರೆ' ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪ ನಿರ್ದೇಶಕ ಕೆ.ಡಿಬಡಿಗೇರ ತಿಳಿಸಿದ್ದಾರೆ.

ಕಲಬುರಗಿ ವಿಭಾಗದ ಏಳು ಜಿಲ್ಲೆಗಳಲ್ಲಿ ವಿಜಯನಗರ ಜಿಲ್ಲೆ ಶೇಕಡ 96.39ರಷ್ಟು ಫಲಿತಾಂಶ ಪಡೆದು ಮೊದಲ ಸ್ಥಾನದಲ್ಲಿದ್ದರೆ, ಶೇಕಡ 94.41 ರಷ್ಟು ಫಲಿತಾಂಶ ಪಡೆದ ರಾಯಚೂರು ಜಿಲ್ಲೆ ಎರಡನೇ ಸ್ಥಾನದಲ್ಲಿದೆ. 93.35 ರಷ್ಟು ಫಲಿತಾಂಶ ಪಡೆದ ಬಳ್ಳಾರಿ ಜಿಲ್ಲೆ ಮೂರನೇ ಸ್ಥಾನದಲ್ಲಿ ಗುರುತಿಸಿಕೊಂಡಿದೆ.

## ಹೆಚ್ಚುತ್ತಿರುವ ಬಿಸಿಗಾಳಿಯ ಪ್ರತಾಪ: ರಿಮ್ಸ್ ಆಸ್ಪತ್ರೆಯಲ್ಲಿ ಪ್ರತ್ಯೇಕ ಹೈಟೆಕ್ ಸನ್‌ಸ್ಟ್ರೋಕ್ ವಾರ್ಡ್

**ರಾಯಚೂರು, ಏ. 25:** ಬಿಸಿಲುನಾಡು ಎಂದೇ ಹೆಸರಾಗಿರುವ ರಾಯಚೂರು ಜಿಲ್ಲೆಯಲ್ಲಿ ಸೂರ್ಯನ ಪ್ರತಾಪ ದಿನೇದಿನೇ ಮಿತಿಮೀರುತ್ತಿದೆ. ತಾಪಮಾನ 42 ರಿಂದ 44ರ ಡಿಗ್ರಿ ದಾಟುತ್ತಿರುವುದರ ನಡುವೆಯೇ ಈಗ ಬಿಸಿಗಾಳಿ ಅಂದರೆ ಹೀಟ್ ವೇವ್ ಜನರ ಜೀವಕ್ಕೆ ಆಪತ್ತನ್ನು ತಂದೊಡ್ಡುತ್ತಿದೆ.

ಪ್ರತಿ ವರ್ಷ ರಾಯಚೂರಿನಲ್ಲಿ ತಾಪಮಾನ ಹೆಚ್ಚಾಗಿ, ಜನರನ್ನು ಕುಗ್ಗಿಸುತ್ತಿದೆ. ಪ್ರತಿ ಏಪ್ರಿಲ್, ಮೇ ತಿಂಗಳಲ್ಲಿ ರಾಯಚೂರಿನ ಜನ ಅಕ್ಷರಶಃ ಬಿಸಿಲಬೇಗೆಗೆ ನಲುಗಿ ಹೋಗುತ್ತಾರೆ. ಅದೇ ರೀತಿ ಈ ಬಾರಿಯೂ ಜಿಲ್ಲೆಯಲ್ಲಿ ತಾಪಮಾನ 44 ಡಿಗ್ರಿ ದಾಖಲಾಗುತ್ತಿದೆ. ಆದರೆ ಈ ಬಾರೀ ಅತಿಹೆಚ್ಚು ಬಿಸಿಗಾಳಿ ಕೂಡ ಅಬ್ಬರಿಸುತ್ತಿದೆ. ಇದು ತಾಪಮಾನದ ಹೊಡೆತಕ್ಕಿಂತ ಹೆಚ್ಚು ಭಯಾನಕವಾಗಿದೆ. ಇದೇ ಕಾರಣಕ್ಕೆ ಜಿಲ್ಲಾಡಳಿತ ಮತ್ತು ಆರೋಗ್ಯ ಇಲಾಖೆ ಹೈ ಅಲರ್ಟ್ ಘೋಷಿಸಿದ್ದು, ಸಾರ್ವಜನಿಕರು ಎಚ್ಚರದಿಂದಿರಲು ಸೂಚಿಸಿದೆ.

# ಬಂದರು ದಿಗ್ಬಂಧನ ಮುಂದುವರಿದರೆ ಅಮೆರಿಕಕ್ಕೆ ದಿಟ್ಟ ಪ್ರತಿಕ್ರಿಯೆ ನೀಡಲು ಸಿದ್ಧ: ಇರಾನ್ ಎಚ್ಚರಿಕೆ

**ಟೆಹ್ರಾನ್, ಏ.25:** ಇರಾನ್ ಬಂದರುಗಳ ಮೇಲಿನ ದಿಗ್ಬಂಧನ ಮುಂದುವರಿದರೆ ಪ್ರತಿಕ್ರಿಯಿಸಲು ತಾನು "ಸಿದ್ಧ ಮತ್ತು ದೃಢನಿಶ್ಚಯ" ಹೊಂದಿದ್ದೇನೆ ಎಂದು ಇರಾನ್ ಸೇನೆ ಶನಿವಾರ ಅಮೆರಿಕಕ್ಕೆ ಎಚ್ಚರಿಕೆ ನೀಡಿದೆ ಎಂದು ತಸ್ನಿಮ್ ಸುದ್ದಿ ಸಂಸ್ಥೆ ತಿಳಿಸಿದೆ. ಹಜರತ್ ಖತಮ್ ಅಲ್–ಅನ್ಬಿಯಾ ಕೇಂದ್ರ ಪ್ರಧಾನ ಕಚೇರಿಯು, ದೇಶದ ಸಾರ್ವಭೌಮತ್ವ, ಪ್ರದೇಶ ಮತ್ತು ರಾಷ್ಟ್ರೀಯ ಹಿತಾಸಕ್ತಿಗಳನ್ನು ರಕ್ಷಿಸಲು ಇರಾನ್ನ ಸಶಸ್ತ್ರ ಪಡೆಗಳು ಈಗ "ಮೊದಲಿಗಿಂತ ಹೆಚ್ಚಿನ ಶಕ್ತಿ ಮತ್ತು ಸಿದ್ಧತೆಯನ್ನು" ಹೊಂದಿವೆ ಎಂದು ಹೇಳಿದೆ, "ಮೂರನೇ ಹೇರಿದ ಯುದ್ಧ"ದ ಸಮಯದಲ್ಲಿ ಅದು ಪ್ರದರ್ಶಿಸಿದ ಸಾಮರ್ಥ್ಯಗಳು ಎಂದು ಅದು ವಿವರಿಸಿದೆ. ಇರಾನ್ ಸೇನೆಯು ಅಮೆರಿಕದ ಕೃತ್ಯವನ್ನು ಈ ಪ್ರದೇಶದಲ್ಲಿ "ದಿಗ್ಬಂಧನ, ಡಕಾಯಿತ ಮತ್ತು ಕಡಲ್ಗಳ್ಳತನ" ಎಂದು ಬಣ್ಣಿಸಿದೆ. ಅಂತಹ ಕ್ರಮಗಳು ಮುಂದುವರಿದರೆ ಯುಎಸ್ ಪಡೆಗಳು "ಇರಾನ್‌ನ ಪ್ರಬಲ ಸಶಸ್ತ್ರ ಪಡೆಗಳಿಂದ ಪ್ರತಿಕ್ರಿಯೆಯನ್ನು" ಎದುರಿಸುತ್ತವೆ ಎಂದು ಕಮಾಂಡ್ ಒಂದು ಹೇಳಿಕೆಯಲ್ಲಿ ತಿಳಿಸಿದೆ. ಇರಾನ್ ಪ್ರಾದೇಶಿಕ ಬೆಳವಣಿಗೆಗಳನ್ನು ಸೂಕ್ಷ್ಮವಾಗಿ ಗಮನಿಸುತ್ತಿದೆ ಮತ್ತು ಆಯಕಟ್ಟಿನ ಹಾರ್ಮುಜ್ ಜಲಸಂಧಿಯ ಮೇಲೆ ನಿಯಂತ್ರಣವನ್ನು ಕಾಯ್ದುಕೊಳ್ಳುತ್ತಿದೆ




ಎಂದು ಹೇಳಿಕೆಯಲ್ಲಿ ಸೇರಿಸಲಾಗಿದೆ. ಮತ್ತಷ್ಟು ಆಕ್ರಮಣದ ಸಂದರ್ಭದಲ್ಲಿ, ಇರಾನ್ ಪಡೆಗಳು "ಅಮೆರಿಕನ್–ಜಿಯೋನಿಸ್ಟ್ ಶತ್ರುಗಳು" ಎಂದು ಕರೆದ ಮೇಲೆ "ಇನ್ನೂ ಹೆಚ್ಚಿನ ಹಾನಿಯನ್ನು" ಉಂಟುಮಾಡಲು ಸಿದ್ಧವಾಗಿವೆ ಎಂದು ಅದು ಎಚ್ಚರಿಸಿದೆ. ಇರಾನ್ ಬಂದರಿಗೆ ಹೋಗುತ್ತಿದ್ದ ಇರಾನ್ ಧ್ವಜ ಹೊಂದಿರುವ ಹಡಗಿನ ಮೇಲೆ ಮಾರ್ಗದರ್ಶಿ ಕ್ಷಿಪಣಿ ವಿಧ್ವಂಸಕ ನೌಕೆ ದಿಗ್ಬಂಧನ ಹೇರಿದೆ ಎಂದು ಯುಎಸ್ ಸೆಂಟ್ರಲ್ ಕಮಾಂಡ್ ಹೇಳಿದ ನಂತರ ಅಮೆರಿಕಕ್ಕೆ ಈ ಎಚ್ಚರಿಕೆ ಬಂದಿದೆ. ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆದೇಶಿಸಿದ ಕ್ರಮಗಳ ಭಾಗವಾಗಿ ಇರಾನ್ ಬಂದರುಗಳನ್ನು ಪ್ರವೇಶಿಸುವ ಅಥವಾ ಹೊರಡುವ ಹಡಗುಗಳ ಮೇಲೆ ದಿಗ್ಬಂಧನ ಹೇರಲಾಗುತ್ತಿದೆ ಎಂದು ಅಮೆರಿಕ ಮಿಲಿಟರಿ ಹೇಳಿದೆ.

ಪ್ರತ್ಯೇಕವಾಗಿ, TankerTrackers.com ಒಳಗೊಂಡಿರುವ ಹಡಗು ಇರಾನಿನ ಟ್ಯಾಂಕರ್ ಹರ್ಬಿ ಎಂದು ತೋರುತ್ತಿದೆ, ಇದು ಸುಮಾರು 2 ಮಿಲಿಯನ್ ಬ್ಯಾರೆಲ್ ಕಚ್ಚಾ ತೈಲವನ್ನು ವರ್ಗಾಯಿಸಿತ್ತು ಮತ್ತು ದಿಗ್ಬಂಧನದಿಂದಾಗಿ ಇರಾನ್‌ಗೆ ಹಿಂತಿರುಗಲು ವಿಳಂಬವಾಯಿತು ಎಂದು ಹೇಳಿದೆ.

ವಾಷಿಂಗ್ಟನ್ನ ಕಡಲ ನಿರ್ಬಂಧಗಳನ್ನು ಜಾರಿಗೊಳಿಸುವ ನಡುವೆ ಯುಎಸ್ ನೌಕಾಪಡೆಯ ವಿಧ್ವಂಸಕವು ಇರಾನ್ ಧ್ವಜ ಹೊಂದಿರುವ ಹಡಗನ್ನು ತಡೆದಿದೆ ಎಂದು ಯುನೈಟೆಡ್ ಸ್ಟೇಟ್ಸ್ ಸೆಂಟ್ರಲ್ ಕಮಾಂಡ್ ಹೇಳಿದೆ. ಎಕ್ಸ್ ನಲ್ಲಿ ಪೋಸ್ಟ್ ಮಾಡಿದ ಹೇಳಿಕೆಯಲ್ಲಿ, ಮಾರ್ಗದರ್ಶಿ ಕ್ಷಿಪಣಿ ವಿಧ್ವಂಸಕ ಗಖಖ ರಾಫೆಲ್ ಪೆರಾಲ್ಟಾ (DDG 115) ಏಪ್ರಿಲ್ 24 ರಂದು ಇರಾನ್ನ ಬಂದರಿನ ಕಡೆಗೆ ಸಾಗಲು ಪ್ರಯತ್ನಿಸುತ್ತಿದ್ದ ಇರಾನ್ ಧ್ವಜವನ್ನು ಹಾರಿಸುವ ಹಡಗನ್ನು ತಡೆಯಲು ಅಇಓಖಿಅಔಓ ಕಾರ್ಯನಿರ್ವಹಿಸಿದೆ ಎಂದು ದೃಢಪಡಿಸಿದೆ. ಏತನ್ಮಧ್ಯೆ, ಇರಾನ್ ಅಧ್ಯಕ್ಷ ಮಸೌದ್ ಪೆಜೆಶ್ಕಿಯನ್ ಅವರು ಯುಎಸ್ ನಮ್ಮ ಮೂಲಸೌಕರ್ಯದ ಮೇಲೆ ದಾಳಿ ಮಾಡುತ್ತಿದೆ ಮತ್ತು ಜನರು ಅತೃಪ್ತರಾಗಲು ನಮ್ಮನ್ನು ಮುತ್ತಿಗೆ ಹಾಕುತ್ತಿದೆ ಎಂದು ಹೇಳಿದರು. "ಶತ್ರು ನಮ್ಮ ಮೂಲಸೌಕರ್ಯದ ಮೇಲೆ ದಾಳಿ ಮಾಡಿ ನಮ್ಮನ್ನು ಮುತ್ತಿಗೆ ಹಾಕುತ್ತಿದ್ದಾರೆ, ಇದರಿಂದ ಜನರು ಅತೃಪ್ತರಾಗುತ್ತಾರೆ. ಪ್ರಸ್ತುತ ನಮಗೆ ಜನರ ತ್ಯಾಗ ಅಗತ್ಯವಿಲ್ಲ, ಆದರೆ ಜನರು ವಿದ್ಯುತ್ ಮತ್ತು ಇಂಧನ ಬಳಕೆಯನ್ನು ಕಡಿಮೆ ಮಾಡಬೇಕೆಂದು ನಾವು ವಿನಂತಿಸುತ್ತೇವೆ" ಎಂದು ಅವರು ಹೇಳಿದರು.

# ಇಸ್ಲಾಮಾಬಾದ್‌ನಲ್ಲಿ ಅಸಿಮ್ ಮುನೀರ್ ಭೇಟಿಯಾದ ಇರಾನ್ ವಿದೇಶಾಂಗ ಸಚಿವ



**ಇಸ್ಲಾಮಾಬಾದ್, ಏ.25:** ಇರಾನ್‌ನ ವಿದೇಶಾಂಗ ಸಚಿವ ಅಬ್ಬಾಸ್ ಅರಘ್ಚಿ ಶನಿವಾರ ಇಸ್ಲಾಮಾಬಾದ್‌ನಲ್ಲಿ ಪಾಕಿಸ್ತಾನದ ಸೇನಾ ಮುಖ್ಯಸ್ಥ ಅಸಿಮ್ ಮುನೀರ್ ಅವರನ್ನು ಭೇಟಿಯಾದರು, ಮಹತ್ವದ ರಾಜತಾಂತ್ರಿಕ ಮಹತ್ವವನ್ನು ಹೊಂದಿರುವ ಬೆಳವಣಿಗೆಯಲ್ಲಿ, ಸಂಘರ್ಷವನ್ನು ಕೊನೆಗೊಳಿಸುವ ಬಗ್ಗೆ ಇರಾನ್‌ನ "ಅಭಿಪ್ರಾಯಗಳು ಮತ್ತು ಪರಿಗಣನೆಗಳನ್ನು" ಮಾತುಕತೆಯ ಸಮಯದಲ್ಲಿ ಹಂಚಿಕೊಳ್ಳಲಾಗಿದೆ ಎಂದು ಅವರು ಹೇಳಿದರು. ಈ ಸಭೆಯಲ್ಲಿ ಅಮೆರಿಕ ಸಂಯುಕ್ತ ಸಂಸ್ಥಾನದೊಂದಿಗಿನ ಸಂಭಾವ್ಯ ಒಪ್ಪಂದಕ್ಕೆ ಸಂಬಂಧಿಸಿದ ಸಮಗ್ರ ಪ್ರಸ್ತಾವನೆ ಸೇರಿದೆ ಎಂದು ನಂಬಲಾಗಿದೆ, ಮುನೀರ್ ಈ ಸಂದೇಶವನ್ನು ವಾಷಿಂಗ್ಟನ್‌ಗೆ ರವಾನಿಸುವ ನಿರೀಕ್ಷೆಯಿದೆ, ಆದರೆ ಇಸ್ಲಾಮಾಬಾದ್ ಟೆಹ್ರಾನ್ ಮತ್ತು ಯುಎಸ್ ನಡುವೆ ಮಧ್ಯಸ್ಥಿಕೆ ವಹಿಸುವುದನ್ನು ಮುಂದುವರಿಸಲು ತನ್ನ ಸಿದ್ಧತೆಯನ್ನು ಸೂಚಿಸಿದೆ. ಸಭೆಯ ನಂತರ, ಅರಘ್ಚಿ ಇರಾನ್ ಮತ್ತು ಯುಎಸ್ ನಡುವಿನ "ಕದನ ವಿರಾಮಕ್ಕೆ ಸಂಬಂಧಿಸಿದ ಇತ್ತೀಚಿನ ಬೆಳವಣಿಗೆಗಳ" ಮೇಲೆ ಚರ್ಚೆಗಳು ಕೇಂದ್ರೀಕೃತವಾಗಿವೆ ಎಂದು ದೃಢಪಡಿಸುವ ಹೇಳಿಕೆಯನ್ನು ಬಿಡುಗಡೆ ಮಾಡಿದರು. ಹೇಳಿಕೆಯ ಪ್ರಕಾರ, ಜನರಲ್ ಮುನೀರ್ ಪಾಕಿಸ್ತಾನವು ತನ್ನ ಮಧ್ಯಸ್ಥಿಕೆ ಪ್ರಯತ್ನಗಳನ್ನು ಮುಂದುವರಿಸುವ ಇಚ್ಛೆಯನ್ನು ಪುನರುಚ್ಚರಿಸಿದರು, ಇದು ಟೆಹ್ರಾನ್ ಮತ್ತು ವಾಷಿಂಗ್ಟನ್ ನಡುವಿನ ಉದ್ವಿಗ್ನತೆಯನ್ನು ಕಡಿಮೆ ಮಾಡುವಲ್ಲಿ ರಾಜತಾಂತ್ರಿಕ ಸೇತುವೆಯಾಗಿ ಇಸ್ಲಾಮಾಬಾದ್ನ ಸಂಭಾವ್ಯ ಪಾತ್ರವನ್ನು ಸೂಚಿಸುತ್ತದೆ. ಅಮೆರಿಕದ ರಾಯಭಾರಿಗಳಾದ ಸ್ಟೀವ್ ವಿಟ್ಕಾಫ್ ಮತ್ತು ಜೇರೆಡ್ ಕುಶ್ನರ್ ಅವರು ಪಾಕಿಸ್ತಾನಕ್ಕೆ ಮಾತುಕತೆಗಾಗಿ ಪ್ರಯಾಣಿಸಲಿದ್ದಾರೆ ಎಂದು ಶ್ವೇತಭವನ ಈ ಹಿಂದೆ ಸೂಚಿಸಿತ್ತು, ಆದರೆ ಅವರ ನಿರ್ಗಮನದ ಬಗ್ಗೆ ಯಾವುದೇ ದೃಢೀಕರಣವಿಲ್ಲ. ಇತ್ತೀಚಿನ ಪ್ರಾದೇಶಿಕ ಬೆಳವಣಿಗೆಗಳ ಬಗ್ಗೆ ಚರ್ಚಿಸಲು ಪಾಕಿಸ್ತಾನದ ವಿದೇಶಾಂಗ ಸಚಿವಾಲಯವು ಇರಾನ್ ವಿದೇಶಾಂಗ ಸಚಿವರೊಂದಿಗೆ ಸಭೆ ನಡೆಸಿತು.

# ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹುಗೆ ಕ್ಯಾನ್ಸರ್

**ನವದೆಹಲಿ, ಏ. 25:** 18 ತಿಂಗಳ ಹಿಂದೆ ಆರಂಭಿಕ ಹಂತದ ಪ್ರಾಸ್ಟೇಟ್ ಕ್ಯಾನ್ಸರ್ ಇರುವುದು ಪತ್ತೆಯಾಗಿತ್ತು. ಇರಾನ್ ಅದನ್ನು ಪ್ರಚಾರವಾಗಿ ಬಳಸದಂತೆ ತಡೆಯಲು ಅವರು ಸಾರ್ವಜನಿಕರಿಗೆ ಸುದ್ದಿಯನ್ನು ಬಹಿರಂಗಪಡಿಸುವುದನ್ನು ವಿಳಂಬ ಮಾಡಿದ್ದಾರೆ ಎಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಹೇಳಿದ್ದಾರೆ.

ಎರಡೂವರೆ ತಿಂಗಳ ಹಿಂದೆ, ಅವರ ವೈದ್ಯರು ಜೆರುಸಲೆಮ್ನ ಹಡಸ್ಸಾ ಆಸ್ಪತ್ರೆಯಲ್ಲಿ ವಿಕಿರಣ ಚಿಕಿತ್ಸೆಯೊಂದಿಗೆ ಸಣ್ಣ ಗೆಡ್ಡೆಯನ್ನು ಕಂಡುಹಿಡಿದು ಚಿಕಿತ್ಸೆ ನೀಡಿದ್ದಾರೆ. ಚಿಕಿತ್ಸೆಯಿಂದ ಸಮಸ್ಯೆಯನ್ನು ತೆಗೆದುಹಾಕಲಾಗಿದೆ, ಈಗ ಯಾವುದೇ ಕುರುಹು ಇಲ್ಲ ಎಂದು 76 ವರ್ಷ ವಯಸ್ಸಿನವರು ನಲ್ಲಿ ಪೋಸ್ಟ್ ಮಾಡಿದ್ದಾರೆ.

ಈ ಪರೀಕ್ಷೆಗಳ ಸಂಶೋಧನೆಗಳ ಆಧಾರದ ಮೇಲೆ ರೋಗವು ಕಣ್ಮರೆಯಾಗಿದೆ ಎಂದು ನಾವು ಹೇಳಬಹುದು ಎಂದು ಹಡಸ್ಸಾ ಆಸ್ಪತ್ರೆಯ



ಆಂಕೊಲಾಜಿ ಘಟಕದ ನಿರ್ದೇಶಕ ಅಹರಾನ್ ಪೊಪೊವ್ಟ್ಸರ್ ಹೇಳಿದರು. ಯುದ್ಧದ ಉತ್ತುಂಗದಲ್ಲಿ ಇರಾನಿನ ಭಯೋತ್ಪಾದಕ ಆಡಳಿತವು ಇಸ್ರೇಲ್ ವಿರುದ್ಧ ಇನ್ನಷ್ಟು ಸುಳ್ಳು ಪ್ರಚಾರವನ್ನು ಹರಡಲು ಅವಕಾಶ ನೀಡದಿರಲು, ಅದರ ಪ್ರಕಟಣೆಯನ್ನು ಎರಡು ತಿಂಗಳು ವಿಳಂಬಗೊಳಿಸಲು ನಾನು ವಿನಂತಿಸಿದೆ ಎಂದು ನೆತನ್ಯಾಹು ಪೋಸ್ಟ್‌ನಲ್ಲಿ ಬರೆದಿದ್ದಾರೆ.


ಇರಾನ್ನೊಂದಿಗಿನ ಯುದ್ಧದ ಆರಂಭಿಕ ವಾರಗಳಲ್ಲಿ, ನೆತನ್ಯಾಹು ಅವರ ನಕಲಿ, ಎಐ–ರಚಿತವಾದ ಚಿತ್ರಗಳು ಪ್ರಸಾರವಾಗುತ್ತಿದ್ದವು, ಇದು ಅವರು ನಿಧನರಾಗಿದ್ದಾರೆ ಎಂದು ಸೂಚಿಸುತ್ತಿತ್ತು.

ಆದಾಗ್ಯೂ, ಇಸ್ರೇಲಿ ನಾಯಕ ಮಾರ್ಚ್ನಲ್ಲಿ ಜೆರುಸಲೆಮ್ ಕೆಫೆಗೆ ಭೇಟಿ ನೀಡಿದ ವೀಡಿಯೊವನ್ನು ರೆಕಾರ್ಡ್ ಮಾಡಿದ್ದಾರೆ.

ಇಸ್ರೇಲ್‌ನ ದೀರ್ಘಕಾಲ ಸೇವೆ ಸಲ್ಲಿಸಿದ ಪ್ರಧಾನಿ ತಮ್ಮ ಆರೋಗ್ಯದ ಬಗ್ಗೆ ಮಾಹಿತಿಯನ್ನು ಬಹಿರಂಗಪಡಿಸದಿದ್ದಕ್ಕಾಗಿ ಹಿಂದೆ ಟೀಕೆಗಳನ್ನು ಎದುರಿಸಿದ್ದಾರೆ, ಇದರಲ್ಲಿ ಅವರು ಸಾರ್ವಜನಿಕವಾಗಿ ಕಾಣಿಸಿಕೊಂಡಾಗ ಮೂರ್ಛೆ ಹೋದ ಒಂದು ವಾರದ ನಂತರ ದೀರ್ಘಕಾಲದ ಹೃದಯ ಸ್ಥಿತಿಯನ್ನು ಪರಿಹರಿಸಲು ಪೇಸ್ಮೇಕರ್ ಅಳವಡಿಸಲಾಗಿದೆ ಎಂದು ಸಾರ್ವಜನಿಕರಿಗೆ ಹೇಳಲಾಗಿತ್ತು.

# ಇರಾನ್ ಅಂತಾರಾಷ್ಟ್ರೀಯ ವಿಮಾನ ಪ್ರಯಾಣ ಪುನರಾರಂಭ

**ಟೆಹ್ರಾನ್,ಏ.25:** ಇರಾನ್ ಮೇಲೆ ಅಮೆರಿಕದ ದಾಳಿಯಿಂದ ಉಂಟಾದ ವಾಯುಪ್ರದೇಶದ ಅಡಚಣೆಯ ನಂತರ, ಫೆಬ್ರವರಿ 28 ರ ನಂತರ ಮೊದಲ ಬಾರಿಗೆ ಅಂತರರಾಷ್ಟ್ರೀಯ ವಾಣಿಜ್ಯ ವಿಮಾನಗಳನ್ನು ಪುನರಾರಂಭಿಸುವ ಮೂಲಕ ಸಾಮಾನ್ಯ ವಾಯು ಸಂಪರ್ಕವನ್ನು ಪುನಃಸ್ಥಾಪಿಸುವತ್ತ ಇರಾನ್ ಒಂದು ಪ್ರಮುಖ ಹೆಜ್ಜೆ ಇಟ್ಟಿದೆ. ಇರಾನ್ ನಾಗರಿಕ ವಿಮಾನಯಾನ ಸಂಸ್ಥೆ ಶನಿವಾರ ದೃಢಪಡಿಸಿದ್ದು, ಮದೀನಾ ಮತ್ತು ಇಸ್ತಾನ್ಬುಲ್ ಸೇರಿದಂತೆ ಪ್ರಮುಖ ತಾಣಗಳಿಗೆ ವಿಮಾನಗಳು ಈಗ ಪುನರಾರಂಭಗೊಂಡಿವೆ, ಫೆಬ್ರವರಿ 28 ರಂದು ಇರಾನ್ ಪ್ರದೇಶದ



ಮೇಲೆ ಮಿಲಿಟರಿ ದಾಳಿಯ ನಂತರ ವಾಯು ಸಂಚಾರ ತೀವ್ರವಾಗಿ ಪರಿಣಾಮ ಬೀರಿದ ನಂತರ ದೇಶದ ಮೊದಲ ಅಂತರರಾಷ್ಟ್ರೀಯ ಕಾರ್ಯಾಚರಣೆಯಾಗಿದೆ. ಇರಾನ್‌ನ ವಾಯುಯಾನ ಜಾಲದ ಹಂತ ಹಂತದ ಚೇತರಿಕೆಯ ಭಾಗವಾಗಿ ಬಾಗ್ದಾದ್, ಬಾಕು, ದೋಹಾ, ಮಸ್ಕತ್ ಮತ್ತು ನಜಾಫ್ಗೆ ಹೊಸ ಮಾರ್ಗಗಳನ್ನು ಮುಂಬರುವ ದಿನಗಳಲ್ಲಿ ಪ್ರಾರಂಭಿಸುವ ನಿರೀಕ್ಷೆಯಿರುವ ವಿಶಾಲ ವಿಸ್ತರಣಾ ಯೋಜನೆಯನ್ನು ಅಧಿಕಾರಿಗಳು ಘೋಷಿಸಿದರು. ಸಾರಿಗೆ ಸಾಮರ್ಥ್ಯವನ್ನು ಪುನರ್ನಿರ್ಮಿಸಲು ಮತ್ತು ವಿದೇಶಿ ವಾಹಕಗಳನ್ನು ತನ್ನ ವಾಯುಪ್ರದೇಶಕ್ಕೆ ಮರಳಿ ಆಕರ್ಷಿಸಲು ಇರಾನ್ ಕೆಲಸ ಮಾಡುತ್ತಿರುವುದರಿಂದ ಪೂರ್ವ ವಾಯು ಕಾರಿಡಾರ್ಗಳು ಮತ್ತು ಮಶಾದ್, ಜಹೇದನ್, ಕೆರ್ಮನ್, ಯಾಜ್ದ್ ಮತ್ತು ಬಿರ್ಜಾಂಡ್ ಸೇರಿದಂತೆ ಪ್ರಾದೇಶಿಕ ಕೇಂದ್ರಗಳಿಗೆ ಆದ್ಯತೆ ನೀಡಲಾಗುತ್ತಿದೆ ಎಂದು ವಾಯುಯಾನ ಅಧಿಕಾರಿಗಳು ತಿಳಿಸಿದ್ದಾರೆ. ವಿಮಾನಯಾನ ಪುನಃ ತೆರೆಯಲ್ಪಟ್ಟಿದ್ದರೂ, ಯುರೋಪ್ ಮತ್ತು ಮಧ್ಯಪ್ರಾಚ್ಯದ ಕೆಲವು ಭಾಗಗಳಲ್ಲಿ ಅಡ್ಡಿಪಡಿಸಿದ ಮಾರ್ಗಗಳು, ಹೆಚ್ಚುತ್ತಿರುವ ಇಂಧನ ವೆಚ್ಚಗಳು ಮತ್ತು ಜೆಟ್ ಇಂಧನ ಪೂರೈಕೆ ನಿರ್ಬಂಧಗಳ ಕುರಿತು ನಡೆಯುತ್ತಿರುವ ಕಳವಳಗಳು ಸೇರಿದಂತೆ ಇತ್ತೀಚಿನ ಸಂಘರ್ಷದ ಪರಿಣಾಮವನ್ನು ವಾಯುಯಾನ ವಲಯವು ಅನುಭವಿಸುತ್ತಲೇ ಇದೆ

# 1968ರ ಒಲಿಂಪಿಕ್ ಕಂಚಿನ ಪದಕ ವಿಜೇತ

## ಗುರುಬಕ್ಷ ಸಿಂಗ್ ಗ್ರೆವಾಲ್ ನಿಧನ: ಹಾಕಿ ಇಂಡಿಯಾ ಶೋಕ

**ನವದೆಹಲಿ, ಏ.25:** 1968ರ ಮೆಕ್ಸಿಕೊ ಸಿಟಿ ಒಲಿಂಪಿಕ್ಸ್ನಲ್ಲಿ ಕಂಚಿನ ಪದಕ ಗೆದ್ದ ತಂಡದ ಸದಸ್ಯರಾಗಿದ್ದ ಭಾರತದ ಮಾಜಿ ಆಟಗಾರ ಗುರುಬಕ್ಷ ಸಿಂಗ್ ಗ್ರೆವಾಲ್ ಅವರ ನಿಧನಕ್ಕೆ ಹಾಕಿ ಇಂಡಿಯಾ ಸಂತಾಪ ಸೂಚಿಸಿದೆ. ಗ್ರೆವಾಲ್ ಹೃದಯಾಘಾತದಿಂದ ಚಂಡೀಗಢ ಬಳಿಯ ಜಿರಾಕ್ಪುರದಲ್ಲಿರುವ ತಮ್ಮ ನಿವಾಸದಲ್ಲಿ ಕೊನೆಯುಸಿರೆಳೆದರು. ಅವರಿಗೆ 84 ವರ್ಷ. ಏಪ್ರಿಲ್ 1, 1942 ರಂದು ಅವಿಭಜಿತ ಭಾರತದ ಲಿಯಾಲ್ಪುರದಲ್ಲಿ (ಈಗ ಪಾಕಿಸ್ತಾನದ ಫೈಸಲಾಬಾದ್) ಜನಿಸಿದ ಗ್ರೆವಾಲ್ ವೇಗದ ಮತ್ತು ಕೌಶಲ್ಯಪೂರ್ಣ ಫಾರ್ವರ್ಡ್ ಆಗಿದ್ದರು. ಅವರು 1968 ರ ಒಲಿಂಪಿಕ್ಸ್‌ನಲ್ಲಿ ಭಾರತವನ್ನು ಪ್ರತಿನಿಧಿಸಿದರು, ಅಲ್ಲಿ ತಂಡವು ಕಂಚಿನ ಪದಕವನ್ನು ಗೆದ್ದಿತು. ಗುರುಬಕ್ಷ ಅದೇ ಒಲಿಂಪಿಕ್ಸ್‌ನಲ್ಲಿ ತನ್ನ ಸಹೋದರ ಬಲ್ಬೀರ್ ಸಿಂಗ್ ಗ್ರೆವಾಲ್ ಅವರೊಂದಿಗೆ ಕಾಣಿಸಿಕೊಂಡಿದ್ದು ಇನ್ನಷ್ಟು ವಿಶೇಷವಾಗಿದೆ – ಭಾರತೀಯ ಹಾಕಿ ಇತಿಹಾಸದಲ್ಲಿ ಅಪರೂಪದ ಕ್ಷಣ, ಕ್ರೀಡಾಕೂಟದಲ್ಲಿ ಭಾರತವನ್ನು ಒಟ್ಟಿಗೆ ಪ್ರತಿನಿಧಿಸಿದ



ಮೊದಲ ಒಡಹುಟ್ಟಿದವರು. ನಂತರ, ಗುರುಬಕ್ಷ ತಮ್ಮ ಹಾಕಿ ವೃತ್ತಿಜೀವನವನ್ನು ಮುಂದುವರಿಸಲು ತಮ್ಮ 20 ರ ದಶಕದ ಆರಂಭದಲ್ಲಿ ಮುಂಬೈಗೆ ತೆರಳಿದರು ಮತ್ತು ಪಶ್ಚಿಮ ರೈಲ್ವೆಯನ್ನು ಪ್ರತಿನಿಧಿಸಿದರು. ಗ್ರೆವಾಲ್ ಅವರ ಅಂತ್ಯಕ್ರಿಯೆಯನ್ನು ಶನಿವಾರ ಜಿರಾಕ್ಪುರದಲ್ಲಿ ನಡೆಸಲಾಯಿತು. "ಗುರುಬಕ್ಷ ಸಿಂಗ್ ಗ್ರೆವಾಲ್ ಅವರ ನಿಧನದಿಂದ ಭಾರತೀಯ ಹಾಕಿ ಸಮುದಾಯ ತೀವ್ರ ದುಃಖಿತವಾಗಿದೆ. ಅವರು ಭಾರತದ ಒಲಿಂಪಿಕ್ ಪದಕ ವಿಜೇತ ತಂಡದ ಮೌಲ್ಯಯುತ ಸದಸ್ಯರಾಗಿದ್ದರು ಮತ್ತು ಕ್ರೀಡೆಯ ನಿಜವಾದ ಸೇವಕರಾಗಿದ್ದರು, ಅವರ ಕೊಡುಗೆಗಳು ಕ್ಷೇತ್ರವನ್ನು ಮೀರಿ ವಿಸ್ತರಿಸಿವೆ" ಎಂದು ಹಾಕಿ ಇಂಡಿಯಾ ಅಧ್ಯಕ್ಷ ದಿಲೀಪ್ ಟಿರ್ಕೆ ಒಲಿಂಪಿಯನ್ ಅವರ ನಿಧನಕ್ಕೆ ಸಂತಾಪ ಸೂಚಿಸಿದ್ದಾರೆ.

# ಇಂದು ಟಿಸಿಎಸ್ ವರ್ಲ್ಡ್ 10ಕೆ ಮ್ಯಾರಥಾನ್

**ಬೆಂಗಳೂರು, ಏ.25:** ಭಾನುವಾರ ಬೆಂಗಳೂರಲ್ಲಿ ಟಿಸಿಎಸ್ ವರ್ಲ್ಡ್ 10ಕೆ ಮ್ಯಾರಥಾನ್ ನಡೆಯುವ ಹಿನ್ನೆಲೆಯಲ್ಲಿ ಸಾರ್ವಜನಿಕರ ಸುಗಮ ಸಂಚಾರಕ್ಕಾಗಿ ನಗರದ ಪ್ರಮುಖ ರಸ್ತೆಗಳಲ್ಲಿ ಸಂಚಾರ ಮಾರ್ಗ ಬದಲಾವಣೆ ಮಾಡಲಾಗಿದೆ. ಭಾನುವಾರ ಬೆಳಿಗ್ಗೆ 5 ರಿಂದ 11 ಗಂಟೆಯವರೆಗೆ ನಡೆಯಲಿರುವ ಮ್ಯಾರಥಾನ್‌ನಲ್ಲಿ ಸುಮಾರು 30 ಸಾವಿರ ಜನರು ಭಾಗವಹಿಸಲಿದ್ದು, ಸಾರ್ವಜನಿಕರ ಸುಗಮ ಸಂಚಾರಕ್ಕಾಗಿ ಬೆಂಗಳೂರು ಸಂಚಾರ ಪೊಲೀಸರು ವಿಶೇಷ ಬಂದೋಬಸ್ತ್ ಏರ್ಪಡಿಸಿದ್ದಾರೆ.

**ಮ್ಯಾರಥಾನ್ ಸಂಚರಿಸುವ ರಸ್ತೆಯಲ್ಲಿ ಸಂಚಾರ ನಿರ್ಬಂಧ:** (ಬೆಳಗ್ಗೆ 5ರಿಂದ 11 ಗಂಟೆಯವರೆಗೆ): ಬೆಳಗ್ಗೆ 11 ಗಂಟೆಯ ವರೆಗೆ ಕೆಲ ರಸ್ತೆಗಳಲ್ಲಿ ಸಂಚಾರ ಬಂದ್ ಮಾಡಲಾಗಿದೆ. ವಿಧಾನಸೌಧದ ಕಡೆಗೆ ಯಾವುದೇ ವಾಹನಗಳ ಪ್ರವೇಶಕ್ಕೆ ಅವಕಾಶವಿಲ್ಲ. ಕಬ್ಬನ್ ರಸ್ತೆ: ಸಿಟಿಓ ಜಂಕ್ಷನ್‌ನಿಂದ ಮಣಿಪಾಲ್ ಸೆಂಟರ್‌ವರೆಗೆ ಎಲ್ಲಾ ವಾಹನಗಳ ಸಂಚಾರ ನಿರ್ಬಂಧ. **ಸೇಂಟ್ ಜಾನ್ಸ್ ರಸ್ತೆ:** ಡಿಕನ್ಸನ್ ರಸ್ತೆಯಿಂದ ವೀರಪಳ್ಳಿ ಸ್ಟ್ರೀಟ್‌ವರೆಗೆ ಸಂಚಾರ ನಿಷೇಧ. **ಕಾಮರಾಜ ರಸ್ತೆ:** ಕಬ್ಬನ್ ರಸ್ತೆಯಿಂದ ಡಿಕನ್ಸನ್ ಜಂಕ್ಷನ್‌ವರೆಗೆ ನಿರ್ಬಂಧ. ಇತರ ರಸ್ತೆಗಳು: ಡಿಕನ್ಸನ್ ರಸ್ತೆ, ಗಂಗಾಧರ ಚೆಟ್ಟಿ ರಸ್ತೆ,

TCS WORLD 10K BENGALURU

ಯುನಿಯನ್ ಸ್ಟ್ರೀಟ್, ಲೇಡಿ ಕರ್ಜನ್ ರಸ್ತೆ ಮತ್ತು ಭಾಸ್ಕರನ್ ರಸ್ತೆಗಳಲ್ಲಿ ಸಂಚಾರವನ್ನು ತಾತ್ಕಾಲಿಕವಾಗಿ ನಿರ್ಬಂಧಿಸಲಾಗಿದೆ.

**ಪ್ರಮುಖ ಪರ್ಯಾಯ ಮಾರ್ಗಗಳು:** ಕ್ವೀನ್ಸ್ ರಸ್ತೆಯಿಂದ ವಿಧಾನಸೌಧ ಕಡೆಗೆ: ಬಾಳೆಕುಂದ್ರಿ ಜಂಕ್ಷನ್ ಮೂಲಕ ಕನ್ನಿಂಗ್‌ಹ್ಯಾಂ ರಸ್ತೆ ಸೇರಿ, ಚಾಲುಕ್ಯ ಜಂಕ್ಷನ್ ಮಾರ್ಗವಾಗಿ ಕೆಂಪೇಗೌಡ ಬಸ್ ನಿಲ್ದಾಣದ ಕಡೆಗೆ ಚಲಿಸುವುದು. ಇನ್ಫೆಂಟ್ರಿ ರಸ್ತೆ: ಈ ರಸ್ತೆಯಲ್ಲಿ ಸಂಚರಿಸುವ ವಾಹನಗಳು ಬಾಳೆಕುಂದ್ರಿ ಜಂಕ್ಷನ್ ಕಡೆಗೆ ತೆರಳಬೇಕು. **ಎಂಟಿಸಿ ಬಸ್‌ಗಳು:** ಶಿವಾಜಿನಗರ ಬಸ್ ನಿಲ್ದಾಣದಿಂದ ಮೆಜೆಸ್ಟಿಕ್ ಮತ್ತು ಕೆ.ಆರ್.ಮಾರುಕಟ್ಟೆ ಕಡೆಗೆ ಹೋಗುವ ಬಸ್‌ಗಳು ಕಡ್ಡಾಯವಾಗಿ ವೆಂಕಟಸ್ವಾಮಿ ನಾಯ್ಡು ರಸ್ತೆ ಮತ್ತು ಕನ್ನಿಂಗ್‌ಹ್ಯಾಂ ರಸ್ತೆಯ ಮೂಲಕ ಸಂಚರಿಸಬೇಕು.ಎಂ.ಜಿ. ರಸ್ತೆಯಿಂದ ಹಲಸೂರು ಕಡೆಗೆ: ವೆಬ್ಸ್ ಜಂಕ್ಷನ್, ಟ್ರಿನಿಟಿ ಜಂಕ್ಷನ್ ಮೂಲಕ ಸ್ವಾಮಿ ವಿವೇಕಾನಂದ ರಸ್ತೆ ತಲುಪಿ ಹಳೇ ಮದ್ರಾಸ್ ರಸ್ತೆಯ ಕಡೆಗೆ ಸಂಚರಿಸಬಹುದು. ಹಳೇ ಮದ್ರಾಸ್ ರಸ್ತೆ ಮತ್ತು ಎಂ.ಜಿ ರಸ್ತೆಯ ಮೂಲಕ ಸಂಚರಿಸುವ ಭಾರಿ ವಾಹನಗಳು ಎನ್.ಜಿ.ಇ.ಎಫ್ ಜಂಕ್ಷನ್‌ನಲ್ಲಿ ಎಡ ತಿರುವು ಪಡೆದು ಸುರಂಜನ್‌ದಾಸ್ ರಸ್ತೆ ಮೂಲಕ ಚಲಿಸಬೇಕು.ವಾಹನ ನಿಲುಗಡೆ ನಿಷೇಧಿತ ಸ್ಥಳಗಳು:–ಡಾ.ಬಿ.ಆರ್.ಅಂಬೇಡ್ಕರ್ ರಸ್ತೆ, ರಾಜಭವನ ರಸ್ತೆ, ಕ್ವೀನ್ಸ್ ರಸ್ತೆ, ಕಬ್ಬನ್ ಪಾರ್ಕ್ ಸುತ್ತಮುತ್ತ, ಕಬ್ಬನ್ ರಸ್ತೆ, ಇನ್ಫೆಂಟ್ರಿ ರಸ್ತೆ, ಮ್ಯೂಸಿಯಂ ರಸ್ತೆ, ಕಸ್ತೂರ ಬಾ ರಸ್ತೆ ಮತ್ತು ಸೇಂಟ್ ಮಾರ್ಕ್ಸ್ ರಸ್ತೆಗಳಲ್ಲಿ ಪಾರ್ಕಿಂಗ್ ನಿಷೇಧಿಸಲಾಗಿದೆ.

**ವಾಹನ ನಿಲುಗಡೆಗೆ ಲಭ್ಯವಿರುವ ಸ್ಥಳಗಳು:** ಎಂ.ಎಸ್. ಬಿಲ್ಡಿಂಗ್ ಪಾರ್ಕಿಂಗ್,ಫ್ರೀಡಂ ಪಾರ್ಕ್ ಎಂ.ಎಲ್.ಸಿ.ಪಿ ಶಿವಾಜಿನಗರ ಬಸ್ ನಿಲ್ದಾಣ ಮತ್ತು ಯು.ಬಿ.ಸಿಟಿ, ಜ್ಞಾನಜ್ಯೋತಿ ಸಭಾಂಗಣ ಮತ್ತು ಶಾಸಕರ ಭವನದ ಆವರಣ ನೆಹರೂ ಪ್ಲಾನೆಟೋರಿಯಂ ಮತ್ತು ಗರುಡಾ ಮಾಲ್ **ಮೆಟ್ರೋ ಸೇವೆ:** ಮ್ಯಾರಥಾನ್ ಹಿನ್ನೆಲೆಯಲ್ಲಿ ನಾಳೆ ಬೆಳಗ್ಗೆ 3:30 ರಿಂದಲೇ ನಮ್ಮ ಮೆಟ್ರೋ ಸೇವೆ ಆರಂಭವಾಗಲಿದೆ. ಸಾರ್ವಜನಿಕರು ಈ ಸೇವೆಯ ಸದ್ಬಳಕೆ ಮಾಡಿಕೊಳ್ಳಲು ಸಂಚಾರ ಪೊಲೀಸ್ ಇಲಾಖೆಯ ವತಿಯಿಂದ ಕೋರಲಾಗಿದೆ.

# ಐಪಿಎಲ್ ಇತಿಹಾಸದಲ್ಲಿ ಅತಿದೊಡ್ಡ ಗುರಿ ಬೆನ್ನಟ್ಟಿ ಗೆದ್ದ ಪಂಜಾಬ್ ಕಿಂಗ್ಸ್

**ನವದೆಹಲಿ,ಏ.25:** ಡೆಲ್ಲಿ ಕ್ಯಾಪಿಟಲ್ಸ್ ಹಾಗೂ ಪಂಜಾಬ್ ಕಿಂಗ್ಸ್ ನಡುವೆ ನಡೆದ ಐಪಿಎಲ್ 35ನೇ ಪಂದ್ಯ ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾಯಿತು. ಐಪಿಎಲ್‌ನಲ್ಲಿ ಇದುವರೆಗೆ ಯಾವ ತಂಡಕ್ಕೂ ಸಾಧ್ಯವಾಗದ ದಾಖಲೆಯೊಂದು ಪಂಜಾಬ್ ಕಿಂಗ್ಸ್ ತಂಡದ ಪಾಲಾಯಿತು. ಉಭಯ ತಂಡಗಳಿಂದ ಬೌಂಡರಿ ಮತ್ತು ಸಿಕ್ಸರ್‌ಗಳ ಮಳೆಯೇ ಹರಿದ ಈ ಪಂದ್ಯವನ್ನು ಅಂತಿಮವಾಗಿ ಗೆದ್ದುಕೊಳ್ಳುವಲ್ಲಿ ಪಂಜಾಬ್ ಯಶಸ್ವಿಯಾಯಿತು. ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಡೆಲ್ಲಿ 265 ರನ್ ಕಲೆಹಾಕಿತು. ಈ ಗುರಿ ಬೆನ್ನಟ್ಟಿದ ಪಂಜಾಬ್ ಇನ್ನು 7 ಎಸೆತ ಬಾಕಿ ಇರುವಂತೆಯೇ ಗೆಲುವಿನ ನಗೆ ಬೀರಿತು.



### ಡೆಲ್ಲಿ ಪಾಲಿಗೆ ವಿಲನ್ ಆದ ಕರುಣ್

ಈ ಮೂಲಕ ಪಂಜಾಬ್ ಐಪಿಎಲ್ ಇತಿಹಾಸದಲ್ಲಿ ಇಷ್ಟು ದೊಡ್ಡ ಮೊತ್ತವನ್ನು ಬೆನ್ನಟ್ಟಿದ ತಂಡವೆಂಬ ದಾಖಲೆ ಬರೆಯಿತು. ಈ ದಾಖಲೆಯ ಗುರಿ ಬೆನ್ನಟ್ಟಿದ ಪಂಜಾಬ್ ಕಿಂಗ್ಸ್ ಪವರ್‌ಪ್ಲೇನಲ್ಲಿಯೇ ಅರ್ಧದಷ್ಟು ಪಂದ್ಯವನ್ನು ಗೆದ್ದುಕೊಂಡಿತು. ಉಳಿದಂತೆ ಕರುಣ್ ನಾಯರ್ ಕೈಚೆಲ್ಲಿದ ಎರಡು ಸುಲಭ ಕ್ಯಾಚ್‌ಗಳಿಂದ ಪಂಜಾಬ್ ಕಿಂಗ್ಸ್ ಗೆಲುವು ದಾಖಲಿಸಿತು. ವಾಸ್ತವವಾಗಿ ನಿರ್ಣಾಯಕ ಹಂತದಲ್ಲಿ ಕರುಣ್ ನಾಯರ್, ಪಂಜಾಬ್ ನಾಯಕ ಶ್ರೇಯಸ್ ಅಯ್ಯರ್ ಅವರ ಎರಡು ಸುಲಭ ಕ್ಯಾಚ್‌ಗಳನ್ನು ಕೈಚೆಲ್ಲಿದರು. ಈ ಜೀವದಾನಗಳ ಲಾಭ ಪಡೆದ ಅಯ್ಯರ್ ತಂಡವನ್ನು ಗೆಲುವಿನ ದಡ ಮುಟ್ಟಿಸಿದರು.

### ರಾಹುಲ್ ದಾಖಲೆಯ ಶತಕ

ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿ ಡೆಲ್ಲಿ ಕ್ಯಾಪಿಟಲ್ಸ್ ಕೇವಲ 28 ರನ್‌ಗಳಿಗೆ ಮೊದಲ ವಿಕೆಟ್ ಕಳೆದುಕೊಂಡಿತು. ಪಾಥುಮ್ ನಿಸ್ಸಂಕ 11 ರನ್‌ಗಳಿಗೆ ಔಟಾದರು. ಆ ನಂತರ, ಎರಡನೇ ವಿಕೆಟ್‌ಗೆ ಪಂಜಾಬ್ ಬರೋಬ್ಬರಿ 220 ರನ್‌ಗಳವರೆಗೆ ಕಾಯಬೇಕಾಯಿತು. ಏಕೆಂದರೆ ಕೆಎಲ್ ರಾಹುಲ್ ಮತ್ತು ನಿತೀಶ್ ರಾಣಾ ಪಂಜಾಬ್ ಕಿಂಗ್ಸ್ ಬೌಲರ್‌ಗಳ ವಿರುದ್ಧ ಅಬ್ಬರಿಸಿ ದಾಖಲೆಯ ಜೊತೆಯಾಟ ನಡೆಸಿದರು. ನಿತೀಶ್ ರಾಣಾ 44 ಎಸೆತಗಳಲ್ಲಿ 11 ಬೌಂಡರಿ ಮತ್ತು 4 ಸಿಕ್ಸರ್‌ಗಳ ಸಹಾಯದಿಂದ 91 ರನ್ ಗಳಿಸಿ ಔಟಾದರೆ, ಕೆಎಲ್ ರಾಹುಲ್ 67 ಎಸೆತಗಳಲ್ಲಿ 16 ಬೌಂಡರಿ ಮತ್ತು 9 ಸಿಕ್ಸರ್‌ಗಳೊಂದಿಗೆ ಅಜೇಯ 152 ರನ್ ಗಳಿಸಿದರು. ಇವರಿಬ್ಬರ ಆಟದಿಂದಾಗಿ ಡೆಲ್ಲಿ ದಾಖಲೆಯ ಮೊತ್ತ ಪೇರಿಸಿತು.

### ಪಂಜಾಬ್‌ಗೆ ದಾಖಲೆಯ ಜಯ

265 ರನ್‌ಗಳನ್ನು ಬೆನ್ನಟ್ಟಿದ ಪಂಜಾಬ್‌ಗೆ ಪ್ರಿಯಾಂಶ್ ಆರ್ಯ ಮತ್ತು ಪ್ರಭ್‌ಸಿಮ್ರಾನ್ ಸಿಂಗ್ ಸ್ಫೋಟಕ ಆರಂಭ ಒದಗಿಸಿದರು. ಪವರ್‌ಪ್ಲೇನಲ್ಲಿಯೇ ಈ ಜೋಡಿ ಡೆಲ್ಲಿ ಕ್ಯಾಪಿಟಲ್ಸ್ ತಂಡವನ್ನು ಪಂದ್ಯದಿಂದ ಹೊರಹಾಕಿದರು. ಮೊದಲ 6 ಓವರ್‌ಗಳಲ್ಲಿ ವಿಕೆಟ್ ಕಳೆದುಕೊಳ್ಳದೆ ಈ ಜೋಡಿ 116 ರನ್ ಕಲೆಹಾಕಿತು. ಐಪಿಎಲ್ ಟೂರ್ನಿಯಲ್ಲಿ ಪವರ್‌ಪ್ಲೇನಲ್ಲಿ ಇದು ಎರಡನೇ ಅತ್ಯಧಿಕ ಸ್ಕೋರ್ ಆಗಿತ್ತು. ತಂಡ 126 ರನ್‌ಗಳಾಗಿದ್ದಾಗ, ಪ್ರಿಯಾಂಶ್ ಆರ್ಯ ರೂಪದಲ್ಲಿ ಮೊದಲ ಹೊಡೆತ ಬಿದ್ದಿತು.

ಪ್ರಿಯಾಂಶ್ ಆರ್ಯ 43 ರನ್‌ಗಳಿಗೆ ಔಟಾದರು. ನಂತರ ಪ್ರಭಾಂಶ್ ಸಿಂಗ್ 76 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. ಕೂಪರ್ ಕೊನೊಲಿ ಕೂಡ 17 ರನ್‌ಗಳಿಗೆ ಔಟಾದರೆ, ನೆಹಲ್ ವದೇರಾ ಇನ್ನಿಂಗ್ಸ್ ಕೂಡ 15 ಎಸೆತಗಳಲ್ಲಿ 25 ರನ್‌ಗಳಿಗೆ ಅಂತ್ಯವಾಯಿತು. ಈ ವಿಕೆಟ್‌ನಿಂದ ಪಂದ್ಯವು ದೆಹಲಿಯ ಪರವಾಗಿ ವಾಲಲು ಪ್ರಾರಂಭಿಸಿತು. ಆದರೆ ಕರುಣ್ ನಾಯರ್ ಶ್ರೇಯಸ್ ಅಯ್ಯರ್ ಅವರ ಎರಡು ಸುಲಭ ಕ್ಯಾಚ್‌ಗಳನ್ನು ಕೈಬಿಟ್ಟಿದ್ದು, ಪಂದ್ಯಕ್ಕೆ ತಿರುವು ನೀಡಿತು.

# ಆರ್‌ಆರ್ ವಿರುದ್ಧ ಎಚ್‌ಎಸ್‌ಆರ್‌ಗೆ ಗೆಲುವು

**ಜೈಪುರ,ಏ.25:** ಐಪಿಎಲ್ 36ನೇ ಪಂದ್ಯದಲ್ಲಿ, ರಾಜಸ್ಥಾನ್ ರಾಯಲ್ಸ್ ಮತ್ತು ಸನ್‌ರೈಸರ್ಸ್ ಹೈದರಾಬಾದ್ ಪರಸ್ಪರ ಮುಖಾಮುಖಿಯಾಗಿದ್ದವು. ಜೈಪುರದ ಸವಾಯಿ ಮಾನ್ಸಿಂಗ್ ಕ್ರೀಡಾಂಗಣದಲ್ಲಿ ನಡೆದ ಈ ಪಂದ್ಯದಲ್ಲಿ ಆತಿಥೇಯ ರಾಜಸ್ಥಾನ್ ತಂಡವನ್ನು ಮಣಿಸಿದ ಸನ್‌ರೈಸರ್ಸ್ ತಂಡ ಈ ಲೀಗ್‌ನ 5ನೇ ಗೆಲುವು ದಾಖಲಿಸಿತು. ಈ ಗೆಲುವಿನೊಂದಿಗೆ ಪಾಯಿಂಟ್ ಪಟ್ಟಿಯಲ್ಲಿ 3ನೇ ಸ್ಥಾನವನ್ನು ಅಲಂಕರಿಸಿತು. ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ರಾಜಸ್ಥಾನ್ ತಂಡ ವೈಭವ್ ಸೂರ್ಯವಂಶಿ ಅವರ ದಾಖಲೆಯ ಶತಕದಿಂದ 229 ರನ್ ಕಲೆಹಾಕಿತು. ಈ ಗುರಿ ಬೆನ್ನಟ್ಟಿದ ಸನ್‌ರೈಸರ್ಸ್ ನಾಯಕ ಇಶಾನ್ ಕಿಶನ್ ಹಾಗೂ ಅಭಿಷೇಕ್ ಶರ್ಮಾ ಅವರ ಅರ್ಧಶತಕದ ನೆರವಿನಿಂದ 19ನೇ ಓವರ್‌ನಲ್ಲಿ ಗೆಲುವು ಸಾಧಿಸಿತು.





### ವೈಭವ್ ಸ್ಫೋಟಕ ಶತಕ

ಮೊದಲು ಬ್ಯಾಟಿಂಗ್ ಮಾಡಿದ ರಾಜಸ್ಥಾನ್ ಪರ ಆರಂಭಿಕ ಜೋಡಿಯಾದ ವೈಭವ್ ಸೂರ್ಯವಂಶಿ ಮತ್ತು ಯಶಸ್ವಿ ಜೈಸ್ವಾಲ್ ಮೊದಲ ವಿಕೆಟ್‌ಗೆ 40 ರನ್‌ಗಳ ಜೊತೆಯಾಟ ನೀಡಿದರು. ಯಶಸ್ವಿ 10 ರನ್‌ಗಳಿಗೆ ಔಟಾದರೆ, ನಂತರ ಬಂದ ಧ್ರುವ್ ಜುರೇಲ್ ಹಾಗೂ ವೈಭವ್ ಎರಡನೇ ವಿಕೆಟ್‌ಗೆ ಕೇವಲ 62 ಎಸೆತಗಳಲ್ಲಿ 112 ರನ್‌ಗಳ ಪಾಲುದಾರಿಕೆಯನ್ನು ನೀಡಿದರು. ಧ್ರುವ್ 35 ಎಸೆತಗಳಲ್ಲಿ 51 ರನ್ ಗಳಿಸಿ ಔಟಾದರು. ಇತ್ತ ತನ್ನ ಸಿಡಿಲಬ್ಬರದ ಬ್ಯಾಟಿಂಗ್ ಮುಂದುವರಿಸಿದ ವೈಭವ್ ಐಪಿಎಲ್ ವೃತ್ತಿಜೀವನದಲ್ಲಿ ತಮ್ಮ ಎರಡನೇ ಶತಕ ಮತ್ತು ಈ ಆವೃತ್ತಿಯ ಮೊದಲ ಶತಕ ಬಾರಿಸಿದರು.

### 229 ರನ್ ದಾಖಲಿಸಿದ ರಾಜಸ್ಥಾನ್

ವೈಭವ್ ಕೇವಲ 37 ಎಸೆತಗಳಲ್ಲಿ 12 ಸಿಕ್ಸರ್ ಮತ್ತು 5 ಬೌಂಡರಿಗಳ ಸಹಾಯದಿಂದ 103 ರನ್ ಗಳಿಸಿ ಔಟಾದರು. ಕೊನೆಯಲ್ಲಿ ಡೊನೊವನ್ ಫೆರೇರಾ 33 ರನ್ ಗಳಿಸಿದರೆ, ಶಿಮ್ರಾನ್ ಹೆಟ್ಮೆಯರ್ 11 ರನ್ ಗಳಿಸಿದರು. ನಾಯಕ ರಿಯಾನ್ ಪರಾಗ್ 7 ರನ್ ಗಳಿಸಿ ಔಟಾದರೆ, ರವೀಂದ್ರ ಜಡೇಜಾ 4 ರನ್ ಗಳಿಸಿ ಅಜೇಯರಾಗಿ ಮರಳಿದರು. ಹೈದರಾಬಾದ್ ಪರ ಇಶಾನ್ ಮಾಲಿಂಗ 2, ಪ್ರುಫಲ್ ಹಿಂಗೆ, ಪ್ಯಾಟ್ ಕಮ್ಮಿನ್ಸ್, ಸಕೀಬ್ ಹುಸೇನ್ ಮತ್ತು ನಿತೀಶ್ ಕುಮಾರ್ ರೆಡ್ಡಿ ತಲಾ 1 ವಿಕೆಟ್ ಪಡೆದರು.

### ಸನ್‌ರೈಸರ್ಸ್‌ಗೆ ಸುಲಭ ಜಯ

ಈ ಗುರಿ ಬೆನ್ನಟ್ಟಿದ ಸನ್‌ರೈಸರ್ಸ್‌ಗೂ ಉತ್ತಮ ಆರಂಭ ಸಿಗಲಿಲ್ಲ. ಟ್ರಾವಿಸ್ ಹೆಡ್ ಮೊದಲ ಓವರ್‌ನಲ್ಲೇ ವಿಕೆಟ್ ಒಪ್ಪಿಸಿದರು. ಆ ಬಳಿಕ ಜೊತೆಯಾದ ಇಶಾನ್ ಕಿಶನ್ ಹಾಗೂ ಅಭಿಷೇಕ್ ಶರ್ಮಾ ಶತಕದ ಜೊತೆಯಾಟ ನಡೆಸಿ ತಂಡವನ್ನು ಸಂಕಷ್ಟದಿಂದ ಪಾರು ಮಾಡಿದರು. ಇವರಿಬ್ಬರು 131 ರನ್‌ಗಳ ಜೊತೆಯಾಟ ನಡೆಸಿ ಗೆಲುವನ್ನು ಖಚಿತಪಡಿಸಿದರು. ಅಭಿಷೇಕ್ 57 ರನ್ ಬಾರಿಸಿ ಔಟಾದರೆ, ಕಿಶನ್ 74 ರನ್‌ಗಳಿಗೆ ವಿಕೆಟ್ ಒಪ್ಪಿಸಿದರು. ಆ ನಂತರ ನಿತೀಶ್ ಹಾಗೂ ಕ್ಲಾಸೆನ್ ಜೊತೆಯಾಟ ನಡೆಸಿ ತಂಡವನ್ನು ಗೆಲುವಿನ ದಡ ಮುಟ್ಟಿಸುವಲ್ಲಿ ನೆರವಾದರು.